ಬೆಂಗಳೂರು ಸಂಪುಟ: 16 ಸಂಚಿಕೆ: 25 ಪುಟ: 06 ಸೋಮವಾರ 16-12-2024 Mail: mussanje2010@gmail.com ₹ 3

# ಮುಸ್ಸಂಜೆ

ಪ್ರಭಾವಶಾಲಿ ಕನ್ನಡ ಸಂಜೆ ದಿನ ಪತ್ರಿಕೆ

Managing Editor: N.Veerendra Babu (MBA, LLB) Executive Editor: L P Babu Honouraray Editor: Venkatesh www.mussanjenews.com

## ನಾವೂ ಈಗ ಡಿಜಿಟಲೀಕರಣಗೊಂಡಿದ್ದೇವೆ...

ಪ್ರಿಯ ಓದುಗರೇ.....

ತಮ್ಮೆಲ್ಲರ ಒತ್ತಾಸೆಯ ಮೇರೆಗೆ ನಿಮ್ಮ 'ಮುಸ್ಸಂಜೆ' ಸಂಜೆ ದಿನ ಪತ್ರಿಕೆ ಈಗ ಡಿಜಿಟಲೀಕರಣಗೊಂಡಿದೆ. ಹದಿನೈದು ವಸಂತಗಳನ್ನು ಯಶಸ್ವಿಯಾಗಿ ಪೂರೈಸಿ 16ನೇ ವಸಂತಕ್ಕೆ ಕಾಲಿಟ್ಟ ಈ ಸುಸಂದರ್ಭದಲ್ಲಿ ರಾಜ್ಯದಲ್ಲೇ ಅಲ್ಲದೇ ದೇಶದ ವಿವಿಧೆಡೆಗಳಿಂದ ಸಹಕಾರ ದೊರೆತ ಹಿನ್ನೆಲೆಯಲ್ಲಿ ಪತ್ರಿಕೆಯನ್ನು ಡಿಜಿಟಲೀಕರಣಗೊಳಿಸಿ ನೂತನ ವೆಬ್‌ಸೈಟ್ ಲಾಂಚ್ ಮಾಡುವ ಮೂಲಕ onlineನಲ್ಲಿ ಪತ್ರಿಕೆ ವೀಕ್ಷಿಸಲು ಅವಕಾಶ ಕಲ್ಪಿಸಿದ್ದೇವೆ. ಈಗ ಪತ್ರಿಕೆಯನ್ನು ನೈಜ ಸುದ್ದಿಯೊಂದಿಗೆ ಹೊಸ ರೂಪದಲ್ಲಿ ನಿಮ್ಮ ಮುಂದಿಡುವ ಪ್ರಯತ್ನ ಮಾಡಿದ್ದೇವೆ. ನಮ್ಮ ಈ ಪ್ರಯತ್ನಕ್ಕೆ ಓದುಗರು, ಚಂದಾದಾರರೂ, ಹಾಗೂ ಜಾಹೀರಾತುದಾರರಾದ ತಮ್ಮ ಪ್ರೋತ್ಸಾಹವನ್ನು ಎಂದಿನಂತೆ ನಿರೀಕ್ಷಿಸುತ್ತೇವೆ...

www.mussanjenews.com

- ಇಂತಿ ಸಂಪಾದಕ

## ಸದನದಲ್ಲಿ ಕಾಂಗ್ರೆಸ್ ನಾಯಕರಿಗೆ ತಿರುಗೇಟು ನೀಡಿದ ಬಿಜೆಪಿ ರಾಜ್ಯಾಧ್ಯಕ್ಷ

# ಸಿಬಿಐ ತನಿಖೆಗೆ ವಹಿಸಿ

## ನಾನು ಇಲ್ಲದಿದ್ದಾಗ ನನ್ನ ವಿರುದ್ಧ ಆರೋಪ: ವಿಜಯೇಂದ್ರ ಗರಂ

**ಬೆಳಗಾವಿ:** ತಮ್ಮ ವಿರುದ್ಧ 150 ಕೋಟಿ ಆಮಿಷ ಆರೋಪ ಮಾಡಿರುವ ಕಾಂಗ್ರೆಸ್ ನಾಯಕರಿಗೆ ಇಂದು ಸದನದಲ್ಲಿ ತಿರುಗೇಟು ನೀಡಿದ ಬಿಜೆಪಿ ರಾಜ್ಯಾಧ್ಯಕ್ಷ ಬಿವೈ ವಿಜಯೇಂದ್ರ, ಸಿಎಂ ಸಿದ್ದರಾಮಯ್ಯ ವಿರುದ್ದದ ಮುಡಾ ಕೇಸ್ ಅನ್ನೂ ಸಿಬಿಐ ತನಿಖೆಗೆ ನೀಡಲಿ ಎಂದು ಆಗ್ರಹಿಸಿದರು.

ಇಂದು ಚಳಿಗಾಲದ ಅಧಿವೇಶನದ ವಿಧಾನಸಭೆ ಕಲಾಪದಲ್ಲಿ ಬಿಜೆಪಿ ರಾಜ್ಯಾಧ್ಯಕ್ಷ ಬಿವೈ ವಿಜಯೇಂದ್ರ ವಿರುದ್ದ 150 ಕೋಟಿ ರೂ. ಆಮಿಷ ಒಡ್ಡಿದ ಆರೋಪ ಕುರಿತು ಚರ್ಚೆಗೆ ಬಂತು. ಸದನದಲ್ಲಿ ಮಾತನಾಡಿದ ಬಿವೈ ವಿಜಯೇಂದ್ರ, ಸದನದಲ್ಲಿ ನಾನು ಇಲ್ಲದಿದ್ದಾಗ ನನ್ನ ವಿರುದ್ದ ಆರೋಪ ಮಾಡಿದ್ದಾರೆ. ಸಿಬಿಐ ತನಿಖೆ ಮಾಡಿಸಲಿ ಎಂದು ಸಿಎಂ ಹೇಳಿದ್ದಾರೆ. ಸಿಎಂ ಸಿದ್ದರಾಮಯ್ಯಗೆ ಕೇಂದ್ರ ತನಿಖೆ ಸಂಸ್ಥೆ ಮೇಲೆ ವಿಶ್ವಾಸ ಬಂದಿರೋದು ಸಂತಸ . ಅನ್ವರ್ ಮಾಣಿಪ್ಪಾಡಿ ಹೇಳಿಕೆಯೂ ಬಗ್ಗೆಯೂ ತನಿಖೆಯಾಗಲಿ ಎಂದರು.


ಸಿಎಂ ಸಿದ್ದರಾಮಯ್ಯ ವಿರುದ್ದ ಸ್ನೇಹಮಯಿ ಕೃಷ್ಣ ಗಂಭೀರ ಆರೋಪ ಮಾಡಿದ್ದಾರೆ. ಹೀಗಾಗಿ ಮುಡಾ ಹಗರಣವನ್ನೂ ಸಿಬಿಐ ತನಿಖೆಗೆ ನೀಡಲಿ. ಸಿಬಿಐಗೆ ನೀಡಲು ಸಿಎಂಗೆ ಪರಮಾಧಿಕಾರವಿದೆ. ತಪ್ಪು ಮಾಡದಿದ್ದರೇ ಸಿಎಂ ಸಿದ್ದರಾಮಯ್ಯ 14 ಸೈಟ್ ಯಾಕೆ ವಾಪಸ್ ಕೊಟ್ಟರು

ವಕ್ಫ್ ವಿಚಾರಕ್ಕೆ ಸಂಬಂಧಿಸಿದಂತೆ 150 ರೂ. ಕೋಟಿ ಆಮಿಷ ಆರೋಪ, ಪ್ರಿಯಾಂಕ್ ಖರ್ಗೆ ಸಭ್ಯಸ್ಥನಂತೆ ಮಾತನಾಡುತ್ತಾರೆ ಸಚಿವರಾಗಿ ಜವಾಬ್ದಾರಿಯುತವಾಗಿ ಮಾತನಾಡಬೇಕು. ವಕ್ಫ್ ಬೋರ್ಡ್ ಗೂ ವಿಜಯೇಂದ್ರಗೂ ಏನು ಸಂಬಂಧ..? ಎಂದು ಪ್ರಶ್ನಿಸಿದರು.

ವಿಧಾನಸಭೆಯಲ್ಲಿ ಶ್ರದ್ಧಾಂಜಲಿ ಕಲಾಪ ಮುಗಿಯುತ್ತಿದ್ದಂತೆಯೇ ಸಭಾಧ್ಯಕ್ಷ ಯು.ಟಿ. ಖಾದರ್ ಉತ್ತರ ಕರ್ನಾಟಕಕ್ಕೆ ಸಂಬಂಧಿಸಿದ ಚರ್ಚೆ ಕೈಗೆತ್ತಿಕೊಳ್ಳಲು ಮುಂದಾದಾಗ ಎದ್ದುನಿಂತ ವಿಪಕ್ಷ ನಾಯಕ ಆರ್. ಅಶೋಕ್ ಉತ್ತರ ಕರ್ನಾಟಕದ ಬಗ್ಗೆ ಕಲಾಪವನ್ನು ಕೈಗೆತ್ತಿಕೊಳ್ಳಿ, ನಮ್ಮದೇನು ಅಭ್ಯಂತರವಿಲ್ಲ. ಆದರೆ ಕಳೆದ ಶುಕ್ರವಾರ ಸಚಿವ ಪ್ರಿಯಾಂಕ ಖರ್ಗೆಯವರು ನಮ್ಮ ರಾಜ್ಯಾಧ್ಯಕ್ಷರಾದ ವಿಜಯೇಂದ್ರರವರ 150 ಕೋಟಿ ರೂ. ಆಮಿಷವೊಡ್ಡಿದ್ದಾರೆ ಎಂದು ಆರೋಪ ಮಾಡಿದ್ದಾರೆ. ಈ ಬಗ್ಗೆ ಸ್ಪಷ್ಟನೆ ನೀಡಲು ಅವಕಾಶ ಕೊಡಿ ಎಂದು ಹೇಳಿದರು.

ಈ ಹಂತದಲ್ಲಿ ಮಧ್ಯೆ ಪ್ರವೇಶಿಸಿ ಮಾತನಾಡಿದ ಪ್ರಿಯಾಂಕ ಖರ್ಗೆ ಅವರು, ನಾನು ವಿಜಯೇಂದ್ರ ವಿರುದ್ಧ ಆರೋಪ ಮಾಡಿಲ್ಲ. ಪತ್ರಿಕಾ ವರದಿಯನ್ನು ಉಲ್ಲೇಖಿಸಿದ್ದೇನೆ ಅಷ್ಟೇ ಎಂದು ತಮ್ಮ ಹೇಳಿಕೆಯನ್ನು ಸಮರ್ಥಿಸಿಕೊಂಡರು.

ಆಗ ವಿರೋಧ ಪಕ್ಷದ ಸದಸ್ಯರೆಲ್ಲಾ ಒಮ್ಮೆಗೆ ಎದ್ದುನಿಂತು



ಪತ್ರಿಕಾ ವರದಿಯ ಮೇಲೆ ನೋಟೀಸ್ ನೀಡದೆ ಮಾತನಾಡುವುದು ಎಷ್ಟು ಸರಿ. ನೀವು ಮಾಡಿರುವ ಆರೋಪ ಸರಿಯಲ್ಲ ಎಂದು ಪ್ರಿಯಾಂಕ ಖರ್ಗೆ ವಿರುದ್ಧ ಮುಗಿ ಬಿದ್ದರು.

ಆಗ ಸಭಾಧ್ಯಕ್ಷ ಯು.ಟಿ. ಖಾದರ್ ಅವರು ಮಧ್ಯಾಹ್ನದ ನಂತರ ಈ ಬಗ್ಗೆ ಮಾತನಾಡಲು ವಿಜಯೇಂದ್ರರವರಿಗೆ ಅವಕಾಶ ನೀಡುತ್ತೇನೆ ಎಂದಾಗ ಇದಕ್ಕೆ ಒಪ್ಪದ ವಿಪಕ್ಷ ನಾಯಕರು ಹೆಚ್ಚು ಕಾಲ ಚರ್ಚೆಗೆ ಅವಕಾಶ ತೆಗೆದುಕೊಳ್ಳುವುದಿಲ್ಲ. ಚರ್ಚೆಗೆ ಅವಕಾಶ ನೀಡಿ ಎಂದಾಗ ಅದಕ್ಕೆ ಸಭಾಧ್ಯಕ್ಷರು ಸಮ್ಮತಿಸಿದರು.

ಸಭಾಧ್ಯಕ್ಷರ ಅನುಮತಿ ನಂತರ ಮಾತನಾಡಿದ ಬಿಜೆಪಿಯ ವಿಜಯೇಂದ್ರ ಅವರು ಮೊನ್ನೆ ದಿನ ಸದನ ನಡೆಯುವಾಗ ನನ್ನ ಅನುಪಸ್ಥಿತಿಯಲ್ಲಿ ಸಚಿವ ಪ್ರಿಯಾಂಕ ಖರ್ಗೆಯವರು 150 ಕೋಟಿ ರೂಪಾಯಿ ಆಮಿಷವೊಡ್ಡಿರುವ ಗುರುತರ ಆರೋಪ ಮಾಡಿದ್ದಾರೆ. ಮುಖ್ಯಮಂತ್ರಿ ಸಿದ್ದರಾಮಯ್ಯನವರು ಸಹ ಅದನ್ನು ಪುನರುಚ್ಚರಿಸಿದ್ದಾರೆ.

ಸರ್ಕಾರ ಬಂದಾಗಿನಿಂದ ಜನಕಲ್ಯಾಣ ಬಿಟ್ಟು, ಬೇರೆ ಕೆಲಸಗಳಲ್ಲೇ ನಿರತವಾಗಿದೆ ಎಂದಾಗ ಸಭಾಧ್ಯಕ್ಷರು ವಿಷಯಾಂತರ ಬೇಡ, ಸ್ಪಷ್ಟನೆ ನೀಡಿ ಎಂದು ವಿಜಯೇಂದ್ರರವರಿಗೆ ಕಿವಿಮಾತು ಹೇಳಿದಾಗ, ಮತ್ತೆ ಮಾತು ಮುಂದುವರೆಸಿದ ವಿಜಯೇಂದ್ರ ಅವರು ಹಿಂದಿನ ಅಲ್ಪಸಂಖ್ಯಾತರ ಆಯೋಗದ ಅಧ್ಯಕ್ಷರಾದ ಅನ್ವರ್ ಮಾನಪ್ಪಾಡಿ ರವರು ವಕ್ಫ್‌ನಲ್ಲಿ ಅಂದಿನ ಕಾಂಗ್ರೆಸ್ ನಾಯಕರು ಲೂಟಿ ಹೊಡೆದಿದ್ದರ ಬಗ್ಗೆ ವರದಿ ನೀಡಿದ್ದರು. ಈ ವರದಿ ಆಧರಿಸಿ ಉಪಲೋಕಾಯುಕ್ತರ ತನಿಖೆಯೂ ನಡೆದಿತ್ತು. ಉಪಲೋಕಾಯುಕ್ತರು ತನಿಖೆ ನಡೆಸುವಂತೆ 2016 ರಲ್ಲೇ ಸಿದ್ದರಾಮಯ್ಯನವರ ಸರ್ಕಾರದ ಇದ್ದಾಗ ಶಿಫಾರಸ್ಸು ಮಾಡಿದ್ದರು. 3-3-2016 ರಂದು ನಡೆದ ಸಚಿವ ಸಂಪುಟ ಸಭೆಯಲ್ಲಿ ಈ ವರದಿಯನ್ನು ತಿರಸ್ಕರಿಸಲಾಗಿತ್ತು. ಈಗ ಈ ಬಗ್ಗೆ ಸಿಬಿಐ ತನಿಖೆ ನಡೆಸಲಿ ಎಂದು ಮುಖ್ಯಮಂತ್ರಿಗಳು ಹೇಳಿರುವುದು ಸಂತೋಷ.

ಮುಖ್ಯಮಂತ್ರಿ ಸಿದ್ದರಾಮಯ್ಯನವರಿಗೆ ಈಗಲಾದರೂ ಸಿಬಿಐ ಮೇಲೆ ವಿಶ್ವಾಸ ಬಂದಿದೆಯಲ್ಲಾ ಎಂದು ವಿಜಯೇಂದ್ರ ನಯವಾಗಿಯೇ ಚಾಟಿ ಬೀಸಿದರು.

ಮುಖ್ಯಮಂತ್ರಿ ಸಿದ್ದರಾಮಯ್ಯನವರು ನನ್ನ ಮೇಲೆ 150 ಕೋಟಿ ರೂ. ಆರೋಪ, ಮಾಣಿಪ್ಪಾಡಿ ವರದಿ, ಹಾಗೆಯೇ ಮುಡಾ ಹಗರಣ ಎಲ್ಲದರ ಬಗ್ಗೆಯೂ ಸಿಬಿಐ ತನಿಖೆ ನಡೆಸಲಿ. ಇದು ನನ್ನ ಸವಾಲು ಎಂದು ಏರು ಧ್ವನಿಯಲ್ಲಿ ಹೇಳಿದರು.

ವಿಜಯೇಂದ್ರರವರು ಮುಡಾ ಹಗರಣದ ವಿಚಾರ ಎತ್ತುತ್ತಿದ್ದಂತೆಯೇ ಆಡಳಿತ ಪಕ್ಷದ ಕಡೆಯಿಂದ ವಿರೋಧ ವ್ಯಕ್ತವಾಗಿ ಸಚಿವರಾದ ಕೃಷ್ಣಬೈರೇಗೌಡ, ಪುಟ 2



ಕೇಂದ್ರ ಸಚಿವ ಹೆಚ್.ಡಿ.ಕುಮಾರಸ್ವಾಮಿ ಅವರು ತಮ್ಮ ಜನ್ಮ ದಿನದ ಪ್ರಯುಕ್ತ ನವದೆಹಲಿಯ ಹೌಜ್‌ಕೌಸ್‌ನಲ್ಲಿರುವ ಶಿವನ ಸನ್ನಿಧಾನದಲ್ಲಿ ಪೂಜೆ ಸಲ್ಲಿಸಿದರು.

## ಬಿಜೆಪಿಯವರು ಧಮ್ಕಿ ಹಾಕಿರಬಹುದು

**ಬೆಳಗಾವಿ:** "ಬಿಜೆಪಿಯವರು ಧಮ್ಕಿ ಹಾಕಿರಬಹುದು. ಅದಕ್ಕೆ ಅನ್ವರ್ ಮಾಣಿಪ್ಪಾಡಿ ಉಲ್ಟಾ ಹೊಡೆದಿರಬಹುದು" ಎಂದು ಗೃಹ ಸಚಿವ ಡಾ.ಜಿ. ಪರಮೇಶ್ವರ್ ಹೇಳಿದರು.

ಸುವರ್ಣಸೌಧದಲ್ಲಿ ಮಾತನಾಡಿದ ಅವರು, ಮಾಣಿಪ್ಪಾಡಿಫ ಅವರ ಕಾಂಗ್ರೆಸ್ ನಾಯಕರು ಆಮಿಷ ಒಡ್ಡಿದ್ದರು ಎಂಬ ಆರೋಪಕ್ಕೆ ಪ್ರತಿಕ್ರಿಯಿಸುತ್ತಾ, "ವಕ್ಫ್ ಆಸ್ತಿ ವಿವಾದ ವಿಚಾರವಾಗಿ ಪ್ರತಿಕ್ರಿಯಿಸುತ್ತಾ ಮಾಣಿಪ್ಪಾಡಿ, 150 ಕೋಟಿ ರೂ. ಆಫರ್ ಎಂದು ಹೇಳಿದ್ದರು. ಅದು ಪಬ್ಲಿಕ್ ಡೊಮೈನ್‌ನಲ್ಲೂ ಇದೆ. ಮಾಧ್ಯಮಗಳ ಮುಂದೆ ಅವರೇ ಹೇಳಿದ್ದಾರೆ. ಆ ವಿಡಿಯೋ ನಾವ್ಯಾರು ಪೋಸ್ಟ್ ಮಾಡಿದ್ದಲ್ಲ" ಎಂದರು.

"ಬಿಜೆಪಿಯವರು ಮಾಣಿಪ್ಪಾಡಿಗೆ ಧಮ್ಕಿ ಹಾಕಿರಬಹುದು. ಅದಕ್ಕೆ ಅವರು ಉಲ್ಟಾ ಹೇಳಿರಬಹುದು. ತನಿಖೆಗೆ ಕೊಡುವ ಬಗ್ಗೆ ಚರ್ಚೆ ಮಾಡುತ್ತೇವೆ. ವಕ್ಫ್ ವಿವಾದ ಮುಚ್ಚಿ ಹಾಕಲು ಆಮಿಷ ಒಡ್ಡಿರುವ ಆರೋಪದಲ್ಲಿ ಕಾಂಗ್ರೆಸ್ ನಾಯಕರಿದ್ದರೂ ತನಿಖೆ ಮಾಡೋಣ. ಪುಟ 2

## ರಾಜಕೀಯ ಒತ್ತಡದಿಂದ ಮಾಣಿಪ್ಪಾಡಿ ಯೂಟರ್ನ್



ಬೆಳಗಾವಿ: "ರಾಜಕೀಯ ಒತ್ತಡದಿಂದಾಗಿ ಅಲ್ಪಸಂಖ್ಯಾತ ಆಯೋಗದ ಮಾಜಿ ಅಧ್ಯಕ್ಷ ಅನ್ವರ್ ಮಾಣಿಪ್ಪಾಡಿ ಅವರು ಯೂಟರ್ನ್ ತೆಗೆದುಕೊಂಡಿದ್ದಾರೆ" ಎಂದು ಡಿಸಿಎಂ ಡಿ.ಕೆ. ಶಿವಕುಮಾರ್ ತಿಳಿಸಿದರು.

ಸುವರ್ಣಸೌಧದ ಆವರಣದಲ್ಲಿ ಮಾಧ್ಯಮಗಳ ಪ್ರಶ್ನೆಗಳಿಗೆ ಶಿವಕುಮಾರ್ ಅವರು ಸೋಮವಾರ ಪ್ರತಿಕ್ರಿಯಿಸಿದರು.


ಅನ್ವರ್ ಮಾಣಿಪ್ಪಾಡಿ ಅವರು ತಮ್ಮ ಹೇಳಿಕೆ ಬದಲಿಸಿರುವ ಬಗ್ಗೆ ಕೇಳಿದಾಗ, "ಮಾಜಿ ಅಧ್ಯಕ್ಷರ ಹೇಳಿಕೆ ವಿಡಿಯೋಗಳನ್ನು ನಾನು ಮಾಧ್ಯಮ ಹಾಗೂ ಸಾಮಾಜಿಕ ಜಾಲತಾಣಗಳಲ್ಲಿ ಬಂದಿರುವರನ್ನು ಗಮನಿಸಿದ್ದೇನೆ. ಅನೇಕ ವಿಚಾರಗಳು ಅವರ ಬಾಯಲ್ಲೇ ಬಂದಿವೆ. ತಮ್ಮ ವಿಚಾರವನ್ನು ಪ್ರಧಾನಮಂತ್ರಿ ಹಾಗೂ ಗೃಹಮಂತ್ರಿಗಳಿಗೆ ಪತ್ರ ಬರೆದು ತಿಳಿಸಿರುವುದಾಗಿ ಹೇಳಿದ್ದರು. ಅವರು ಹೇಳಿರುವ ವಿಚಾರಗಳನ್ನು ಮುಖ್ಯಮಂತ್ರಿಗಳು ಉಲ್ಲೇಖಿಸಿದ್ದಾರೆ. ಈ ದಾಖಲೆಗಳು ಎಲ್ಲೂ ಹೋಗಲು ಸಾಧ್ಯವಿಲ್ಲ. ನಾವು ದಾಖಲೆ ಬಿಡುಗಡೆ ಮಾಡುವ ಮುನ್ನ ಅವರೇ ಈ ದಾಖಲೆಗಳನ್ನು ಬಿಡುಗಡೆ ಮಾಡಲಿ" ಎಂದು ತಿಳಿಸಿದರು.

ಪ್ರಕರಣವನ್ನು ಸಿಬಿಐ ತನಿಖೆಗೆ ಒಪ್ಪಿಸಬೇಕು ಎಂದು ಸಿಎಂ ಹೇಳಿದ್ದು, ಸಿಬಿಐಗೆ ವಹಿಸುತ್ತೀರಾ ಎಂದು ಕೇಳಿದಾಗ, "ಈ ಪ್ರಕರಣದ ಎಲ್ಲಾ ವಿಚಾರ ನಮ್ಮ ಕಣ್ಮುಂದೆ ಇದೆ. ಸಿಬಿಐನವರು ಈ ಪ್ರಕರಣದ ತನಿಖೆ ಮಾಡುವುದಾಗಿ ರಾಜ್ಯ ಸರ್ಕಾರಕ್ಕೆ ಪತ್ರ ಬರೆಯಲಿ. ನಂತರ ನಾವು ಆಲೋಚನೆ ಮಾಡುತ್ತೇವೆ. ನಾವಾಗಿ ಸಿಬಿಐ ತನಿಖೆಗೆ ನೀಡುವುದಿಲ್ಲ ಎಂದು ಬಿಜೆಪಿ ಅವರಿಗೆ ಗೊತ್ತಿದೆ ಹೀಗಾಗಿ ಅವರು ಸಿಬಿಐ ತನಿಖೆಗೆ ಕೇಳುತ್ತಿದ್ದಾರೆ" ಎಂದರು.

ಈ ವಿಚಾರವಾಗಿ ಯಾಕೆ ಗೊಂದಲ ಮಾಡಲಾಗುತ್ತಿದೆ ಎಂದು ಕೇಳಿದಾಗ, "ಗೊಂದಲ ಮಾಡುತ್ತಿರುವವರು ನೀವು. ಅವರ ಹೇಳಿರುವ ಮಾತನ್ನು ನೀವು ಪ್ರಕಟಿಸಿದ್ದೀರಿ. ಈ ವಿಚಾರವನ್ನು ಸಿಎಂ ಟ್ವೀಟ್ ಮಾಡಿದ್ದಾರೆ. ಪುಟ 2

## ಪ್ರತಾಪ್‌ಗೆ 10 ದಿನ ನ್ಯಾಯಾಂಗ ಬಂಧನ

**ತುಮಕೂರು:** ಸೋಡಿಯಂ ಬಳಸಿ ಸ್ಫೋಟ ಪ್ರಕರಣಕ್ಕೆ ಸಂಬಂಧಿಸಿ ಡ್ರೋನ್ ಪ್ರತಾಪ್‌ಗೆ 10 ದಿನಗಳ ಕಾಲ ನ್ಯಾಯಾಂಗ ಬಂಧನ ವಿಧಿಸಿ ಮಧುಗಿರಿ ಕೋರ್ಟ್ ಇಂದು ಆದೇಶ ನೀಡಿದೆ.



ಈ ತಿಂಗಳ 26ರ ವರೆಗೆ ನ್ಯಾಯಾಂಗ ಬಂಧನಕ್ಕೆ ಮಧುಗಿರಿಯ ಜೆಎಂಎಫ್ ಸಿ ನ್ಯಾಯಾಲಯದಿಂದ ಆದೇಶಿಸಲಾಗಿದೆ. ಇಂದು ಮಧುಗಿರಿಯ ಜೆಎಂಎಫ್‌ಸಿ ನ್ಯಾಯಾಲಯಕ್ಕೆ ಮಿಡಿಗೇಶಿ ಪೊಲೀಸರು ಡ್ರೋನ್ ಪ್ರತಾಪ್‌ನನ್ನು ಹಾಜರುಪಡಿಸಿದ್ದರು. ವಾದ ಆಲಿಸಿ 10 ದಿನಗಳ ಕಾಲ ಡ್ರೋನ್ ಪ್ರತಾಪ್ ಗೆ ನ್ಯಾಯಾಂಗ ಬಂಧನಕ್ಕೆ ಒಳಪಡಿಸಲು ಆದೇಶಿಸಲಾಗಿದೆ.ಏನಿದು ಪ್ರಕರಣ: ಕೃಷಿ ಹೊಂಡದಲ್ಲಿ ಸೋಡಿಯಂ ಬಳಸಿ ಡ್ರೋನ್ ಪ್ರತಾಪ್ ಸ್ಫೋಟಿಸಿದ್ದರು. ಬಳಿಕ ಸ್ಫೋಟಗೊಳ್ಳುವ ವಿಡಿಯೋವನ್ನು ಡ್ರೋನ್ ಪ್ರತಾಪ್ ಸಾಮಾಜಿಕ ಜಾಲತಾಣದಲ್ಲಿ, ಯೂಟ್ಯೂಬ್‌ನಲ್ಲೂ ಅಪ್ಲೋಡ್ ಪುಟ 2

## ತಬಲಾ ಸಾಮ್ರಾಟ ಜಾಕೀರ್ ಹುಸೇನ್ ನಿಧನ

**ಸ್ಯಾನ್ ಫ್ರಾನ್ಸಿಸ್ಕೋ:** ಹೃದಯ ಸಂಬಂಧಿ ಕಾಯಿಲೆಯಿಂದ ಬಳಲುತ್ತಿದ್ದ ಖ್ಯಾತ ತಬಲ ವಾದಕ ಪದ್ಮವಿಭೂಷಣ ಜಾಕೀರ್ ಹುಸೇನ್ ಇಹಲೋಹ ತ್ಯಜಿಸಿದ್ದಾರೆ. ಈ ಮೂಲಕ ಭಾರತೀಯ ಸಂಗೀತ ಲೋಕದ ದಿಗ್ಗಜ ಮಾಂತ್ರಿಕನ ಕಣ್ಮರೆಯಾಗಿದೆ. ರಾಷ್ಟ್ರಪತಿ, ಪ್ರಧಾನ ನರೇಂದ್ರ ಮೋದಿ ಸೇರಿ ಗಣ್ಯರು ತೀವ್ರ ಸಂತಾಪ ವ್ಯಕ್ತಪಡಿಸಿದ್ದಾರೆ.

ಜಾಕೀರ್ ಹುಸೇನ್ ಅವರಿಗೆ 73 ವರ್ಷ ವಯಸ್ಸಾಗಿತ್ತು. ಅನಾರೋಗ್ಯದಿಂದ ಅಮೇರಿಕಾದ ಸ್ಯಾನ್ ಫ್ರಾನ್ಸಿಸ್ಕೋ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿದ್ದರು. ಚಿಕಿತ್ಸೆ ಫಲಕಾರಿಯಾಗದೆ ನಿಧನರಾಗಿದ್ದಾರೆ ಎಂದು ಕುಟುಂಬದ ಮೂಲಗಳು ಖಚಿತ ಪಡಿಸಿವೆ.

ಕುಟುಂಬದ ಪ್ರಕಾರ, ಇಡಿಯೋಪಥಿಕ್ ಪಲ್ಮನರಿ ಫೈಬ್ರೋಸಿಸ್ ಸಮಸ್ಯೆಯಿಂದ ಬಳಲುತ್ತಿದ್ದರು ಉಂಟಾದ ತೊಡಕುಗಳಿಂದಾಗಿ ಕಳೆದ ಎರಡು ವಾರಗಳಿಂದ ಆಸ್ಪತ್ರೆಗೆ ದಾಖಲಿಸಲಾಗಿತ್ತು ಮತ್ತು ನಂತರ ಅವರ ಸ್ಥಿತಿ ಹದಗೆಟ್ಟಿದ್ದರಿಂದ ಅವರನ್ನು ಐಸಿಯುಗೆ ಸ್ಥಳಾಂತರ ಮಾಡಲಾಗಿತ್ತು. ಆದರೆ ಚಿಕಿತ್ಸೆ ಫಲಿಸದೆ ನಿಧನರಾಗಿದ್ದಾರೆ.

ಗಂಭೀರ ಹೃದಯ ಸಮಸ್ಯೆಗಳಿಂದ ಬಳಲುತ್ತಿದ್ದ ಜಾಕೀರ್ ಹುಸೇನ್ ಅವರನ್ನು ಆಸ್ಪತ್ರೆಗೆ ದಾಖಲು ಮಾಡಲಾಗಿತ್ತು. ಬಳಿಕ ಸ್ಯಾನ್ ಫ್ರಾನ್ಸಿಸ್ಕೋ ಆಸ್ಪತ್ರೆಯ ಐಸಿಯುಗೆ ಸ್ಥಳಾಂತರಿಸಲಾಯಿತು ಎಂದು ಅವರ



ಸ್ನೇಹಿತ ಮತ್ತು ಕೊಳಲುವಾದಕ ರಾಕೇಶ್ ಚೌರಾಸಿಯಾ ಹೇಳಿದ್ದಾರೆ.

ಸಂಗೀತಕ್ಕೆ ಜಾಕೀರ್ ಹುಸೇನ್ ನೀಡಿದ ಕೊಡುಗೆ ಪರಿಗಣಿಸಿ ಹಲವಾರು ಪ್ರತಿಷ್ಠಿತ ಪ್ರಶಸ್ತಿಗಳು ಹುಡುಕಿಕೊಂಡು ಬಂದಿವೆ. ಅದರಲ್ಲಿ 1988ರಲ್ಲಿ ಪದ್ಮಶ್ರೀ, 2002ರಲ್ಲಿ ಪದ್ಮಭೂಷಣ್ ಮತ್ತು 2023ರಲ್ಲಿ ಪದ್ಮವಿಭೂಷಣ್ ಸೇರಿದಂತೆ ದೇಶದ ಹಲವು ಪ್ರಶಸ್ತಿ ಪಡೆದಿದ್ದರು.

ಜಾಕೀರ್ ಹುಸೇನ್ ತಮ್ಮ ವೃತ್ತಿಜೀವನದಲ್ಲಿ ನಾಲ್ಕು ಗ್ರ್ಯಾಮಿ ಪ್ರಶಸ್ತಿಗಳನ್ನು ಪಡೆದಿದ್ದರು, ಈ ವರ್ಷದ ಆರಂಭದಲ್ಲಿ 66 ನೇ ಗ್ರ್ಯಾಮಿ ಪ್ರಶಸ್ತಿಗಳಲ್ಲಿ ಮೂರು ಸೇರಿದಂತೆ ಪ್ರಶಸ್ತಿಯನ್ನು ತಮ್ಮದಾಗಿಸಿಕೊಂಡಿದ್ದರು.

ಆರು ದಶಕಗಳ ಸಂಗೀತದ ವೃತ್ತಿಜೀವನದಲ್ಲಿ, ಸಂಗೀತಗಾರ ಹಲವಾರು ಪ್ರಸಿದ್ಧ ಅಂತರರಾಷ್ಟ್ರೀಯ ಮತ್ತು ಭಾರತೀಯ ಕಲಾವಿದರೊಂದಿಗೆ ಕೆಲಸ ಮಾಡಿದ್ದರು. ಇಂಗ್ಲಿಷ್ ಗಿಟಾರ್ ವಾದಕ ಜಾನ್ ಮೆಕ್‌ಲಾಫ್ಲಿನ್, ಪಿಟೀಲು ವಾದಕ ಎಲ್ ಶಂಕರ್ ಮತ್ತು ತಾಳವಾದ್ಯ ಥರ್ 'ವಿಕ್ಕು' ವಿನಾಯಕ್ರಂ ಅವರೊಂದಿಗೆ ಅವರ 1973 ರ ಸಂಗೀತ ಯೋಜನೆಯಾಗಿದ್ದು, ಭಾರತೀಯ ಶಾಸ್ತ್ರೀಯ ಮತ್ತು ಭಾರತೀಯ ಶಾಸ್ತ್ರೀಯ ಮತ್ತು ಅಂಶಗಳನ್ನು ಒಟ್ಟುಗೂಡಿ ಖ್ಯಾತ ತಬಲ ವಾದಕ ಎನ್ನುವ ಹಿರಿಮೆ ತನ್ನದಾಗಿಸಿಕೊಂಡಿದ್ದರು.

ತಬಲಾವನ್ನು ಜಾಗತಿಕ ಹಂತಕ್ಕೆ ಕೊಂಡೊಯ್ದ 73 ವರ್ಷದ ಜಾಕೀರ್ ಸಂಗೀತಗಾರ ರಕ್ತದೊತ್ತಡದ ಸಮಸ್ಯೆಗಳನ್ನು ಎದುರಿಸುತ್ತಿದ್ದರು, ಅವರ ಹಿರಿಯ ಪುತ್ರ ಅಲ್ಲಾಹ್ ರಾಖಾ ಹೇಳಿದ್ದಾರೆ.

ಜಾಕಿರ್ ಹುಸೇನ್ 9 ಮಾರ್ಚ್ 1951 ರಂದು ಮುಂಬೈನಲ್ಲಿ ಜನಿಸಿದರು. ಆಟವಾಡುವ ವಯಸ್ಸಿನಲ್ಲಿ ಸಂಗೀತ ಲೋಕವನ್ನು ಪ್ರವೇಶಿಸಿದ ಅವರು ಚಿಕ್ಕಂದಿನಿಂದಲೂ ತಬಲಾ ನಾದಗೆ ಮನಸೋತು ಬಾಲ್ಯದಿಂದಲೂ ತಬಲಾ ನುಡಿಸುವತ್ತ ಪುಟ 2

## 150 ಕೋಟಿ ರೂ. ಆಮಿಷ ಸಿಬಿಐ ತನಿಖೆಗೆ ನೀಡಿ:ಸಿ.ಟಿ ರವಿ

**ಬೆಳಗಾವಿ:** ಬಿಜೆಪಿ ರಾಜ್ಯಾಧ್ಯಕ್ಷ ಬಿವೈ ವಿಜಯೇಂದ್ರ ವಿರುದ್ಧ 150 ಕೋಟಿ ರೂ. ಆಮಿಷ ಒಡ್ಡಿದ ಆರೋಪ ವಿಚಾರಕ್ಕೆ ಸಂಬಂಧಿಸಿದಂತೆ ವಿಧಾನಪರಿಷತ್ ಬಿಜೆಪಿ ಸದಸ್ಯ ಸಿ.ಟಿ ರವಿ ಪ್ರತಿಕ್ರಿಯಿಸಿದ್ದಾರೆ.

ಈ ಕುರಿತು ಮಾತನಾಡಿದ ಸಿ.ಟಿ ರವಿ, ತನೀಖೆಗೆ ನೀಡುವ ಅಧಿಕಾರ ಸಿಎಂ ಕೈ ನಲ್ಲಿದೆ. ಸಚಿವ ಸಂಪುಟ ಸಭೆಯಲ್ಲಿ ನಿರ್ಣಯ ತೆಗೆದುಕೊಂಡು ಸಿಬಿಐ ತನಿಖೆಗೆ ನೀಡಿ ಎಂದು ಆಗ್ರಹಿಸಿದರು. ವಕ್ಫ್ ಆಸ್ತಿ ಕಬಳಿಸಿರೋದು ಕಾಂಗ್ರೆಸ್ ನಾಯಕರೇ . ಕಾಂಗ್ರೆಸ್ ಅಮಿಷದ ಬಗ್ಗೆ ಅನ್ವರ್ ಹೇಳಿದ್ದಾರೆ . ಅನ್ವರ್ ಮಾನಪ್ಪಾಡಿ ಹೇಳಿರುವುದು ಸತ್ಯ. ಹೀಗಾಗಿ ಈ ಪ್ರಕರಣವನ್ನ ಸಿಬಿಐಗೆ ಒಪ್ಪಿಸಿ ಎಂದು ಸಿಟಿ ರವಿ ಒತ್ತಾಯಿಸಿದರು.

## ಕಾಂಗ್ರೆಸ್ ವಿರುದ್ಧ ವಾಗ್ದಾಳಿ

ಬೆಳಗಾವಿ: ಬಿಜೆಪಿ ರಾಜ್ಯಾಧ್ಯಕ್ಷ ಬಿವೈ ವಿಜಯೇಂದ್ರ ವಿರುದ್ಧ 150 ಕೋಟಿ ರೂ. ಆಮಿಷ ಒಡ್ಡಿದ ಆರೋಪ ಮಾಡಿರುವ ಕಾಂಗ್ರೆಸ್ ನಾಯಕರ ವಿರುದ್ಧ ವಿಪಕ್ಷ ನಾಯಕ ಆರ್.ಅಶೋಕ್ ವಾಗ್ದಾಳಿ ನಡೆಸಿದ್ದಾರೆ.ಈ ಕುರಿತು ಮಾತನಾಡಿರುವ ಆರ್. ಅಶೋಕ್, ವಿಜಯೇಂದ್ರ 150 ಕೋಟಿ ರೂ. ಯಾಕೆ ಕೊಡಬೇಕು. ವಿಷಯ ಡೈವರ್ಟ್ ಮಾಡಲು ಕಾಂಗ್ರೆಸ್ ಹುನ್ನಾರ ಮಾಡಿದೆ. ಕಾಂಗ್ರೆಸ್ ನವರೇ ಆಮಿಷ ಒಡ್ಡಿದರು ಎಂದು ಮಾಣಿಪ್ಪಾಡಿ ಹೇಳಿದ್ದಾರೆ. ಪುಟ 2



# ವಕ್ಫ್ ವರದಿ ಮುಚ್ಚಿ ಹಾಕಲು ಸಾವಿರಾರು ಕೋಟಿ ಆಮಿಷ ಒಡ್ಡಿದ್ದು ಕಾಂಗ್ರೆಸ್



**ಮಂಗಳೂರು:** ವಕ್ಫ್ ಆಸ್ತಿ ಕಬಳಿಕೆ ಕುರಿತು ಮೌನವಾಗಿರಲು ಅಲ್ಪಸಂಖ್ಯಾತ ಆಯೋಗದ ಅಧ್ಯಕ್ಷರಾಗಿದ್ದ ಅನ್ವರ್ ಮಾಣಿಪ್ಪಾಡಿ ಅವರಿಗೆ ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ಅವರು 150 ಕೋಟಿ ರೂ. ಆಮಿಷವೊಡ್ಡಿದ್ದರು. ಆ ಬಗ್ಗೆ ಪ್ರಧಾನಮಂತ್ರಿ ನರೇಂದ್ರ ಮೋದಿಯವರು ಸಿಬಿಐ ತನಿಖೆ ಮಾಡಿಸಲಿ ಎಂಬ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಆಗ್ರಹಕ್ಕೆ ಸ್ವತಃ ಮಾಣಿಪ್ಪಾಡಿ ಅವರು ತಿರುಗೇಟು ನೀಡಿದ್ದಾರೆ.

ಸುದ್ದಿಗಾರರೊಂದಿಗೆ ಭಾನುವಾರ ಪ್ರತಿಕ್ರಿಯಿಸಿದ ಅವರು, 2012–13ರಲ್ಲಿ ವಕ್ಫ್ ಆಸ್ತಿ ಕಬಳಿಕೆ ಬಗ್ಗೆ ವರದಿ ರೆಡಿ ಮಾಡುತ್ತಿದ್ದಾಗ ವಿಜಯೇಂದ್ರ ಏನೂ ಆಗಿರಲಿಲ್ಲ. ಯಡಿಯೂರಪ್ಪ ಪುತ್ರ ಅಷ್ಟೇ ಆಗಿದ್ದರು. 2019ರಲ್ಲಿ ಯಡಿಯೂರಪ್ಪ ಸರ್ಕಾರ ಇದ್ದಾಗ ವಕ್ಫ್ ಆಸ್ತಿ ಕುರಿತ ವರದಿ ಜಾರಿಗೊಳಿಸಬೇಕೆಂದು ಆಗ್ರಹ ಮಾಡಿದ್ದೆ. ಈ ವಿಷಯದಲ್ಲಿ ಬಿಜೆಪಿ ನಾಯಕರ ಬಗ್ಗೆ ಕೋಪಗೊಂಡಿದ್ದೆ. ಆಗ ಪಕ್ಷದ ಕಚೇರಿಯಲ್ಲಿ ವಿಜಯೇಂದ್ರ ನನ್ನ ಜೊತೆಗೆ ಮಾತುಕತೆ ನಡೆಸಿದ್ದು ಹೌದು. ಆದರೆ, ಯಾವುದೇ ಆಮಿಷವೊಡ್ಡಿದ್ದು ನನಗೆ ಗೊತ್ತಿಲ್ಲ ಎಂದು ಹೇಳಿದರು.

ವಿಜಯೇಂದ್ರ ಅವರಲ್ಲ ಬದಲಿಗೆ ವರದಿ ಬಹಿರಂಗ ಮಾಡದಂತೆ ಕಾಂಗ್ರೆಸಿಗರೇ ನನಗೆ ಸಾವಿರ ಕೋಟಿ ಆಫರ್ ಮಾಡಿದ್ದರು. ಏಕೆಂದರೆ, ವಕ್ಫ್ ಆಸ್ತಿ ಹಗರಣದಲ್ಲಿ ಕಾಂಗ್ರೆಸ್ ನಾಯಕರದ್ದೇ ಹೆಸರಿವೆ. ವರದಿ ಜಾರಿ ಮಾಡುತ್ತಿದ್ದರೆ ಕಾಂಗ್ರೆಸ್ಸಿಗೇ ಮುಳುವಾಗುತ್ತಿತ್ತು. ಹಲವು ನಾಯಕರು ಜೈಲಿಗೆ ಹೋಗುವ ಸ್ಥಿತಿ ಬರುತ್ತಿತ್ತು. ಇದರಿಂದ ಬಚಾವ್ ಆಗಲು ನನಗೆ ಬಹಳಷ್ಟು ಆಮಿಷ ಒಡ್ಡಿದ್ದರು. 150 ಅಲ್ಲ, ಸಾವಿರಾರು ಕೋಟಿ ಕೊಡುವುದಕ್ಕೂ ರೆಡಿ ಇದ್ದರು. ಅಮೆರಿಕದಲ್ಲಿ ಹೋಗಿ ಸೆಟ್ಲ್ ಆಗುವುದಿದ್ದರೂ ವ್ಯವಸ್ಥೆ ಮಾಡುತ್ತೇವೆ ಎಂದಿದ್ದರು. ಆದರೆ, ನಾನು ಎಲ್ಲವನ್ನೂ ನಿರಾಕರಿಸಿದ್ದೇನೆ. ನ್ಯಾಯಯುತ ತನಿಖೆಗೆ ಆಗ್ರಹಿಸಿದ್ದೇನೆ. ಇದರ ಬಗ್ಗೆ ಪ್ರಧಾನಿಯವರಿಗೂ ಪತ್ರ ಬರೆದಿದ್ದೇನೆ ಎಂದು ತಿಳಿಸಿದರು.

ವರದಿಯಲ್ಲಿ ಹೆಸರು ಬಂದವರು ಪ್ರಕರಣ ಮುಚ್ಚಿ ಹಾಕಲು ಆಫರ್ ನೀಡಲು ಬಂದಿದ್ದರು. ಅದು ಬಿಟ್ಟರೆ ಬಿಜೆಪಿ ಕಡೆಯಿಂದ ಆಫರ್ ಆಮಿಷ ಬಂದಿಲ್ಲ. ವರದಿ ಜಾರಿಗೊಂಡಿದ್ದರೆ ಕಾಂಗ್ರೆಸ್ಸಿನ ದೊಡ್ಡ ಕುಳಗಳೇ ಸಿಕ್ಕಿ ಬೀಳುತ್ತಿದ್ದರು. ಈಗ ಸಿದ್ದರಾಮಯ್ಯ 1.60 ಲಕ್ಷ ಎಕರೆ ಆಸ್ತಿಗೆ ನೋಟಿಸ್ ಕೊಟ್ಟಿದ್ದು ಒಂದು ರೀತಿಯ ಬೋಗಸ್. ನಾವು ಕೊಟ್ಟ ವರದಿಯಲ್ಲಿ 27 ಸಾವಿರ ಎಕರೆ ವಕ್ಫ್ ಆಸ್ತಿ ಕಬಳಿಕೆ ಬಗ್ಗೆ ದಾಖಲೆ ಇದೆ. ಅದು ಬಿಟ್ಟು ಸಿದ್ದರಾಮಯ್ಯ ಒಂದೂವರೆ ಲಕ್ಷ ಎಕರೆಗೆ ನೋಟಿಸ್ ಕೊಟ್ಟಿದ್ದು ಹೇಗೆ? ಅಷ್ಟೊಂದು ರೈತರಿಗೆ ನೋಟಿಸ್ ಕೊಟ್ಟಿದ್ದಾರೆ. ಆಸ್ತಿ ಕಬಳಿಸಿದ ಪ್ರಭಾವಿಗಳಿಗೆ ನೋಟಿಸ್ ಕೊಟ್ಟಿದ್ದಾರೆಯೇ. ಇವರಿಗೆ ವಕ್ಫ್ ಆಸ್ತಿ ತನಿಖೆ ಮಾಡಬೇಕೆಂಬ ಆಸಕ್ತಿ ಇಲ್ಲ, ಹೀಗೆ ಆರೋಪ ಮಾಡುತ್ತಾರೆ ಬಿಟ್ಟರೆ ತನಿಖೆ ಮಾಡಿಸುವುದಿಲ್ಲ. ಹಾಗಿದ್ದರೆ ಸಿಬಿಐ ತನಿಖೆಗೆ ಕೊಡಲಿ ಎಂದು ಸಿದ್ದರಾಮಯ್ಯ ಅವರಿಗೆ ಸವಾಲು ಹಾಕಿದರು.

ವಕ್ಫ್ ಆಸ್ತಿ ಕಬಳಿಕೆಗೆ ಸಂಬಂಧಿಸಿದಂತೆ ನನ್ನ ವರದಿ ಅನುಷ್ಠಾನಕ್ಕಾಗಿ ಈಗಲೂ ಹೋರಾಟ ಮಾಡುತ್ತಿದ್ದೇನೆ. ಈಗಲೂ ಈ ವಿಚಾರ ಹೈಕೋರ್ಟ್ ಮುಂದೆ ಇದೆ ಎಂದು ಹೇಳಿದರು.

ಕೇಂದ್ರ ಸರ್ಕಾರ ವಕ್ಫ್ ಕಾಯ್ದೆಗೆ ತಿದ್ದುಪಡಿ ತರುತ್ತಿರುವ ಕುರಿತು ಪ್ರತಿಕ್ರಿಯಿಸಿ, ನನ್ನ ವರದಿಯ ಆಧಾರದಲ್ಲಿ ವಕ್ಫ್ ಕಾಯ್ದೆಗೆ ಕೆಲವೊಂದು ತಿದ್ದುಪಡಿ ತರುವಂತೆ ನಾನೇ ಕೋರಿದ್ದೆ. ಯಾವ ರೀತಿಯಲ್ಲೂ ವಕ್ಫ್ ಆಸ್ತಿ ಕಬಳಿಕೆ ಆಗಬಾರದು ಎಂಬುದು ನನ್ನ ಉದ್ದೇಶ. ಅಲ್ಪಸಂಖ್ಯಾತರಿಗೆ ತೊಂದರೆ ಆಗದಿದ್ದರೆ, ಅವರಿಗೆ ಒಳ್ಳೆಯದಾಗುವುದಿದ್ದರೆ ಕೇಂದ್ರ ಸರ್ಕಾರ ತರುವ ಕಾಯ್ದೆ ತಿದ್ದುಪಡಿಗೆ ನನ್ನ ಸಹಮತ ಖಂಡಿತಾ ಇದೆ ಎಂದು ತಿಳಿಸಿದರು

## ಅಗ್ನಿ ಅವಘಡ : ಮೂರು ಮಳಿಗೆಗಳಲ್ಲಿ ಬೆಂಕಿ




**ತುಮಕೂರು** ನಗರದ ಹೃದಯ ಬಾಗದಲ್ಲಿ ಶಾರ್ಟ್ ಸರ್ಕೀಟ್‌ನಿಂದ ತುಮಕೂರು ವಿಶ್ವವಿದ್ಯಾಲಯ ಬಳಿಯ ಮೂರು ಮಳಿಗೆಗಳಲ್ಲಿ ಸೋಮವಾರ ಬೆಳಗಿನ ಜಾವ ಬೆಂಕಿ ಕಾಣಿಸಿಕೊಂಡಿದ್ದು,

ಅಪಾರ ಪ್ರಮಾಣದ ನಷ್ಟವಾಗಿದೆ ಮೊದಲಿಗೆ ಮೊಬೈಲ್ ಮಾರಾಟ ಮಳಿಗೆಯಲ್ಲಿ ಬೆಂಕಿ ಕಾಣಿಸಿಕೊಂಡು ಸುತ್ತಮುತ್ತಲಿನ ಮಳಿಗೆಗಳಿಗೆ ಹರಡಿದೆ. ತರಕಾರಿ ಅಂಗಡಿ, ಮೊಬೈಲ್ ಮಾರ್ಟ್, ಸೌತ್ ಹೋಳಿಗೆ ಮನೆ ಮಳಿಗೆಯಲ್ಲಿ ಬೆಂಕಿ ಕಾಣಿಸಿಕೊಂಡಿದೆ. ಶಾರ್ಟ್ ಸರ್ಕ್ಯೂಟ್ ಉಂಟಾಗಿದ್ದರಿಂದ ಕಾಣಿಸಿಕೊಂಡ ಬೆಂಕಿ ಕಾರಣ ಮೂರು ಅಂಗಡಿ ಮಳಿಗೆಗಳು ಬೆಂಕಿಗೆ ಆಹುತಿಯಾದ . ಘಟನೆಯಲ್ಲಿ ಅಪಾರ ಪ್ರಮಾಣದ ನಷ್ಟ ಸಂಭವಿಸಿದೆ. ಮೊಬೈಲ್ ಮಾರ್ಟ್ ಅಂಗಡಿಯಲ್ಲಿ ಶಾರ್ಟ್ ಸರ್ಕ್ಯೂಟ್ ನಿಂದ ಮೊದಲು ಬೆಂಕಿ ಕಾಣಿಸಿಕೊಂಡಿದೆ. ನಂತರ ಅಕ್ಕಪಕ್ಕದಲ್ಲಿ ಇರುವ ತರಕಾರಿ ಅಂಗಡಿ ಮತ್ತು ಹೋಳಿಗೆ ಮನೆ ಅಂಗಡಿಗಳಿಗೆ ವ್ಯಾಪಿಸಿದೆ. ಬೆಂಕಿ ಕೆನ್ನಾಲಗೆಗೆ ಅಂಗಡಿಯಲ್ಲಿದ್ದ ವಸ್ತುಗಳೆಲ್ಲ ಸಂಪೂರ್ಣವಾಗಿ ಸುಟ್ಟು ಹೋಗಿದ್ದು ಲಕ್ಷಾಂತರ ರೂ. ನಷ್ಟ ಸಂಭವಿಸಿದೆ. ಸ್ಥಳಕ್ಕೆಅಗ್ನಿಶಾಮಕ ದಳ ಆಗಮಿಸಿ ಬೆಂಕಿ ನಂದಿಸಿದ್ದು, ಇತರ ಅಂಗಡಿ ಮಳಿಗೆಗಳಿಗೆ ಬೆಂಕಿ ವ್ಯಾಪಿಸುವುದನ್ನು ತಡೆದಿದ್ದಾರೆ ಅಗ್ನಿ ಅವಘಡಕ್ಕೆ ನಿಖರವಾದ ಮಾಹಿತಿ ತಿಳಿದು ಬಂದಿಲ್ಲ..

# ಕೆಟಿಟಿಎ ರಾಷ್ಟ್ರೀಯ ಮಟ್ಟದ ಟೇಬಲ್ ಟೆನ್ನಿಸ್ ರಾಷ್ಟ್ರೀಯ ಚಾಂಪಿಯನ್ ಷಿಪ್ ಪಂದ್ಯಾವಳಿ

**ಬೆಂಗಳೂರು:** ಬೆಂಗಳೂರಿನ ಕಂಠೀರವ ಒಳಾಂಗಣ ಕ್ರೀಡಾಂಗಣದಲ್ಲಿ ಕರ್ನಾಟಕ ಟೇಬಲ್ ಟೆನಿಸ್ ಅಸೋಸಿಯೇಷನ್ ಕೆಟಿಟಿಎ ವತಿಯಿಂದ ಆಯೋಜಿಸಿದ್ದ ಪ್ರತಿಷ್ಠಿತ ರಾಷ್ಟ್ರೀಯ ಮಟ್ಟದ ಟೇಬಲ್ ಟೆನಿಸ್ ಚಾಂಪಿಯನ್‌ಶಿಪ್ ಗೆ ಇಂದು ಶಾಸಕ ರಿಜ್ವಾನ್ ಹರ್ಷದ್ ಹಾಗೂ ಕೆಟಿಟಿಎ ಅಧ್ಯಕ್ಷ ರಕ್ಷಾ ರಾಮಯ್ಯ ಟೇಬಲ್ ಟೆನಿಸ್ ಆಟ ಆಡುವ ಮೂಲಕ ಚಾಲನೆ ನೀಡಿದರು.




ಈ ಟೂರ್ನಿಯಲ್ಲಿ 29 ರಾಜ್ಯಗಳು ಹಾಗೂ ದೇಶದಾದ್ಯಂತ 1693 ಕ್ಕೂ ಅಧಿಕ ಸಂಖ್ಯೆಯ ಕ್ರೀಡಾಪಟುಗಳು ಭಾಗವಹಿಸಿರುವುದು ವಿಶೇಷವಾಗಿದೆ.

ಶಾಸಕ ರಿಜ್ವಾನ್ ಹರ್ಷದ್ ಮಾತನಾಡಿ, ಕ್ರೀಡೆ ಯುವ ಸಮೂಹದ ಸರ್ವಾಂಗೀಣ ಬೆಳವಣಿಗೆಗೆ ಸಹಕಾರಿಯಾಗಿದ್ದು, ಮಾನಸಿಕ ಮತ್ತು ದೈಹಿಕ ವಿಕಾಸಕ್ಕೆ ಪೂರಕವಾಗಿದೆ. ಟೇಬಲ್ ಟೆನ್ನಿಸ್ ಅತ್ಯಂತ ಪ್ರಮುಖ ಕ್ರೀಡೆಯಾಗಿದ್ದು, ಇದರಿಂದ ದೇಹದ ಎಲ್ಲಾ ಅಂಗಾಂಗಳಿಗೂ ವ್ಯಾಯಾಮ ದೊರೆಯುತ್ತದೆ. ಏಕಾಗ್ರತೆಯ ಪ್ರತೀಕವಾಗಿರುವ ಟೇಬಲ್ ಟೆನ್ನಿಸ್ ಕ್ರೀಡೆಯನ್ನು ರಾಜ್ಯದಲ್ಲಿ ಮತ್ತಷ್ಟು ಪ್ರಗತಿ ಪಥದತ್ತ ಸಾಗಲಿ ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ಕರ್ನಾಟಕ ಟೇಬಲ್ ಟೆನಿಸ್ ಅಸೋಸಿಯೇಷನ್ ಅಧ್ಯಕ್ಷರಾದ ರಕ್ಷಾ ರಾಮಯ್ಯ , ಸಂಘಟನಾ ಕಾರ್ಯದರ್ಶಿ ಮಂಜುನಾಥ್,ಉಪಾಧ್ಯಕ್ಷರಾದ ಗೌತಮ್ ಶೆಟ್ಟಿ, ಶಿವಕುಮಾರ್, ಜಂಟಿ ಕಾರ್ಯದರ್ಶಿ ತಹೀರಾ ಸನ್ನಿದಿ, ಸದಸ್ಯರಾದ ಅರ್ಜುನ್ ರಾವ್, ಸುಬ್ರಹ್ಮಣ್ಯ, ಕ್ರೀಡಾಸಕ್ತ ಗಣ್ಯರು ಉಪಸ್ಥಿತರಿದ್ದರು.



# ಕರಾವಳಿ ರತ್ನ ಪ್ರಶಸ್ತಿ ಮತ್ತು ಪ್ರತಿಭಾ ಪುರಸ್ಕಾರ

**ಬೆಂಗಳೂರು;** ದಕ್ಷಿಣ ಕನ್ನಡಿಗರ ಸಂಘದ ವತಿಯಿಂದ "ಕರಾವಳಿ ರತ್ನ" ಪ್ರಶಸ್ತಿ ಮತ್ತು ಪ್ರತಿಭಾ ಪ್ರಧಾನ ಸಮಾರಂಭ ನಯನ ಸಭಾಂಗಣದಲ್ಲಿ ನಡೆಯಿತು.ನಿವೃತ್ತ ಲೋಕಾಯುಕ್ತ ನ್ಯಾಯಮೂರ್ತಿ ಸಂತೋಷ್ ಹೆಗ್ಡೆ,ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ನಿರ್ದೇಶಕಿ ಡಾ.ಧರಣಿ ದೇವಿ ಮಾಲಗತ್ತಿ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು.

ಟೀಕೇಸ್ ಗ್ರೂಪ್ ನ ಸ್ಥಾಪಕ ಉಮರ್ ಟೀಕೇ, ವರ್ಲ್ಡ್ ಫೆಡರೇಶನ್ ಅಪ್ ಬಂಟ್ಸ್ ಅಸೋಸಿಯೇಶನ್ ಉಪಾಧ್ಯಕ್ಷ ಕರ್ನಿರೆ ವಿಶ್ವನಾಥ ಶೆಟ್ಟಿ, ಕ್ಯಾಂಟರ್ಬೆರಿ ಗ್ರೂಪ್ ಅಧ್ಯಕ್ಷ ಲಿಯೋ ಕ್ವಾಡ್ರೋಸ್, ಆದಾಯ ತೆರಿಗೆ ಇಲಾಖೆಯ ಆಯುಕ್ತೆ ನಿವ್ಯಾ ಶೆಟ್ಟಿ ಅವರಿಗೆ ಕರಾವಳಿ ರತ್ನ ಪ್ರಶಸ್ತಿ ನೀಡಿ ಗೌರವಿಸಲಾಯಿತು.

ದಕ್ಷಿಣ ಕನ್ನಡಿಗರ ಸಂಘದ ಅಧ್ಯಕ್ಷ ಡಾ.ಬಲ್ಲಾಳ್ ಮಾತನಾಡಿ, ನಮ್ಮ ಸಂಘದವತಿಯಿಂದ ವಿವಿಧ ಕ್ಷೇತ್ರಗಳಲ್ಲಿ ಸಾಧನೆ ಮಾಡಿದ ಮಹನೀಯರಿಗೆ ಕರಾವಳಿ ರತ್ನ ಪ್ರಶಸ್ತಿ ನೀಡಿ ಗೌರವಿಸಲಾಗುತ್ತದೆ, ದಕ್ಷಿಣ ಕನ್ನಡ ಭಾಗದ ಜನರನ್ನು ಒಂದೆಡೆ ಸೇರಿಸುವ ಉದ್ದೇಶದಿಂದ ಇಂತಹ ಕಾರ್ಯಕ್ರಮ ಹಮ್ಮಿಕೊಳ್ಳಲಾಗುತ್ತದೆ ಎಂದು ಹೇಳಿದರು.

# ಪುರಾಣ ಪ್ರಸಿದ್ಧ ಶ್ರೀ ರಂಗನಾಥ ಸ್ವಾಮಿ ಬ್ರಹ್ಮರಥೋತ್ಸವ

**ಚಿಕ್ಕಬಳ್ಳಾಪುರ:** ಪುರಾಣ ಪ್ರಸಿದ್ಧ ಶ್ರೀರಂಗನಾಥ ಸ್ವಾಮಿ ದೇವಾಲಯದ ಆವರಣದಲ್ಲಿ ಪ್ರತಿವರ್ಷದಂತೆ ನಡೆದುಕೊಂಡು ಬಂದಿರುವ ಬ್ರಹ್ಮರಥೋತ್ಸವ ನೂರಾರು ಭಕ್ತಾದಿಗಳ ಜಯ ಘೋಷದ ನಡುವೆ ಯಶಸ್ವಿಯಾಗಿ ನಡೆಯಿತು.

ತಾಲೂಕಿನ ತಿಪ್ಪೇನಹಳ್ಳಿ ಪಂಚಾಯಿತಿಗೆ ಸೇರುವ ಬೋಧಗಾನಳ್ಳಿ ಗ್ರಾಮದ ಸರಹದ್ದಿನಲ್ಲಿರುವ ರಂಗಸ್ಥಳದಲ್ಲಿರುವ ಶ್ರೀ ರಂಗನಾಥ ಸ್ವಾಮಿ ದೇವಾಲಯದ ಆವರಣದಲ್ಲಿ ಭಾನುವಾರ ಪೌರ್ಣಮಿಯ ದಿವಸ ಸ್ವಾಮಿಯ ರಥೋತ್ಸವ ನಡೆಯಿತು

ರಥೋತ್ಸವದ ಅಂಗವಾಗಿ ಸ್ವಾಮಿಗೆ ಅಭಿಷೇಕ ಹೂವಿನ ಅಲಂಕಾರ ಸಹಿತ ಅನೇಕ ಧಾರ್ಮಿಕ ವಿಧಿಗಳನ್ನು ಪುರೋಹಿತ ವರ್ಗ ಸಾಂಗವಾಗಿ ನೆರವೇರಿಸಿತು.





ಹೊಯ್ಸಳರ ಕಾಲದಲ್ಲಿ ನಿರ್ಮಾಣವಾಗಿರುವ ಈ ದೇವಾಲಯ ಹಲವು ವಿಶೇಷಗಳಿಂದ ಕೂಡಿದೆ ಬಿದಿರ ಬುಟ್ಟಿ ಆಕಾರದಲ್ಲಿರುವ ಗರ್ಭಗುಡಿ ಸಾಲಿಗ್ರಾಮ ಶಿಲೆಯಲ್ಲಿ ನಿರ್ಮಾಣವಾಗಿರುವ ಶ್ರೀದೇವಿ ಭೂದೇವಿ ಸಮೇತ ಶ್ರೀ ರಂಗನಾಥ ಸ್ವಾಮಿ ಮೂರ್ತಿಯು ಭಕ್ತರ ಇಷ್ಟಾರ್ಥಗಳನ್ನು ಈಡೇರಿಸುವ ದೈವವಾಗಿದೆ ಎನ್ನುವುದು ಆಸ್ತಿಕರ ನಂಬಿಕೆ,ತ್ರೇತಾಯುಗದಲ್ಲಿ ಮರ್ಯಾದ ಪುರುಷೋತ್ತಮ ಶ್ರೀರಾಮಚಂದ್ರನಿಗೆ ಪಟ್ಟಾಭಿಷೇಕವಾದ ನೆನಪಿಗೆ ಸಪ್ತಮಹರ್ಷಿಗಳು ಶ್ರೀರಂಗನಾಥ ಸ್ವಾಮಿ ರಂಗಸ್ಥಳದಲ್ಲಿ ಪ್ರತಿಷ್ಠಾಪಿಸಿದ್ದಾರೆ ಎನ್ನುತ್ತಾರೆ ಅರ್ಚಕರು.

ರಂಗಸ್ಥಳದಲ್ಲಿರುವ ಶ್ರೀ ರಂಗನಾಥ ಸ್ವಾಮಿ ಬ್ರಹ್ಮರಥೋತ್ಸವಕ್ಕೆ ಜಿಲ್ಲೆಯ ಭಕ್ತಾದಿಗಳಲ್ಲದೆ ದೂರದ ತಮಿಳುನಾಡು,ಆಂಧ್ರಪ್ರದೇಶ ದಿಂದಲೂ ಬಂದು ಭಗವಂತನ ಕೃಪ ಆಶೀರ್ವಾದಕ್ಕೆ ಪಾತ್ರರಾಗುತ್ತಾರೆ.

ರಥೋತ್ಸವಕ್ಕೆ ಚಾಲನೆ ನೀಡುವಾಗ ಭಕ್ತಾದಿಗಳ ಕಂಠದಿಂದ ಹೊಮ್ಮುವ ಗೋವಿಂದ ಗೋವಿಂದ ಎಂಬ ನಾಮಸ್ಮರಣೆ ವೈಕುಂಠವನ್ನು ಭೂಲೋಕಕ್ಕೆ ತಂದ ಅನುಭವ ನೀಡುತ್ತದೆ. ಶ್ರೀರಂಗನಾಥ ಸ್ವಾಮಿ ರಥೋತ್ಸವದ ಅಂಗವಾಗಿ ಹರಿ ಸ್ಥಳದ ಪಂಡರಿ ಭಜನಾ ತಂಡ ದೇವಾಲಯದ ಪ್ರಾಂಗಣದಲ್ಲಿ ಭಗವಂತನ ನಾಮಸ್ಮರಣೆ ಯೊಂದಿಗೆ ಕೋಲಾಟ ಆಡಿದ್ದು ಭಕ್ತಾದಿಗಳ ಮನಸ್ಸನ್ನು ಸಂತೋಷಪಡಿಸಿತು

ರಥೋತ್ಸವದ ಅಂಗವಾಗಿ ಅನ್ನದಾನ ವಸ್ತ್ರದಾನವನ್ನು ಏರ್ಪಡಿಸಿದ್ದು ಭಕ್ತಾದಿಗಳು ಶ್ರದ್ಧಾಭಕ್ತಿಯಿಂದ ಈ ಕಾರ್ಯದಲ್ಲಿ ಭಾಗವಹಿಸಿದ್ದರು.

ರಂಗನಾಥ ಸ್ವಾಮಿಯ ಉತ್ಸವ ಮೂರ್ತಿಯನ್ನು ರಥದಲ್ಲಿಟ್ಟು ದೇವಾಲಯವನ್ನು ಬಲಗಡೆಯಿಂದ ಪ್ರದಕ್ಷಿಣೆ ಹಾಕಿ ಎಡ ಭಾಗದಲ್ಲಿ ನಿಲ್ಲಿಸಲಾಯಿತು ಹರಕೆ ಹೊತ್ತು ಭಕ್ತಾದಿಗಳು ದವನ ಬಾಳೆಹಣ್ಣನ್ನು ದೇವರ ರಥದ ಮೇಲೆ ಎಸೆದು ಭಕ್ತಿಯನ್ನು ಸಮರ್ಪಿಸಿದರು.

ರಂಗನಾಥ ಸ್ವಾಮಿ ಬ್ರಹ್ಮರಥೋತ್ಸವದ ಅಂಗವಾಗಿ ದೇವಾಲಯದ ಆವರಣದಲ್ಲಿ ಬುರುಗೋ ಬತ್ತಾಸು ಮಕ್ಕಳ ಆಟದ ಸಾಮಾನುಗಳು ಚೂರು ಮುರಿ ಮೊದಲಾದ ಅಂಗಡಿಗಳನ್ನು ತೆರೆದು ಬಂದ ಭಕ್ತಾದಿಗಳಿಗೆ ಜಾತ್ರೆಯ ಸವಿಯನ್ನು ಉಣಬಡಿಸಿದರು.

ಮುಸ್ಟೂರು ಗ್ರಾಮದ ಮುಖಂಡ ಶ್ರೀಧರ್ ಮಾತನಾಡಿ ಸಾವಿರಾರು ವರ್ಷಗಳ ಇತಿಹಾಸವಿರುವ ಪುರಾಣ ಪ್ರಸಿದ್ಧ ಶಕ್ತಿ ಕೇಂದ್ರವಾಗಿರುವ ರಂಗನಾಥ ಸ್ವಾಮಿಯ ಸನ್ನಿಧಿಯಲ್ಲಿ ಬಂದು ಹೋಗುವ ಭಕ್ತಾದಿಗಳಿಗೆ ಮೂಲಭೂತ ಸೌಕರ್ಯಗಳ ಕೊರತೆ ಎದ್ದು ಕಾಣುತ್ತಿದೆ ಸ್ವಾಮಿಯ ಭಗವದ್ಭಕ್ತರು ಸಮಾಜ ಸೇವಕರು ದಾನಿಗಳು ಈ ಕಡೆ ಗಮನಹರಿಸಿ ಕನಿಷ್ಠ ಶೌಚಾಲಯ ವಿಶ್ರಾಂತಿ ಗ್ರಹ ಪ್ರಸಾದ ಸ್ವೀಕರಿಸುವ ಆಲಯ ನಿರ್ಮಾಣ ಮಾಡಿದರೆ ಅನುಕೂಲವಾಗುತ್ತದೆ ಇದೊಂದು ಪ್ರವಾಸಿ ತಾಣವಾಗಿದ್ದು ಮುಜರಾಯಿ ಮತ್ತು ಜಿಲ್ಲಾಡಳಿತ ಕೂಡ ಈನಿಟ್ಟಿನಲ್ಲಿ ಕಾರ್ಯೋನ್ಮುಖವಾಗಬೇಕಿದೆ ಎಂದು ಮನವಿ ಮಾಡಿದರು.

# ಉತ್ತರ ಕರ್ನಾಟಕದ ಕುರಿತ ಚರ್ಚೆಗೆ ಹಾಗೂ ವಕ್ಫ್ ಮಂಡಳಿ ಕುರಿತು ಉತ್ತರ ನೀಡಲು ಸರ್ಕಾರ ಸಿದ್ಧವಿದೆ: ಮುಖ್ಯಮಂತ್ರಿ ಸಿದ್ದರಾಮಯ್ಯ

**ಬೆಳಗಾವಿ:** ವಕ್ಫ್ ಮಂಡಳಿ ಕುರಿತು ಸರ್ಕಾರ ವಿಧಾನಮಂಡಲದಲ್ಲಿ ಉತ್ತರ ನೀಡಬೇಕಿದೆ. ಸರ್ಕಾರ ಕರ್ನಾಟಕದ ಚರ್ಚೆಗೂ ಸಿದ್ಧವಿದೆ ವಕ್ಫ್ ಮಂಡಳಿ ಕುರಿತ ವಿರೋಧ ಪಕ್ಷಗಳ ಪ್ರಶ್ನೆಗಳಿಗೂ ಉತ್ತರ ನೀಡಲೂ ಸಿದ್ಧವಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದರು.

ಬೆಳಗಾವಿಯ ಸರ್ಕಿಟ್ ಹೌಸ್‌ನಲ್ಲಿ ಮಾಧ್ಯಮದವರೊಂದಿಗೆ ಮಾತನಾಡಿದ ಅವರು, ವಕ್ಫ್ ಮಂಡಳಿ ಆಸ್ತಿ ಕಬಳಿಕೆ ಕುರಿತಂತೆ ಮೌನ ವಹಿಸಲು ಶಾಸಕ ಬಿ.ವೈ. ವಿಜಯೇಂದ್ರ ತಮಗೆ 150 ಕೋಟಿಗಳ ಆಮಿಷ ಒಡ್ಡಿದ್ದರು ಎಂದು ಅನ್ವರ್ ಮಾಣಿಪ್ಪಾಡಿ ಅವರು ಮಾಡಿರುವ ಆರೋಪ ಸುಳ್ಳು ಎಂಬ ಮಾಣಿಪ್ಪಾಡಿ ಅವರ ಹೇಳಿಕೆ ಬಗ್ಗೆ ಪ್ರತಿಕ್ರಿಯೆ ನೀಡಿದ ಮುಖ್ಯಮಂತ್ರಿಗಳು ಅವರೇ ಸ್ವತಃ ಹಿಂದೆ ಆಮಿಷ ಒಡ್ಡಿದ್ದರು ಎಂದು ಹೇಳಿರುವುದರ ಮೇಲೆ ನಾವು ಪ್ರತಿಕ್ರಿಯೆ ನೀಡಿದ್ದೇವೆ. ಅವರೇ ಪತ್ರಿಕಾಗೋಷ್ಠಿ ಕರೆದು ನೀಡಿರುವ ಹೇಳಿಕೆಗೆ ನನ್ನ ಪ್ರಕಾರ ಪ್ರತಿಕ್ರಿಯೆ ನೀಡಿರುವುದು ಸರಿಯಾಗಿದೆ. ಈಗ ಬಹಳ ವರ್ಷಗಳ ನಂತರ ಹೇಳಿಲ್ಲ ಎನ್ನುತ್ತಿದ್ದಾರೆ. ಏನು ಮಾಡಬೇಕು ಎಂದು ನೀವೇ ಹೇಳಿ ಎಂದು ಮುಖ್ಯಮಂತ್ರಿಗಳು ಮಾಧ್ಯಮದವರನ್ನು ಪ್ರಶ್ನಿಸಿದರು.

ಪ್ರಹ್ಲಾದ ಜೋಶಿ ಅವರು ಪಂಚಮಸಾಲಿ ಸಮುದಾಯಕ್ಕೆ ವನ್ನು ಪ್ರವರ್ಗ 2ಎ ಮೀಸಲಾತಿಗೆ ಸಂಬಂಧಿಸಿದಂತೆ ನಡೆಯುತ್ತಿರುವ ಹೋರಾಟದಲ್ಲಿ ಆಗಿರುವ ಅವಘಡಕ್ಕಾಗಿ ಸಿಎಂ ಕ್ಷಮೆ ಕೇಳಬೇಕು ಎಂದು ಹೇಳಿರುವ ಬಗ್ಗೆ ಪ್ರತಿಕ್ರಿಯೆ ನೀಡಿ ಯಾರು ಸಮಸ್ಯೆಯನ್ನು ಇತ್ಯರ್ಥ ಮಾಡಿಲ್ಲವೋ ಅವರೇ ಕ್ಷಮೆ ಕೇಳಲಿ ಎಂದು ಮುಖ್ಯಮಂತ್ರಿಗಳು ತಿಳಿಸಿದರು.

# ತಬಲಾ ಸಾಮ್ರಾಟ ಹುಸೇನ್ ನಿಧನ

ಒಲವು ಹೊಂದಿದ್ದರು.ಅವರು ಕೇವಲ 11 ನೇ ವಯಸ್ಸಿನಲ್ಲಿ ಅಮೆರಿಕಾದಲ್ಲಿ ತಮ್ಮ ಮೊದಲ ಸಂಗೀತ ಕಚೇರಿ ನಡೆಸಿದ್ದಾರೆ.ಇದರ ನಂತರ, ಅವರು 1973 ರಲ್ಲಿ ತಮ್ಮ ಮೊದಲ ಆಲ್ಬಂ ಲಿವಿಂಗ್ ಇನ್ ದಿ ಮೆಟೀರಿಯಲ್ ವರ್ಲ್ಡ್ ಹೊರ ತಂದಿದ್ದಾರೆ.

ಜಾಕೀರ್ ತಬಲಾವನ್ನು ಸದಾ ಮಗುವಿನಂತೆ ಮಡಿಲಲ್ಲಿಟ್ಟುಕೊಂಡು ಕಾಪಾಡುತ್ತಿದ್ದರು ಎಂಬುದು ಅವರನ್ನು ಬಲ್ಲವರ ನುಡಿ.

1979 ರಿಂದ 2007 ರವರೆಗೆ, ಜಾಕಿರ್ ಹುಸೇನ್ ಅನೇಕ ಅಂತರರಾಷ್ಟ್ರೀಯ ಉತ್ಸವಗಳು ಮತ್ತು ಆಲ್ಬಂಗಳಲ್ಲಿ ತಮ್ಮನ್ನು ತೊಡಗಿಸಿಕೊಂಡಿದ್ದಾರೆ.

ಉಸ್ತಾದ್ ಜಾಕಿರ್ ಹುಸೇನ್ ಪ್ರಸಿದ್ಧ ತಬಲಾ ವಾದಕ ಅಲ್ಲಾ ರಖಾ ಅವರ ಹಿರಿಯ ಮಗ. ಜಾಕಿರ್ ಅವರಿಗೆ ತಂದೆಯೇ ಗುರು.ಝಾಕಿರ್ ತನ್ನ ತಂದೆಯ ಗರಡಿಯಲ್ಲಿ ತಬಲಾ ನುಡಿಸುವ ಈ ಕೌಶಲ್ಯವನ್ನು ಪಡೆದಿದ್ದಾರೆ. ಅವರು ತಮ್ಮ ತಂದೆಯ ಪರಂಪರೆಯನ್ನು ಮುಂದುವರೆಸಿ ಪ್ರಪಂಚದಾದ್ಯಂತ ಖ್ಯಾತಿಯನ್ನು ಗಳಿಸಿದ್ದಾರೆ.

ಅವರು ಕಥಕ್ ನೃತ್ಯಗಾರ್ತಿ ಮತ್ತು ಶಿಕ್ಷಕಿ ಆಂಟೋನಿಯಾ ಮಿನ್ನೆಕೋಲಾ ಅವರನ್ನು ವಿವಾಹವಾದರು. ಅವರಿಗೆ ಅನಿಸಾ ಖುರೇಷಿ ಮತ್ತು ಇಸಾಬೆಲ್ಲಾ ಖುರೇಷಿ ಎಂಬ ಇಬ್ಬರು ಹೆಣ್ಣು ಮಕ್ಕಳಿದ್ದಾರೆ. ಅನೀಸಾ ಯುಸಿಎಲ್‌ಯಿಂದ ಪದವಿ ಪಡೆದಿದ್ದಾರೆ ಮತ್ತು ಚಲನಚಿತ್ರ ನಿರ್ಮಾಪಕಿಯಾಗಿದ್ದಾರೆ. ಜಾಕಿರ್ ಹುಸೇನ್ ಅವರಿಗೆ ಇಬ್ಬರು ಸಹೋದರರು ಇದ್ದು, ಇಬ್ಬರು ತಬಲಾ ವಾದಕರು.

ಅವರು ನಾಲ್ಕು ದಶಕಗಳ ಹಿಂದೆ ತಮ್ಮ ಕುಟುಂಬದೊಂದಿಗೆ ಸ್ಯಾನ್ ಫ್ರಾನ್ಸಿಸ್ಕೋಗೆ ಸ್ಥಳಾಂತರಗೊಂಡಿದ್ದರು.

ಜಾಕಿರ್ ಹುಸೇನ್ 1988 ರಲ್ಲಿ ಕೇವಲ 37 ನೇ ವಯಸ್ಸಿನಲ್ಲಿ ಪದ್ಮಶ್ರೀ ಪ್ರಶಸ್ತಿಯನ್ನು ಪಡೆದಿದ್ದಾರೆ. ಅದರ ನಂತರ, 2002 ರಲ್ಲಿ, ಅವರು ಸಂಗೀತ ಕ್ಷೇತ್ರದಲ್ಲಿ ಅವರ ಕೊಡುಗೆಗಾಗಿ ಪದ್ಮಭೂಷಣ ಪ್ರಶಸ್ತಿಯನ್ನು ನೀಡಿ ಗೌರವಿಸಲಾಗಿದೆ. 22 ಮಾರ್ಚ್ 2023 ರಂದು ರಾಷ್ಟ್ರಪತಿ ದ್ರೌಪದಿ ಮುರ್ಮು ಅವರು ಪದ್ಮವಿಭೂಷಣ ನೀಡಿ ಗೌರವಿಸಿದ್ದಾರೆ.

## ಮೊದಲ ಪುಟದಿಂದ

### ವಿಜಯೇಂದ್ರ ಗರಂ

ಪ್ರಿಯಾಂಕ ಖರ್ಗೆಯವರೆಲ್ಲಾ ಎದ್ದುನಿಂತು ವಿಜಯೇಂದ್ರರವರ ಮಾತಿಗೆ ಆಕ್ಷೇಪ ವ್ಯಕ್ತಪಡಿಸಿದರು.

ಈ ಹಂತದಲ್ಲಿ ಆಡಳಿತ ಮತ್ತು ವಿಪಕ್ಷ ಸದಸ್ಯರ ನಡುವೆ ಮಾತಿನ ಚಕಮಕಿ ನಡೆದು ಗದ್ದಲದ ವಾತಾವರಣ ರೂಪುಗೊಂಡಿತು.

ಈ ಗದ್ದಲದಲ್ಲೇ ಮಾತನಾಡಿದ ವಿಜಯೇಂದ್ರ ಅವರು, ಎಲ್ಲದರ ಬಗ್ಗೆಯೂ ಮುಖ್ಯಮಂತ್ರಿ ಸಿದ್ದರಾಮಯ್ಯನವರು ಸಿಬಿಐ ತನಿಖೆಗೆ ಕೊಡಲಿ. ಅವರಿಗೆ ಪರಮಾಧಿಕಾರ ಇದೆ ಎಂದು ಹೇಳಿ, ಯಡಿಯೂರಪ್ಪನವರನ್ನು ಹತ್ತಿಕ್ಕುವ ಷಡ್ಯಂತ್ರ ಮೊದಲಿನಿಂದಲೂ ನಡೆದಿದೆ. ಇದಕ್ಕೆಲ್ಲಾ ಹೆದರಿ ಓಡಿ ಹೋಗಲ್ಲ ಎಂದರು.

ಸದನದಲ್ಲಿ ಸಚಿವ ಪ್ರಿಯಾಂಕ ಖರ್ಗೆಯವರು ಹಿಟ್ ಅಂಡ್ ರನ್ ಮಾಡುವುದು ಸರಿಯಲ್ಲ. ಅವರು ಶುದ್ಧಹಸ್ತರಂತೆ ಮಾತನಾಡುತ್ತಾರೆ. ಕೆಐಎಡಿಬಿ ಜಮೀನನ್ನು ವಾಪಸ್ ಕೊಡಲಿಲ್ಲವೇ ಎಂದು ತಿರುಗೇಟು ನೀಡಿದರು. ಇದಕ್ಕೆ ದನಿಗೂಡಿಸಿದ ಪ್ರತಿಪಕ್ಷ ನಾಯಕ ಆರ್. ಅಶೋಕ್, ಪತ್ರಿಕಾ ವರದಿ ಮೇಲೆ ಸಚಿವರು ಬೇಜವಾಬ್ದಾರಿ ಹೇಳಿಕೆ ಕೊಡಬಾರದು ಎಂದಾಗ, ಮತ್ತೆ ಎದ್ದುನಿಂತ ಪ್ರಿಯಾಂಕ ಖರ್ಗೆಯವರು, ನಾನು ಬೇಜವಾಬ್ದಾರಿಯಿಂದ ಹೇಳಿಕೆ ನೀಡಿಲ್ಲ. ಪತ್ರಿಕಾ ವರದಿ ಆಧರಿಸಿ ಹೇಳಿದ್ದೇನೆ. ನನಗೂ ಮಾತನಾಡಲು ಅವಕಾಶ ಕೊಡಿ ಯಎಂದು ಸಭಾಧ್ಯಕ್ಷರಲ್ಲಿ ಮನವಿ ಮಾಡಿದರು. ಈ ಹಂತದಲ್ಲಿ ಮತ್ತೆ ಆಡಳಿತ ಮತ್ತು ವಿಪಕ್ಷ ಸದಸ್ಯರ ನಡುವೆ ಮಾತಿನ ಚಕಮಕಿ ನಡೆದು ಗದ್ದಲ, ಕೋಲಾಹಲದ ವಾತಾವರಣ ರೂಪುಗೊಂಡಿತು. ಆಗ ಸಭಾಧ್ಯಕ್ಷರು ಮಧ್ಯೆಪ್ರವೇಶಿಸಿ ಒಬ್ಬರಿಗೊಬ್ಬರು ಮಾತನಾಡುತ್ತಿದ್ದರೆ ಚರ್ಚೆ ನಿಲ್ಲಲ್ಲ. ಈಗ ಉತ್ತರ ಕರ್ನಟಾಕದ ಬಗ್ಗೆ ಚರ್ಚೆ ಮಾಡೋಣ. ಇದನ್ನು ಇಲ್ಲಿಗೆ ಬಿಡಿ ಎಂದು ಹೇಳಿದರು. ಅದಕ್ಕೆ ಒಪ್ಪದ ಸಚಿವ ಪ್ರಿಯಾಂಕ ಖರ್ಗೆ ನನಗೆ ಮಾತನಾಡಲು ಅವಕಾಶ ಕೊಡಿ ಎಂದರು. ಆಗ ಬಿಜೆಪಿಯ ವಿಜಯೇಂದ್ರ ಸೇರಿದಂತೆ ಹಲವು ಸದಸ್ಯರು ಪ್ರಿಯಾಂಕ ಖರ್ಗೆಯವರು ಕ್ಷಮೆಯಾಚಿಸಿ, ನಂತರ ಮಾತನಾಡಲಿ ಎಂದು ಒತ್ತಾಯಿಸಿದರು. ಪ್ರತಿಪಕ್ಷ ನಾಯಕ ಆರ್. ಅಶೋಕ್, ಬಿಜೆಪಿಯ ಅಶ್ವತ್ಥ್‌ನಾರಾಯಣ, ಅರವಿಂದ ಬೆಲ್ಲದ್ ಇವರೆಲ್ಲಾ ಮಾತನಾಡಿ ತಾಕತ್ತಿದ್ದರೆ, ಧಮ್ಮಿದ್ದರೆ ಈ ಬಗ್ಗೆ ಸಿಬಿಐ ತನಿಖೆ ಮಾಡಿ. ನೀವು ಮಾತನಾಡಿ, ನಮ್ಮದೇನು ಅಭ್ಯಂತರವಿಲ್ಲ ಎಂದರು. ಆಗ ಸಭಾಧ್ಯಕ್ಷ ಯು.ಟಿ. ಖಾದರ್ ಎಲ್ಲರನ್ನೂ ಸಮಾಧಾನಗೊಳಿಸಿ, ವಾತಾವರಣವನ್ನು ತಿಳಿಸಿಗೊಳಿಸಿ, ಉತ್ತರ ಕರ್ನಾಟಕ ಭಾಗದ ಚರ್ಚೆಯನ್ನು ಕೈಗೆತ್ತಿಕೊಂಡು ಎಲ್ಲ ಗದ್ದಲಕ್ಕೆ ತೆರೆ ಎಳೆದರು.

### ಬಿಜೆಪಿಯವರು ಧಮ್ಕಿ ಹಾಕಿರಬಹುದು

ಪರ, ವಿರೋಧ ಟೀಕೆ ಟಿಪ್ಪಣಿ ಬರುತ್ತವೆ. ನಾವು ಸರ್ಕಾರದಲ್ಲಿ ಚರ್ಚೆ ಮಾಡುತ್ತೇವೆ. ಯಾರಿದ್ದಾರೆ ಇರಲಿ ತನಿಖೆ ಮಾಡೋಣ. ಯಾರದ್ದು ತಪ್ಪಿರುತ್ತೆ ಹೊರಬರುತ್ತದೆ" ಎಂದರು.

ರಾಜಕೀಯ ಒತ್ತಡದಿಂದ ಯೂಟರ್ನ್ ಎಂದ ಡಿಕೆಶಿ: ಸುವರ್ಣಸೌಧದ ಆವರಣದಲ್ಲಿ ಮಾತನಾಡಿದ ಡಿಸಿಎಂ ಡಿ.ಕೆ. ಶಿವಕುಮಾರ್, ಅನ್ವರ್ ಮಾಣಿಪ್ಪಾಡಿ ಅವರು ತಮ್ಮ ಹೇಳಿಕೆ ಬದಲಿಸುವ ವಿಚಾರವಾಗಿ ಪ್ರತಿಕ್ರಿಯಿಸುತ್ತಾ, "ಮಾಜಿ ಅಧ್ಯಕ್ಷರ ಹೇಳಿಕೆ ವಿಡಿಯೋಗಳು ಮಾಧ್ಯಮ ಹಾಗೂ ಸಾಮಾಜಿಕ ಜಾಲತಾಣಗಳಲ್ಲಿ ಬಂದಿರುವುದನ್ನು ನಾನು ಗಮನಿಸಿದ್ದೇನೆ. ಅನೇಕ ವಿಚಾರಗಳು ಅವರ ಬಾಯಲ್ಲೇ ಬಂದಿವೆ. ತಮ್ಮ ವಿಚಾರವನ್ನು ಪ್ರಧಾನಮಂತ್ರಿ ಹಾಗೂ ಗೃಹಮಂತ್ರಿಗಳಿಗೆ ಪತ್ರ ಬರೆದು ತಿಳಿಸಿರುವುದಾಗಿ ಹೇಳಿದ್ದರು. ಅವರು ಹೇಳಿರುವ ವಿಚಾರಗಳನ್ನು ಮುಖ್ಯಮಂತ್ರಿಗಳು ಉಲ್ಲೇಖಿಸಿದ್ದಾರೆ. ಈ ದಾಖಲೆಗಳು ಎಲ್ಲೂ ಹೋಗಲು ಸಾಧ್ಯವಿಲ್ಲ. ನಾವು ದಾಖಲೆ ಬಿಡುಗಡೆ ಮಾಡುವ ಮುನ್ನ ಅವರೇ ಈ ದಾಖಲೆಗಳನ್ನು ಬಿಡುಗಡೆ ಮಾಡಲಿ" ಎಂದು ತಿಳಿಸಿದರು. ಪ್ರಕರಣವನ್ನು ಸಿಬಿಐ ತನಿಖೆಗೆ ಒಪ್ಪಿಸಬೇಕು ಎಂದು ಸಿಎಂ ಹೇಳಿದ್ದು, ಸಿಬಿಐಗೆ ವಹಿಸುವ ವಿಚಾರವಾಗಿ ಮಾತನಾಡಿ, "ಈ ಪ್ರಕರಣದ ಎಲ್ಲಾ ವಿಚಾರ ನಮ್ಮ ಕಣ್ಮುಂದೆ ಇದೆ. ಸಿಬಿಐನವರು ಈ ಪ್ರಕರಣದ ತನಿಖೆ ಮಾಡುವುದಾಗಿ ರಾಜ್ಯ ಸರ್ಕಾರಕ್ಕೆ ಪತ್ರ ಬರೆಯಲಿ. ನಂತರ ನಾವು ಆಲೋಚನೆ ಮಾಡುತ್ತೇವೆ. ನಾವಾಗಿ ಸಿಬಿಐ ತನಿಖೆಗೆ ನೀಡುವುದಿಲ್ಲ ಎಂದು ಬಿಜೆಪಿ ಅವರಿಗೆ ಗೊತ್ತಿದೆ. ಹೀಗಾಗಿ, ಅವರು ಸಿಬಿಐ ತನಿಖೆಗೆ ಕೇಳುತ್ತಿದ್ದಾರೆ" ಎಂದರು.

ಈ ವಿಚಾರವಾಗಿ ಯಾಕೆ ಗೊಂದಲ ಮಾಡಲಾಗುತ್ತಿದೆ ಎಂದು ಕೇಳಿದಾಗ, "ಗೊಂದಲ ಮಾಡುತ್ತಿರುವವರು ನೀವು. ಅವರ ಹೇಳಿರುವ ಮಾತನ್ನು ನೀವು ಪ್ರಕಟಿಸಿದ್ದೀರಿ. ಈ ವಿಚಾರವನ್ನು ಸಿಎಂ ಟ್ವೀಟ್ ಮಾಡಿದ್ದಾರೆ. ಈ ವಿಚಾರ ಮುಚ್ಚಿಕೊಳ್ಳಲು ಅವರಿಂದ ವಿಭಿನ್ನ ಹೇಳಿಕೆ ಕೊಡಿಸಲಾಗಿದೆ. ಅವರು ಹೇಳಿಕೆ ನೀಡಿರುವುದು ಸತ್ಯ. ಬೇಕಾದರೆ ಅವರ ಧ್ವನಿ ನೀವೇ ಪರಿಶೀಲಿಸಿ" ಎಂದು ತಿಳಿಸಿದರು. ಕಾಂಗ್ರೆಸ್ ನಾಯಕರು ನನಗೆ ಆಫರ್ ಕೊಟ್ಟಿದ್ದಾರೆ ಎಂಬ ಅನ್ವರ್ ಅವರ ಹೇಳಿಕೆಗೆ ಪ್ರತಿಕ್ರಿಯಿಸಿ, "ಈ ವಿಚಾರವನ್ನು ಮೊದಲೇ ಹೇಳಬೇಕಿತ್ತು. ಯಾರೆಲ್ಲಾ ಆಫರ್ ಕೊಟ್ಟಿದ್ದರು ಎಂದು ಆಗ ಹೇಳದೆ, ಈಗ ಹೇಳಿದರೆ ಏನು ಪ್ರಯೋಜನ? ಅಧಿಕಾರ ಇದ್ದಾಗ ಏನು ಹೇಳುತ್ತೇವೆ ಎಂಬುದು ಮುಖ್ಯ" ಎಂದರು.

### ಮಾಣಿಪ್ಪಾಡಿ ಯೂಟರ್ನ್

ಈ ವಿಚಾರ ಮುಚ್ಚಿಕೊಳ್ಳಲು ಅವರಿಂದ ವಿಭಿನ್ನ ಹೇಳಿಕೆ ಕೊಡಿಸಲಾಗಿದೆ. ಅವರು ಹೇಳಿಕೆ ನೀಡಿರುವುದು ಸತ್ಯ. ಬೇಕಾದರೆ ಅವರ ಧ್ವನಿ ನೀವೇ ಪರಿಶೀಲಿಸಿ" ಎಂದು ತಿಳಿಸಿದರು. ಕಾಂಗ್ರೆಸ್ ನಾಯಕರು ನನಗೆ ಆಫರ್ ಕೊಟ್ಟಿದ್ದಾರೆ ಎಂಬ ಅನ್ವರ್ ಅವರ ಹೇಳಿಕೆ ಬಗ್ಗೆ ಕೇಳಿದಾಗ, "ಈ ವಿಚಾರವನ್ನು ಮೊದಲೇ ಹೇಳಬೇಕಿತ್ತು. ಯಾರೆಲ್ಲಾ ಆಫರ್ ಕೊಟ್ಟಿದ್ದರು ಎಂದು ಆಗ ಹೇಳದೆ, ಈಗ ಹೇಳಿದರೆ ಏನು ಪ್ರಯೋಜನ? ಅಧಿಕಾರ ಇದ್ದಾಗ ಏನು ಹೇಳುತ್ತೇವೆ ಎಂಬುದು ಮುಖ್ಯ" ಎಂದು ತಿಳಿಸಿದರು.

### ಕಾಂಗ್ರೆಸ್ ವಿರುದ್ಧ ವಾಗ್ದಾಳಿ

ಆದರೆ ಸದನ ಡೈವರ್ಟ್ ಮಾಡುಲು ಪ್ಲಾನ್ ಮಾಡಿದ್ದಾರೆ ಎಂದು ಕಿಡಿಕಾರಿದರು. ಈಗಾಗಲೇ ಅಧೀವೇಶನದಲ್ಲಿ ವಕ್ಫ್ ವಿಚಾರ ಚರ್ಚಿಸಿದ್ದೇವೆ. ಇಂದು ಸದನದಲ್ಲಿ ಉತ್ತರ ಕರ್ನಾ ಟಕದ ಬಗ್ಗೆ ಚರ್ಚಿಸಲು ಆಗ್ರಹಿಸುತ್ತೇನೆ. ಆದ್ರೆ ಕಾಂಗ್ರೆಸ್ ನಾಯಕರು ಹಗರಣದಲ್ಲಿ ಸಿಲುಕಿದ್ದಾರೆ. ಸರ್ಕಾರಕ್ಕೆ ಪಲಯಾನ ಮಾಡುವ ಆತುರ. ಉತ್ತರ ಕರ್ನಾಟಕ ಚರ್ಚೆಗೆ ಸರ್ಕಾರ ಸಿದ್ದವಿಲ್ಲ. ಕಾಂಗ್ರೆಸ್ ನಾಯಕರು ಹಗರಣಗಳಲ್ಲಿ ಸಿಲುಕಿದ್ದಾರೆ. ಚರ್ಚೆ ಮಾಡಿದರೆ ಹೊರಗೆ ಬರುತ್ತೆ ಅನ್ನೋ ಭಯ ಎಂದು ಟೀಕಿಸಿದರು.

### ನ್ಯಾಯಾಂಗ ಬಂಧನ

ಮಾಡಿದ್ದರು. ಆ ವಿಡಿಯೋ ವೈರಲ್ ಆಗಿತ್ತು. ಪ್ರಕರಣಕ್ಕೆ ಸಂಬಂಧಿಸಿ ಪ್ರತಾಪ್ ಅಲ್ಲದೇ, ಜಮೀನಿನ ಮಾಲೀಕ ಜಿತೇಂದ್ರ ಜೈನ್ ಮತ್ತು ಇತರರ ವಿರುದ್ಧ ಕಾಯ್ದೆ ಸೆಕ್ಷನ್ 176, ಸಿಆರ್‌ಪಿಸಿ 158ಎ ಮತ್ತು ಬಿ ಹಾಗೂ ಸ್ಫೋಟಕ ವಸ್ತುಗಳ ನಿಯಂತ್ರಣ ಕಾಯ್ದೆಯಡಿ ಮಧುಗಿರಿಯ ಮಿಡಿಗೇಶಿ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

# ನನಗೆ 150 ಕೋಟಿ ಆಫರ್ ಮಾಡಿರಲಿಲ್ಲ

ಮಂಗಳೂರು: "ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಆರೋಪ ಮಾಡಿರುವಂತೆ ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ ನನಗೆ 150 ಕೋಟಿ ರೂ. ಆಫರ್ ಮಾಡಿರಲಿಲ್ಲ. ಸಿದ್ದರಾಮಯ್ಯರಿಗೆ ಈ ಬಗ್ಗೆ ಮಾತನಾಡುವ ಹಕ್ಕಿಲ್ಲ" ಎಂದು ಅಲ್ಪಸಂಖ್ಯಾತ ಆಯೋಗದ ಮಾಜಿ ಅಧ್ಯಕ್ಷ ಅನ್ವರ್ ಮಾಣಿಪ್ಪಾಡಿ ಸ್ಪಷ್ಟಪಡಿಸಿದ್ದಾರೆ.

ಈ ಬಗ್ಗೆ ಮಾಧ್ಯಮದವರೊಂದಿಗೆ ಪ್ರತಿಕ್ರಿಯಿಸಿದ ಅವರು, "2012ರ ಮಾರ್ಚ್‌ನಲ್ಲಿ ವಕ್ಫ್ ಬೋರ್ಡ್ ಆಸ್ತಿ ಕಬಳಿಕೆ ಬಗ್ಗೆ ವರದಿ ನೀಡಿದ್ದು, ಇದರಲ್ಲಿ 2 ಲಕ್ಷ 30 ಸಾವಿರ ಕೋಟಿ ರೂ. ಹಗರಣ ಆಗಿರುವುದನ್ನು ತಿಳಿಸಿದ್ದೆ. ಆದರೆ ಇದರ ವಿಚಾರದಲ್ಲಿ ಬಿ.ವೈ.ವಿಜಯೇಂದ್ರ ಇರಲಿಲ್ಲ. ನಾನು ವರದಿಯನ್ನು ಅನುಷ್ಠಾನ ಮಾಡುವ ಬಗ್ಗೆ ತುಂಬಾ ಉತ್ಸುಕನಾಗಿದ್ದೆ. ಯಾರಾದರೂ ನನ್ನನ್ನು ಹಿಂದೆ ಸರಿಯುವಂತೆ ಮಾಡಿದರೆ, ನನಗೆ ಕೋಪ ಬರುತ್ತಿತ್ತು" ಎಂದರು.

ವಿಜಯೇಂದ್ರಗೆ ನನ್ನ ಮನೆಯೂ ಗೊತ್ತಿಲ್ಲ: "ವಿಜಯೇಂದ್ರ ನನ್ನ ಮನೆಗೆ ಬರಲೇ ಇಲ್ಲ, ನನ್ನ ಮನೆಯೂ ಅವರಿಗೆ ಗೊತ್ತಿಲ್ಲ. ನಮ್ಮ ಪಕ್ಷದ ಕಚೇರಿಗೆ ಬಂದಾಗ ವಿಜಯೇಂದ್ರ ಮತ್ತು ನಾನು ಮಾತನಾಡಿಕೊಂಡಿದ್ದೆವು. ನಿಮ್ಮದೇ ಸರ್ಕಾರ ಇರುವಾಗ ನಿಮ್ಮ ಅಪ್ಪಾಜಿ (ಯಡಿಯೂರಪ್ಪ) ಯಾಕೆ ಇದನ್ನು ಅನುಷ್ಠಾನ ಮಾಡಿಲ್ಲ ಎಂದು ನಾನು ಪ್ರಶ್ನಿಸಿದಾಗ ಅವರು ನೀವು ಈ ವಿಚಾರದಲ್ಲಿ ತುಂಬಾ ಹೋರಾಟ ಮಾಡಿದ್ದೀರಿ. ಈ ವಿಚಾರವನ್ನು ಕೈಬಿಡುವುದಾದರೆ ಬಿಡಿ ಎಂದು ಹೇಳಿದ್ದರು. ಆಗ ನಾನು ಅವರೊಂದಿಗೆ ಕೋಪದಲ್ಲಿ ಜೋರಾಗಿ ಮಾತಾಡಿದ್ದೆ. ಆದರೆ ಅವರು 150 ಕೋಟಿ ರೂ. ಆಫರ್ ಮಾಡಿಯೇ ಇಲ್ಲ" ಎಂದು ಸ್ಪಷ್ಟನೆ ನೀಡಿದ್ದಾರೆ.

"2013ರಲ್ಲೇ ಕಾಂಗ್ರೆಸ್‌ನವರು ನಾನು ಕೇಳಿದಷ್ಟು ಹಣ ಕೊಡುವ ಸ್ಥಿತಿಯಲ್ಲಿದ್ದರು. ಇದು 2.3 ಲಕ್ಷ ಕೋಟಿ ರೂ. ಹಗರಣವಾಗಿತ್ತು. ಅದರಲ್ಲಿ ದೊಡ್ಡ ದೊಡ್ಡ ತಲೆಗಳೇ



ಭಾಗಿಯಾಗಿದ್ದವು. ಅದಕ್ಕೆ ಎಲ್ಲ ಸಾಕ್ಷಿಗಳೂ ಇವೆ" ಎಂದು ಆರೋಪಿಸಿದ್ದಾರೆ.

ಎಲ್ಲವೂ ವೋಟ್ ಬ್ಯಾಂಕ್‌ಗೋಸ್ಕರ: "ಸಿದ್ದರಾಮಯ್ಯ ಅವರು 1 ಲಕ್ಷ 60 ಸಾವಿರ ಎಕರೆ ಜಮೀನಿಗೆ ಕಬಳಿಕೆ ಆಗಿದೆ ಎಂದು ಇತ್ತೀಚೆಗೆ ನೋಟಿಸ್ ಕೊಟ್ಟರು. ಆದರೆ ವಕ್ಫ್ ಆಸ್ತಿ ಇರುವುದು 54 ಸಾವಿರ ಎಕರೆ ಮಾತ್ರ. ಅದರಲ್ಲಿ 29 ಸಾವಿರ ಎಕರೆ ಮಾತ್ರ ಕಬಳಿಕೆ ಆಗಿದೆ. ಹೀಗಿರುವಾಗ 1 ಲಕ್ಷ 60 ಸಾವಿರ ಎಕರೆ ಜಮೀನಿಗೆ ನೋಟಿಸ್ ಯಾಕೆ ಕೊಟ್ಟರು. ಅವರ ಮೇಲಿನ ಪ್ರೀತಿಯಿಂದ ಕೊಟ್ಟಿರಬಹುದು. ಆದರೆ ಆ ಬಳಿಕ ನೋಟಿಸ್ ಹಿಂಪಡೆದಿದ್ದು ಯಾಕೆ? ವೋಟ್ ಬ್ಯಾಂಕ್‌ಗೋಸ್ಕರ ಹಾಗೂ ಗೊಂದಲ ಸೃಷ್ಟಿಸಲು ಹೀಗೆ ಮಾಡಿದ್ದಾರೆ" ಎಂದು ಅನ್ವರ್ ಮಾಣಿಪ್ಪಾಡಿ ಆರೋಪ ಮಾಡಿದ್ದಾರೆ.

"ನಿಜವಾಗಿಯೂ ಸಿದ್ಧರಾಮಗೆ ಅಲ್ಪಸಂಖ್ಯಾತರ ಮೇಲೆ ಕನಿಕರ ಇದ್ದರೆ, ಪುರುಷತ್ವ, ಮನುಷ್ಯತ್ವ ಇದ್ದರೆ ನನ್ನ ವರದಿಯ ಹಿನ್ನೆಲೆಯಲ್ಲಿ ಪ್ರಕರಣವನ್ನು ಸಿಬಿಐ ತನಿಖೆಗೆ ಕೊಡಲಿ. ಆಗ ನಿಮ್ಮ ನಾಯಕತ್ವವನ್ನು ಒಪ್ಪಿಕೊಳ್ಳುತ್ತೇನೆ" ಎಂದು ಸವಾಲು ಹಾಕಿದ ಅನ್ವರ್ ಮಾಣಿಪ್ಪಾಡಿ , "ಅವರಿಗೆ ಎಲ್ಲರೂ ಒಟ್ಟಾಗಿ ಇರಬೇಕೆಂಬ ಆಶಯ ಇಲ್ಲ" ಎಂದರು.

## ಸುದ್ದಿ ಸಂಜೆ

### ಮಾತು ಬದಲಿಸಲು ಎಷ್ಟು 'ಆಫರ್' ಬಂದಿದೆ

**ಬೆಂಗಳೂರು:** "ವಿಜಯೇಂದ್ರ ಮೇಲಿನ ಆರೋಪ ಸುಳ್ಳು ಎನ್ನುತ್ತಿರುವ ಅನ್ವರ್ ಮಾಣಿಪ್ಪಾಡಿಯವರು ದ್ವಿಪಾತ್ರಭಿನಯ ಮಾಡುತ್ತಿದ್ದಾರೆಯೇ?" ಎಂದು ಸಚಿವ ಪ್ರಿಯಾಂಕ್ ಖರ್ಗೆ ಪ್ರಶ್ನಿಸಿದ್ದಾರೆ.



ಈ ಸಂಬಂಧ ಸಾಮಾಜಿಕ ಜಾಲತಾಣ ಎಕ್ಸ್‌ನಲ್ಲಿ ಪೋಸ್ಟ್ ಮಾಡಿರುವ ಅವರು, "ರಾಜ್ಯ ಬಿಜೆಪಿ ಅಧ್ಯಕ್ಷ ವಿಜಯೇಂದ್ರ ಅವರ ಹೆಸರನ್ನು ಮೊದಲನೇ ಬಾರಿಗೆ ಪ್ರಸ್ತಾಪಿಸಿದ್ದ ಅನ್ವರ್ ಮಾಣಿಪ್ಪಾಡಿಯವರು, ವಕ್ಫ್ ವರದಿಯನ್ನು ಮುಚ್ಚಿಹಾಕಲು ವಿಜಯೇಂದ್ರ ಕೋಟಿ ಕೋಟಿ ಆಮಿಷ ಒಡ್ಡಿದ್ದಾರೆ ಎಂದು ಪ್ರತಿ ಮಾಧ್ಯಮಗಳಲ್ಲೂ ಘಂಟಾಘೋಷವಾಗಿ ಹೇಳಿದ್ದರು. ಈಗ ಬಿಜೆಪಿ ಅಧ್ಯಕ್ಷ ವಿಜಯೇಂದ್ರರ ರಕ್ಷಣೆಗಾಗಿ ಮಾತು ಬದಲಿಸಿದ್ದಾರೆ. ಅದಕ್ಕಾಗಿ ಅವರಿಗೆ ಎಷ್ಟು ಆಫರ್ ಬಂದಿದೆ?" ಎಂದು ಪ್ರಶ್ನಿಸಿದ್ದಾರೆ.

"ಕಾಂಗ್ರೆಸ್ ನಾಯಕರ ಹೆಸರನ್ನು ಬಹಿರಂಗಪಡಿಸುವ ಬದಲು ಅವರು ವಿಜಯೇಂದ್ರ ಅವರ ಹೆಸರನ್ನು ಮಾತ್ರ ಏಕೆ ಹೇಳಿದರು? ಮಾಣಿಪ್ಪಾಡಿಯವರ ವಕ್ಫ್ ವರದಿಯನ್ನು ಮುಚ್ಚಿಹಾಕುವ ಪ್ರಯತ್ನದ ಕುರಿತು ಪ್ರಧಾನಿ ಮೋದಿ ಹಾಗೂ ಬಿಜೆಪಿ ರಾಷ್ಟ್ರೀಯ ಅಧ್ಯಕ್ಷ ಜೆ. ಪಿ. ನಡ್ಡಾ ಅವರಿಗೆ ಪತ್ರ ಬರೆದಿದ್ದೇನೆ ಎಂದಿದ್ದರು. ಆ ಪತ್ರವನ್ನು ಈಗ ಬಹಿರಂಗಪಡಿಸಲಿ. ಮಾಣಿಪ್ಪಾಡಿಯವರ ಮತ್ತು ಬಿಜೆಪಿ ಗೆಳೆಯರ ನೆನಪುಗಳನ್ನು ರಿಫ್ರೆಶ್ ಮಾಡಲು ದಯವಿಟ್ಟು ವಿಡಿಯೋಗಳು ಮತ್ತು ಪತ್ರಿಕಾ ಲೇಖನಗಳನ್ನು ಅತ್ಯಂತ ಗಮನ ಕೊಟ್ಟು ನೋಡಲಿ" ಎಂದು ಒತ್ತಾಯಿಸಿದ್ದಾರೆ.

"ಬಿಜೆಪಿ ಪಕ್ಷ, ಮಾಜಿ ಮುಖ್ಯಮಂತ್ರಿಗಳ ಹಾಗೂ ಅವರ ಅಧ್ಯಕ್ಷರ ಮರ್ಯಾದೆ ಉಳಿಸಲು, ನಿನ್ನೆ ಇಡೀ ರಾತ್ರಿ ಮಾಣಿಪ್ಪಾಡಿಯವರ ಕೈ ಕಾಲು ಹಿಡಿದು ಗೋಳಾಡಿರಬಹುದೇ. ಸತ್ಯಕ್ಕಾಗಿ ಹಾಗೂ ಸಮುದಾಯಕ್ಕಾಗಿ ಹುತಾತ್ಮರಾಗಲು ಸಿದ್ಧನಿದ್ದೇನೆ ಎಂದಿದ್ದ ಮಾಣಿಪ್ಪಾಡಿಯವರಿಗೆ ಈಗ ಏನಾಯಿತು?" ಎಂದು ಟೀಕಿಸಿದ್ದಾರೆ.

## ಲೋಕಾಯುಕ್ತರ ಹೆಸರಲ್ಲಿ ತಹಶೀಲ್ದಾರ್‌ಗೆ ವಂಚನೆಗೆ ಯತ್ನ

**ಆನೇಕಲ್:** ಉಪ ಲೋಕಾಯುಕ್ತ ನ್ಯಾಯಮೂರ್ತಿ ಬಿ. ವೀರಪ್ಪ ಅವರ ಸಂಬಂಧಿ ಎಂದು ಹೇಳಿಕೊಂಡು ವಿಶೇಷ ತಹಶೀಲ್ದಾರ್ ಮೇಲೆ ಪ್ರಭಾವ ಬೀರಿ ಅಕ್ರಮವಾಗಿ ಜಮೀನು ಖಾತೆ ಬದಲಾವಣೆಗೆ ಯತ್ನಿಸಿದ ವ್ಯಕ್ತಿಯೋರ್ವನನ್ನು ಆನೇಕಲ್ ಪೊಲೀಸರು ಬಂಧಿಸಿದ್ದಾರೆ. ಚಿಕ್ಕಬಳ್ಳಾಪುರ ಮೂಲದ ಆನಂದ್ ಕುಮಾರ್ ಬಂಧಿತ ಆರೋಪಿ.

ಲೋಕಾಯುಕ್ತ ಇಲಾಖೆಯ ಉಪನಿಬಂಧಕ ಅರವಿಂದ್ ಎನ್. ವಿ ಹಾಗೂ ಆನೇಕಲ್ ವಿಶೇಷ ತಹಶೀಲ್ದಾರ್ ಕರಿಯಾನಾಯಕ್ ನೀಡಿದ ದೂರಿನ ಮೇರೆಗೆ ಆನಂದ್ ಕುಮಾರ್‌ನನ್ನು ಬಂಧಿಸಲಾಗಿದೆ.

ಘಟನೆ ವಿವರ: ಆನೇಕಲ್ ವಿಶೇಷ ತಹಶೀಲ್ದಾರ್ ಕರಿಯಾನಾಯಕ್ ಕಚೇರಿಗೆ ಆಗಮಿಸಿದ್ದ ಆರೋಪಿ ಆನಂದ್, ತಾನು ಕರ್ನಾಟಕ ಉಪ ಲೋಕಾಯುಕ್ತ ನ್ಯಾಯಮೂರ್ತಿ ಬಿ. ವೀರಪ್ಪ ಅವರ ಸಂಬಂಧಿಕ ಹಾಗೂ ತಾನು ಕರ್ನಾಟಕ ಲೋಕಾಯುಕ್ತ ಸಂಸ್ಥೆಯ ಉದ್ಯೋಗಿ ಎಂದು ಹೇಳಿ, ಸರ್ಜಾಪುರ ಹೋಬಳಿ ಚಿಕ್ಕನಹಳ್ಳಿ ಸನಂ 18/ಪಿ16 ಹೊಸ ನಂಬರ್ 191 ರ ಒಂದು ಎಕರೆ ಜಮೀನನ್ನು ಎಸ್. ಎನ್. ರಾಮಸ್ವಾಮಿ ಅಡಿಗ ಎಂಬವರಿಂದ ನಾರಾಯಣ ಅಡಿಗ ಎಂಬವರ ಹೆಸರಿಗೆ ಖಾತೆ ಬದಲಾಯಿಸುವಂತೆ ಒತ್ತಡ ಹೇರಿದ್ದ ಎಂದು ವರದಿಯಾಗಿದೆ.

## ಪಂಚಮಸಾಲಿ ಹೋರಾಟಗಾರರು ಗೂಂಡಾಗಳಲ್ಲ

**ಹುಬ್ಬಳ್ಳಿ :** ಪಂಚಮಸಾಲಿ ಮೀಸಲಾತಿಗಾಗಿ ಹೋರಾಟ ಮಾಡಿದವರು ಗೂಂಡಾಗಳಲ್ಲ, ಅವರ್ಯಾರು ಕಾನೂನು ಕೈಗೆ ತೆಗೆದುಕೊಳ್ಳುವವರಲ್ಲ. ಬೇಕಂತಲೇ ಧರ್ಮಾಧಾರಿತ ಮೀಸಲಾತಿಯನ್ನ ವಿತ್‌ಡ್ರಾ ಮಾಡಿ ಇವರಿಗೆ ಕೊಟ್ಟಿದ್ದಕ್ಕೆ ಇವರ ಮೇಲೆ ಒಂದು ರೀತಿಯ ಹಲ್ಲೆ ನಡೆಸುವಂತಹ ಪ್ರಯತ್ನವನ್ನ ಸಿದ್ದರಾಮಯ್ಯನವರು ಮಾಡಿದ್ದಾರೆ ಎಂದು ಕೇಂದ್ರ ಸಚಿವ ಪ್ರಲ್ಹಾದ್ ಜೋಶಿ ಆರೋಪಿಸಿದರು.

ನಗರದಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಪಂಚಮಸಾಲಿ ಸ್ವಾಮೀಜಿಗಳ ನೇತೃತ್ವದಲ್ಲಿ ಹೋರಾಟ ಅತ್ಯಂತ ಶಾಂತಿಯುತವಾಗಿ ನಡೆಯುತ್ತಿತ್ತು ಎಂಬ ಮಾಹಿತಿ ನನಗೆ ಬಂದಿತ್ತು. ನನಗೆ ಸ್ವಾಮಿಗಳು, ಬಸನಗೌಡ ಪಾಟೀಲ್ ಯತ್ನಾಳ್, ಅರವಿಂದ ಬೆಲ್ಲದ್, ಸಿ ಸಿ ಪಾಟೀಲ್ ಫೋನ್ ಮಾಡಿದ್ರು. ಅಲ್ಲಿ ಮಿನಿಮಮ್ ಬಲ ಪ್ರಯೋಗವನ್ನ ಮಾಡಬಹುದಿತ್ತು. ಆದರೆ ಮ್ಯಾಕ್ಸಿಮಮ್ ಬಲ ಪ್ರಯೋಗ ಮಾಡಿದ್ದಾರೆ. ಹಾಗಾಗಿ ಅನೇಕರಿಗೆ ಗಾಯಗಳಾಗಿವೆ. ಅವರನ್ನು ವೈರಿಗಳ ತರಹ ನಡೆಸಿಕೊಂಡಿದ್ದಾರೆ. ಇದನ್ನು ನಾನು ತೀವ್ರವಾಗಿ ಖಂಡಿಸುತ್ತೇನೆ ಎಂದರು.



ವಿಜಯೇಂದ್ರ 150 ಕೋಟಿ ರೂ. ಆಮಿಷ ಒಡ್ಡಿದ್ದಾರೆಂಬ ಸಿಎಂ ಸಿದ್ದರಾಮಯ್ಯ ಆರೋಪಕ್ಕೆ ಪ್ರತಿಕ್ರಿಯಿಸಿದ ಅವರು, ಇದು ಉತ್ತರ ಕೊಡಲು ಯೋಗ್ಯವಲ್ಲದ ಆರೋಪ. ಸಿದ್ದರಾಮಯ್ಯನವರು 1500 ಕೋಟಿ ಎಂದು ಹೇಳಬೇಕಿತ್ತು, ಬೈ ಮಿಸ್ಟೇಕ್ 150 ಕೋಟಿ ಎಂದಿರಬೇಕು. ಇದು ಅಟ್ಟರ್ ನಾನ್ ಸೆನ್ಸ್, ಅನ್ವರ್ ಮಣಪ್ಪಾಡಿ ಹೇಳಿಕೆಯಿಲ್ಲ. ಇದರಿಂದ ಎಷ್ಟು ಬೇಜಾವ್ದಾರಿ ಇದ್ದಾರೆ ಎಂಬುದು ಅರ್ಥವಾಗುತ್ತದೆ. ನಮ್ಮ ಅವಧಿಯಲ್ಲೂ ಕೆಲ ನೋಟಿಸ್ ಹೋಗಿರಬಹುದು. ಅದನ್ನು ಸೇರಿಸಿ ತೆಗೆಯಿರಿ ಎಂದು ಹೇಳಿದರು.

ವಿಜಯೇಂದ್ರ ನಮ್ಮ ಮನೆಗೆ ಬಂದಿದ್ದ ಎಂದು ಅನ್ವರ್ ಮಣಪ್ಪಾಡಿ ಹೇಳಿಲ್ಲ. ಕಾಂಗ್ರೆಸ್‌ನವರು ತಾವು ಮಾಡಿರುವ ಅಪಚಾರ ಮುಚ್ಚಿಕೊಳ್ಳಲು ಈ ಆರೋಪ ಮಾಡುತ್ತಿದ್ದಾರೆ ಎಂದು ಜೋಶಿ ತಿರುಗೇಟು ನೀಡಿದರು.

ಕೋವಿಡ್ ವಿಚಾರವಾಗಿ ಬೆದರಿಸುವ ತಂತ್ರ ಮಾಡುತ್ತಿದ್ದಾರೆ. ಬೆದರಿಸುವ ತಂತ್ರಕ್ಕೆ ಹೆದರಿಲ್ಲ ಎಂದ ತಕ್ಷಣ ಎಫ್‌ಐಆರ್ ಮಾಡಿದ್ರು. ಸಿದ್ದರಾಮಯ್ಯನವರ ವಿರುದ್ಧ ನಡೆಯುತ್ತಿರುವುದು ಕಾನೂನಿನ ಪ್ರಕಾರ ಹೋರಾಟವೇ ಹೊರತು, ಕಾನೂನಿನ ವಿರುದ್ಧವಲ್ಲ. ಮಾಜಿ ಸಿಎಂ ಯಡಿಯೂರಪ್ಪ, ಬಿಜೆಪಿ ರಾಜ್ಯಾಧ್ಯಕ್ಷ ಬಿ. ವೈ ವಿಜಯೇಂದ್ರ, ಸುಧಾಕರ್ ಹಾಗೂ ಬೊಮ್ಮಾಯಿ ಹೆಸರು ಹೇಳುತ್ತಿದ್ದಾರೆ. ಹೀಗಾಗಿ, ಅವರು ಯಾರ ಹೆಸರು ಹೇಳುತ್ತಿದ್ದಾರೆ. ಮಾನಹಾನಿ ನೋಟಿಸ್ ಕೊಡಿ ಎಂದು ಸಲಹೆ ಕೊಡುತ್ತೇನೆ ಎಂದು ತಿಳಿಸಿದರು.

ವಕ್ಫ್ ವಿಚಾರವಾಗಿ ಪ್ರತಿಕ್ರಿಯೆ ನೀಡಿದ ಅವರು, ನಾವು ಶೀಘ್ರವೇ ವಕ್ಫ್ ತಿದ್ದುಪಡಿ ಮಾಡಿ ಜನರಿಗೆ ನ್ಯಾಯ ಕೊಡಿಸುತ್ತೇವೆ ಎಂದು ಹೇಳಿದರು.

## ಪಕ್ಷದ ಅಧ್ಯಕ್ಷ ಸ್ಥಾನ ಒಬಿಸಿಗೆ ನೀಡುವುದಾದರೆ, ಜವಾಬ್ದಾರಿ ವಹಿಸಿಕೊಳ್ಳಲು ಸಿದ್ಧ

**ಶಿವಮೊಗ್ಗ:** ರಾಜ್ಯ ಬಿಜೆಪಿ ಪಕ್ಷದ ಅಧ್ಯಕ್ಷ ಸ್ಥಾನವನ್ನು ಒಬಿಸಿಗೆ ನೀಡುವುದಾದರೆ, ನಾನು ಪಕ್ಷದ ಜವಾಬ್ದಾರಿ ವಹಿಸಿಕೊಳ್ಳಲು ತಯಾರಿದ್ದೇನೆ ಎಂದು ಹೈಕಮಾಂಡ್ ನಾಯಕರಿಗೆ ಹೇಳಿದ್ದೇನೆ ಎಂದು ಮಾಜಿ ಸಚಿವ ಕುಮಾರ ಬಂಗಾರಪ್ಪ ತಿಳಿಸಿದರು.

ಹರಿಯಾಣ ಚುನಾವಣೆಯಲ್ಲಿ ಬಿಜೆಪಿಯು ಒಬಿಸಿ ಸಂಘಟನೆ ಮಾಡಿದ ರೀತಿ ಮತ್ತು ರಾಜ್ಯದಲ್ಲಿ ಅಹಿಂದ ಹೆಸರಲ್ಲಿ ಕಾಂಗ್ರೆಸ್ ಸಂಘಟನೆ ವಿರುದ್ಧವಾಗಿ ಹಿಂದುಳಿದ ವರ್ಗ ಮತ್ತು ಇತರೆ ಸಮುದಾಯಗಳ ಸಂಘಟನೆ ವಿಚಾರವಾಗಿ ಪಕ್ಷ ಒಂದು ನಿರ್ಧಾರ ತೆಗೆದುಕೊಂಡರೆ ಅದರ ಜವಾಬ್ದಾರಿ ಹೊರಲು ತಯಾರಿದ್ದೇನೆ ಎಂದು ಹೇಳಿರುವುದಾಗಿ ಶಿವಮೊಗ್ಗದಲ್ಲಿ ಮಾಧ್ಯಮಗಳಿಗೆ ಕುಮಾರ ಬಂಗಾರಪ್ಪ ಪ್ರತಿಕ್ರಿಯೆ ನೀಡಿದರು.

ವಕ್ಫ್ ಹೋರಾಟದ ಕುರಿತು: ಪಕ್ಷದ ಕೇಂದ್ರದ ವರಿಷ್ಠರು ಎಲ್ಲದರ ಬಗ್ಗೆಯೂ ಗಮನ ಹರಿಸಿದ್ದಾರೆ. ಇದರ ಕುರಿತು ನಮ್ಮ ವರಿಷ್ಠರು ಶೀಘ್ರ ಹಾಗೂ ತೀಕ್ಷ್ಣವಾದ ನಿರ್ಧಾರವನ್ನು ತೆಗೆದುಕೊಳ್ಳುತ್ತಾರೆ. ಪಕ್ಷದ ಒಳಗಿರುವ ಆಂತರಿಕ



ಪ್ರಜಾಪ್ರಭುತ್ವದ ಸಂಘಟನೆಯ ಚುನಾವಣೆಗಳು ಬೂತ್ ಮಟ್ಟದಿಂದ ರಾಷ್ಟ್ರದ ಅಧ್ಯಕ್ಷರ ತನಕ ಸಂಘಟನಾ ಪರ್ವ ನಡೆಯುತ್ತಿದೆ. ಅದಕ್ಕೆ ಪೂರಕವಾದ ಬೇಕಾದ ವಾತಾವರಣವನ್ನು ಸೃಷ್ಟಿ ಮಾಡಿ ಕೊಡುತ್ತಾರೆ ಎಂದರು.

**ವಕ್ಫ್ ಸಮಾವೇಶ:** ದಾವಣಗೆರೆಯಲ್ಲಿ ವಕ್ಫ್ ವಿಚಾರವಾಗಿ ಒಂದು ಸಮಾವೇಶ ಮಾಡ ಬೇಕೆಂದು ನಿರ್ಧಾರ ಮಾಡಿದ್ದೇವೆ. ಜೆಪಿಸಿ ಸಮಿತಿ ಮುಂದೆ 10 ಜಿಲ್ಲೆಗಳ ವರದಿಯನ್ನು ನೀಡಿದ್ದೇವೆ. ನಾಡಿದ್ದು ಬಳ್ಳಾರಿಗೆ ಹೋಗಲಿದ್ದೇವೆ. ಜೊತೆಗೆ ಉಳಿದಿರುವಂತಹ ಜಿಲ್ಲೆಗೂ ಭೇಟಿ ನೀಡಲಿದ್ದು, 65 ಸಾವಿರ ಆಸ್ತಿಗಳ ಸುಮಾರು 2.5 ಲಕ್ಷ ಎಕರೆ ಜಾಗವನ್ನು ಭದ್ರ ಮಾಡುವ ಜವಾಬ್ದಾರಿ ಇದೆ. ರೈತರ ಹಾಗೂ ಸಾರ್ವಜನಿಕರ ಆಸ್ತಿಯನ್ನು ಭದ್ರ ಮಾಡುವ ಉದ್ದೇಶವಿದೆ ಎಂದು ತಿಳಿಸಿದರು.

**ರೇಣುಕಾಚಾರ್ಯ ಸಭೆ ಮಾಹಿತಿ ಇಲ್ಲ:** ಮಾಜಿ ಸಚಿವ ಎಂ ಪಿ ರೇಣುಕಾಚಾರ್ಯ ನೇತೃತ್ವದಲ್ಲಿ ಮಾಜಿ ಶಾಸಕರು, ಸಚಿವರು ದಾವಣಗೆರೆಯಲ್ಲಿ ಸಭೆ ನಡೆಸಿರುವ ಕುರಿತು ನನಗೆ ಮಾಹಿತಿ ಇಲ್ಲ. ಅದರ ಬಗ್ಗೆ ಕಮೆಂಟ್ ಮಾಡಲು ಇಷ್ಟವಿಲ್ಲ ಎಂದರು.

ವಕ್ಫ್ ಆಸ್ತಿ ವಿಚಾರವಾಗಿ ಅನ್ವರ್ ಮಾಣಪ್ಪಾಡಿ ಅವರಿಗೆ ವಿಜಯೇಂದ್ರ 150 ಕೋಟಿ ರೂ. ಆಮಿಷವೊಡ್ಡಿದ್ದರು ಎಂಬ ಆರೋಪದ ಬಗ್ಗೆ ಪ್ರತಿಕ್ರಿಯಿಸಿ, ಇದು ಸುಳ್ಳು ಎಂದು ಮಾಣಪ್ಪಾಡಿ ಅವರೇ ಸ್ಪಷ್ಟಪಡಿಸಿದ್ದಾರೆ.

ಒಂದು ವೇಳೆ ಪ್ರಧಾನಿಗೆ ಪತ್ರ ಬರೆದಿದ್ದರೆ, ಅವರು ಆಗಿನ ಸಮಯಕ್ಕೆ ಸೂಕ್ತ ನಿರ್ಧಾರ ತೆಗೆದುಕೊಳ್ಳುತ್ತಿದ್ದರು. ಆದ್ದರಿಂದ ಕಾಂಗ್ರೆಸ್‌ನವರು ಸುಳ್ಳು ಹೇಳಿಕೆ ನೀಡಿದ್ದಾರೆ ಎಂದರು.

## ಬಂಡೀಪುರದಲ್ಲಿ ಹಸಿರು ಸುಂಕಕ್ಕೆ ಫಾಸ್ಟ್‌ಟ್ಯಾಗ್

**ಚಾಮರಾಜನಗರ:** ಬಂಡೀಪುರದಿಂದ ಕೇರಳ ಮತ್ತು ಊಟಿ ಸೇರಿದಂತೆ ತಮಿಳುನಾಡಿಗೆ ತೆರಳುವ ವೇಳೆ ಎದುರಾಗುತ್ತಿದ್ದ ಗಂಟೆಗಟ್ಟಲೆ ಟ್ರಾಫಿಕ್ ಜಾಮ್‌ಗೆ ಮುಕ್ತಿ ಸಿಗುತ್ತಿದ್ದು, ನಗದು ಬದಲಾಗಿ ಫಾಸ್ಟ್‌ಟ್ಯಾಗ್ ಆರಂಭಗೊಳ್ಳುತ್ತಿದೆ. ಬಂಡೀಪುರ ಹುಲಿ ಸಂರಕ್ಷಿತ ಪ್ರದೇಶದಲ್ಲಿ ಹಾದು ಹೋಗಿರುವ ಎರಡು ರಾಷ್ಟ್ರೀಯ ಹೆದ್ದಾರಿಯಲ್ಲಿ ಪ್ರವಾಸಿಗರಿಂದ ಹಸಿರು ಸುಂಕ ವಸೂಲಿಗೆ ನಿರ್ಮಾಣವಾಗಿರುವ ಫಾಸ್ಟ್‌ಟ್ಯಾಗ್ ಕೇಂದ್ರಕ್ಕೆ ಶೀಘ್ರದಲ್ಲೇ ಚಾಲನೆ ಸಿಗಲಿದ್ದು, ಈಗಾಗಲೇ ಪ್ರಾಯೋಗಿಕ ನಿರ್ವಹಣೆ ಆರಂಭವಾಗಿದೆ.

ರಾಷ್ಟ್ರೀಯ ಹೆದ್ದಾರಿ 67 ಮತ್ತು 766ರಲ್ಲಿ ಮೂರು ಫಾಸ್ಟ್‌ಟ್ಯಾಗ್ ಕೇಂದ್ರ ತೆರೆಯಲಾಗಿದೆ. ಮೇಲುಕಾಮನಹಳ್ಳಿ, ಕೆಕ್ಕನಹಳ್ಳ ಮತ್ತು ಮದ್ದೂರಿನ ಚೆಕ್‌ಪೋಸ್ಟ್ ಬಳಿ ಫಾಸ್ಟ್‌ಟ್ಯಾಗ್ ಕೇಂದ್ರ ಪ್ರಾಯೋಗಿಕವಾಗಿ ಚಾಲನೆಯಾಗಿದ್ದು ಯಾವುದಾದರು ಸಮಸ್ಯೆ ಆಗುತ್ತಿದೆಯಾ ಎಂದು ಪರೀಕ್ಷೆ ನಡೆಸಲಾಗುತ್ತಿದೆ. ಶೀಘ್ರದಲ್ಲೇ ಅರಣ್ಯ ಸಚಿವ ಈಶ್ವರ್ ಖಂಡ್ರೆ ಬಂಡೀಪುರದಲ್ಲಿ ಹಸಿರು ಸುಂಕದ ಫಾಸ್ಟ್‌ಟ್ಯಾಗ್‌ಗೆ ಚಾಲನೆ ನೀಡಲಿದ್ದಾರೆ ಎಂದು ಬಂಡೀಪುರ ಹುಲಿ ಸಂರಕ್ಷಿತ ಪ್ರದೇಶದ ನಿರ್ದೇಶಕ ಪ್ರಭಾಕರನ್ ತಿಳಿಸಿದ್ದಾರೆ.

ಏನಿದು ಹಸಿರು ಸುಂಕ? ಅರಣ್ಯ ಪ್ರದೇಶದಲ್ಲಿ ಕಸ ನಿರ್ವಹಣೆ, ಅಪಘಾತ ನಿರ್ವಹಣೆ ಸೇರಿ ವಿವಿಧ ಉದ್ದೇಶಗಳಿಗಾಗಿ ಬಂಡೀಪುರ ಹುಲಿ ಸಂರಕ್ಷಿತ ಪ್ರದೇಶದಲ್ಲಿ ಹಾದುಹೋಗುವ




ವಾಹನಗಳಿಂದ ಲಘು ವಾಹನಗಳಿಗೆ 20 ರೂ., ಭಾರಿ ವಾಹನಗಳಿಗೆ 30 ರೂ. ನಂತೆ ಹಸಿರು ಸುಂಕ ವಸೂಲಿ ಮಾಡಲಾಗುತ್ತಿದೆ.

ರಜೆ ದಿನ ಹಾಗೂ ವಾರಾಂತ್ಯದಲ್ಲಿ ಊಟಿ ಹಾಗೂ ಕೇರಳದ ಪ್ರವಾಸಿ ತಾಣಗಳಿಗೆ ಹೆಚ್ಚು ಪ್ರವಾಸಿಗರು ಹೋಗಲಿದ್ದು, ಹಸಿರು ಸುಂಕ ವಸೂಲಿ ಮಾಡುವ ವೇಳೆ ವಾಹನಗಳು ಕಿಲೋಮೀಟರ್ ಗಟ್ಟಲೆ ಸಾಲುಗಟ್ಟಿ ನಿಲ್ಲುತ್ತಿದ್ದವು. ಚೆಕ್‌ಪೋಸ್ಟ್‌ನಲ್ಲಿ ಟಿಕೆಟ್ ಪಡೆದು ಹೊರಡುವಷ್ಟರಲ್ಲಿ ಗಂಟೆಗೂ ಹೆಚ್ಚು ಸಮಯ ಕಳೆದು ಹೋಗುತ್ತಿತ್ತು. ಅಲ್ಲದೆ ಅರಣ್ಯ ಪ್ರದೇಶದಲ್ಲಿ ವಾಹನಗಳು ನಿಂತು ಪ್ರಾಣಿಗಳ ಸಂಚಾರಕ್ಕೆ ತೊಂದರೆ ಆಗುತ್ತಿತ್ತು. ಇದೇ ಸಂದರ್ಭ ಬಳಸಿಕೊಂಡು ಪ್ರವಾಸಿಗರು ಕಾಡಿನಲ್ಲಿ ವಾಹನದಿಂದ ಕೆಳಗಿಳಿದು ಪ್ರಾಣಿಗಳ ಫೋಟೋ ತೆಗೆಯುವುದು, ಆಹಾರ ನೀಡುವುದನ್ನು ಮಾಡುತ್ತಿದ್ದರು. ಒಂದು ಚೆಕ್‌ಪೋಸ್ಟ್‌ನಲ್ಲಿ ಒಬ್ಬ ಅಥವಾ ಇಬ್ಬರು ಟಿಕೆಟ್ ನೀಡುತ್ತಿದ್ದರು. ಒಂದು ದಿನಕ್ಕೆ ವಾರಾಂತ್ಯದಲ್ಲಿ 3 ಸಾವಿರದಿಂದ 4 ಸಾವಿರ ವಾಹನಗಳು ಸಂಚಾರ ಮಾಡುತ್ತಿದ್ದವು.

ಪ್ರವಾಸಿ ವಾಹನಗಳು ಹೆಚ್ಚು ಇದ್ದ ಸಂದರ್ಭದಲ್ಲಿ ತುರ್ತಾಗಿ ಹೋಗಬೇಕಾದ ತರಕಾರಿ, ಹಾಲಿನ ವಾಹನ ಮತ್ತು ಸ್ಥಳೀಯರಿಗೆ ಹೆಚ್ಚಿನ ತೊಂದರೆಯಾಗುತ್ತಿತ್ತು. ಈಗ ಫಾಸ್ಟ್‌ಟ್ಯಾಗ್ ಅಳವಡಿಸಿರುವುದರಿಂದ ಕೆಲವೇ ನಿಮಿಷಗಳಲ್ಲಿ ಸುಂಕ ಪಾವತಿಸಿ ವಾಹನಗಳು ಮುಂದಕ್ಕೆ ತೆರಳಲಿವೆ. ಫಾಸ್ಟ್‌ಟ್ಯಾಗ್ ನಿರಂತರವಾಗಿ ಚಾಲನೆಯಾದ ಸಂದರ್ಭದಲ್ಲಿ ಸ್ಥಳೀಯರಿಗೆ ಬೇರೆ ಗೇಟಿನಲ್ಲಿ ಉಚಿತವಾಗಿ ಪ್ರಯಾಣಕ್ಕೆ ಅವಕಾಶ ಮಾಡಲಾಗುತ್ತದೆ. ಫಾಸ್ಟ್‌ಟ್ಯಾಗ್‌ನಿಂದ ನಗದಿನ ಬದಲಾಗಿ ಡಿಜಿಟಲ್ ಮೂಲಕ ಹಣ ಪಾವತಿ ಆಗುವುದರಿಂದ ಪಾರದರ್ಶಕತೆ ಇರಲಿದೆ. ಟ್ರಾಫಿಕ್ ಸಮಸ್ಯೆ ತಗ್ಗಲಿದೆ. ಅರಣ್ಯ ಸಚಿವರ ಸಮಯ ಕೇಳಿದ್ದು ಶೀಘ್ರದಲ್ಲೇ ಫಾಸ್ಟ್‌ಟ್ಯಾಗ್‌ಗೆ ಚಾಲನೆ ಸಿಗಲಿದೆ ಎಂದು ಮಾಹಿತಿ ನೀಡಿದರು.

## ಉದ್ಯಮಿ ಮನೆಯಲ್ಲಿ ದರೋಡೆ

**ಹುಬ್ಬಳ್ಳಿ:** ವಾಣಿಜ್ಯ ನಗರಿಯಲ್ಲಿ ಬೆಚ್ಚಿಬೀಳಿಸುವ ಕಳ್ಳತನ ಪ್ರಕರಣ ನಡೆದಿದೆ. ಉಣಕಲ್ ಕೆರೆಯ ಎದುರಿಗೆ ಇರುವ ಸುತಾರಿಯಾ ಮಹೇಂದ್ರ ಶೋ ರೂಂ ಮಾಲೀಕ ಸಚಿನ್ ಶಾ ಅವರ ವಿಜಯನಗರದ ನಿವಾಸದಲ್ಲಿ ಸೆಕ್ಯೂರಿಟಿ ಗಾರ್ಡ್ ಹಾಗೂ ಮನೆಯವರ ಕೈಕಾಲು ಕಟ್ಟಿ ದರೋಡೆ ಮಾಡಿರುವ ಪ್ರಕರಣ ಇಂದು ನಡೆದಿದೆ. ಶ್ವಾನ ದಳ, ಬೆರಳಚ್ಚು ತಜ್ಞರು, ಡಿಸಿಪಿ ಮಹಾನಿಂಗ ನಂದಗಾವಿ ಸೇರಿದಂತೆ ಇನ್ನುಳಿದ ಪೊಲೀಸರು ಸ್ಥಳಕ್ಕೆ ಧಾವಿಸಿ ಪರಿಶೀಲನೆ ನಡೆಸುತ್ತಿದ್ದಾರೆ.

ಸೆಕ್ಯೂರಿಟಿ ಗಾರ್ಡ್ ವಿರೂಪಾಕ್ಷಯ್ಯ ಹಿರೇಮಠ ಎಂಬುವರನ್ನು ಕಟ್ಟಿ ಹಾಕಿ ದರೋಡೆ ಮಾಡಲಾಗಿದೆ. ಗಾಯಗೊಂಡಿರುವ ಸೆಕ್ಯೂರಿಟಿಯನ್ನು ಖಾಸಗಿ ಆಸ್ಪತ್ರೆಗೆ ದಾಖಲಿಸಲಾಗಿದೆ. ಮರಾಠಿ ಮಾತನಾಡುತ್ತಿದ್ದ ನಾಲ್ಕರಿಂದ ಐದು ಜನರಿದ್ದ ತಂಡ ದರೋಡೆ ಮಾಡಿರುವ ಬಗ್ಗೆ ಶಂಕೆ ವ್ಯಕ್ತವಾಗಿದೆ.

ಈ ಕುರಿತಂತೆ ಹುಬ್ಬಳ್ಳಿ-ಧಾರವಾಡ ಪೊಲೀಸ್ ಆಯುಕ್ತ ಎನ್. ಶಶಿಕುಮಾರ್ ಪ್ರತಿಕ್ರಿಯೆ ನೀಡಿದ್ದು, "ಅಶೋಕನಗರ ಪೊಲೀಸ್ ಠಾಣೆ ವ್ಯಾಪ್ತಿಯಲ್ಲಿ ಘಟನೆ ನಡೆದಿದೆ. ಘಟನೆ ನಡೆದಾಗ ಸಚಿನ್ ಎಂಬುವವರು ತಮ್ಮ ಕುಟುಂಬ ಹಾಗೂ ತಂದೆ ವಿಜಯ್ ಕುಮಾರ್ ಮತ್ತು ತಾಯಿ ಜೊತೆ ಮನೆಯಲ್ಲಿದ್ದರು. ಸಚಿನ್ ಅವರು ಮನೆಯ ಮೇಲ್ಗಡೆ ಕೊಠಡಿಯಲ್ಲಿದ್ರು. ಬೆಳಗ್ಗೆ ಏಳು ಗಂಟೆಗೆ ಕೆಳಗಡೆ ಬಂದು ನೋಡಿದಾಗ ಮನೆಯಲ್ಲಿ ಯಾರೂ ಇರಲಿಲ್ಲ. ನಂತರ ರೂಮ್‌ನಲ್ಲಿ ನೋಡಿದಾಗ ತಂದೆ ತಾಯಿಯನ್ನು ಕುರ್ಚಿ ಮೇಲೆ ಕಟ್ಟಿ ಹಾಕಿದ್ದು. ವಸ್ತುಗಳೆಲ್ಲ ಚೆಲ್ಲಾಪಿಲ್ಲಿ ಆಗಿದ್ದವು. ತಂದೆ ತಾಯಿ ಜೊತೆ ಕೇಳಿದಾಗ ದರೋಡೆ ಬಗ್ಗೆ ಮಾಹಿತಿ ನೀಡಿದ್ದಾರೆ" ಎಂದು ತಿಳಿಸಿದರು.

"ಮಧ್ಯರಾತ್ರಿ ಎರಡೂವರೆ ಸುಮಾರಿಗೆ ಮುಖಕ್ಕೆ ಬಟ್ಟೆ ಕಟ್ಟಿಕೊಂಡು ಮನೆಗೆ ನುಗ್ಗಿದ್ದಾರೆ. ಹೊರಗಡೆ ಇದ್ದಂತಹ ಸೆಕ್ಯೂರಿಟಿ ಗಾರ್ಡ್ ಅನ್ನು ಕೂಡ ಕಟ್ಟಿ ಹಾಕಿದ್ರು. ಬಳಿಕ ಮನೆ ಮಾಲೀಕರನ್ನು ಕಟ್ಟಿ ಹಾಕಿ ಮನೆಯಲ್ಲಿರುವ ಬೆಲೆ ಬಾಳುವಂತಹ ವಸ್ತುಗಳನ್ನು ಕಳ್ಳತನ ಮಾಡಿದ್ದಾರೆ. ಯಾವೆಲ್ಲ ವಸ್ತುಗಳು ಕಳ್ಳತನವಾಗಿವೆ ಎನ್ನುವ ಸ್ಪಷ್ಟತೆ ಇಲ್ಲ" ಎಂದು ತಿಳಿಸಿದರು. "ಕೆಲವೊಂದು ಸಿಸಿ ಕ್ಯಾಮರಾ ದೃಶ್ಯಗಳು ಲಭ್ಯವಾಗಿವೆ. ಅದರ ಪರಿಶೀಲನೆ ನಡೆದಿದೆ. ಆದಷ್ಟು ಬೇಗ ಪ್ರಕರಣವನ್ನು ಭೇದಿಸುತ್ತೇವೆ. ಈ ಹಿಂದೆ ಇಂತಹದ್ದೇ ಎರಡು ಪ್ರಕರಣಗಳು ನಡೆದಿದ್ದವು. ಈ ಸಂಬಂಧ ಮಹಾರಾಷ್ಟ್ರ ಮತ್ತು ಆಂಧ್ರ ಮೂಲದ ಗ್ಯಾಂಗ್ ಅನ್ನು ಬಂಧಿಸಲಾಗಿತ್ತು. ಈಗ ಎರಡು ವಿಶೇಷ ತಂಡಗಳ ಮೂಲಕ ತನಿಖೆ ನಡೆಯುತ್ತಿದೆ" ಎಂದು ಹೇಳಿದರು.

## ಜಗತ್ತಿನ ಎಲ್ಲಾ ಕಷ್ಟ ನಿವಾರಣೆಗೆ ದತ್ತಾತ್ರೇಯ ಸ್ಮರಣೆ ಅಗತ್ಯ

**ಮೈಸೂರು:** ಕೇವಲ ಸ್ಮರಣೆ ಮಾತ್ರದಿಂದ ದತ್ತಾತ್ರೆಯ ಸ್ವಾಮಿಗಳು ಸಂತುಷ್ಟರಾಗುತ್ತಾರೆ. ಜಗತ್ತಿನ ಎಲ್ಲಾ ಕಷ್ಟ ನಿವಾರಣೆಗೆ ದತ್ತಾತ್ರೇಯ ಸ್ಮರಣೆ ಮಾಡಬೇಕು ಎಂದು ಅವಧೂತ ದತ್ತ ಪೀಠಾಧಿಪತಿ ಶ್ರೀ ಗಣಪತಿ ಸಚ್ಚಿದಾನಂದ ಸ್ವಾಮೀಜಿ ತಿಳಿಸಿದರು.

ನಗರದ ಅವಧೂತ ದತ್ತ ಪೀಠದಲ್ಲಿ ದತ್ತಾತ್ರೇಯ ಜಯಂತಿ ಪ್ರಯುಕ್ತ ಭಾನುವಾರ ಬೆಳಗ್ಗೆ ಆಶ್ರಮದ ವಿಶ್ವ ಪ್ರಾರ್ಥನಾ ಮಂದಿರದಲ್ಲಿರುವ ದತ್ತಾತ್ರೇಯ ಸ್ವಾಮಿಗೆ ತೈಲಾಭಿಷೇಕ ನೆರವೇರಿಸಿ, ಭಕ್ತರಿಗೆ ಆಶೀರ್ವಚನ ನೀಡಿ ಮಾತನಾಡಿದ ಅವರು, ಇಡೀ ವಿಶ್ವದಲ್ಲಿ ಯುದ್ಧ ಭಯ ಕಾಡುತ್ತಿದೆ. ಎಲ್ಲೆಲ್ಲೂ ನೆಮ್ಮದಿ ಇಲ್ಲದಂತಾಗಿದೆ. ಹಾಗಾಗಿ ಶ್ರೀ ದತ್ತಾತ್ರೇಯ ಸ್ವಾಮಿ ಇಡೀ ಪ್ರಪಂಚವನ್ನು





ರಕ್ಷಣೆ ಮಾಡಲಿ. ಎಲ್ಲೆಡೆ ಶಾಂತಿ, ನೆಮ್ಮದಿ ನೆಲೆಸಲಿ ಎಂದು ಪ್ರಾರ್ಥಿಸಿದರು.

ದತ್ತಾತ್ರೇಯ ಸ್ವಾಮಿಗಳು ತ್ರೇತಾಯುಗದ ಅವತಾರ ಪುರುಷರು. ದೇವತೆಗಳು ರಾಕ್ಷಸರು ಮತ್ತು ಮನುಷ್ಯರಿಗೂ ಕೂಡ ಅವರು ಗುರುಗಳು. ಮನುಷ್ಯನಿಗೆ ಬುದ್ಧಿ ಕೆಟ್ಟಾಗ ಆರೋಗ್ಯ ಹದಗೆಟ್ಟಾಗ, ದಿಕ್ಕು ತಪ್ಪಿದಾಗ ದತ್ತಾತ್ರೆಯರ ಸ್ಮರಣೆ ಮಾಡುವುದು ಒಳ್ಳೆಯದು. ದತ್ತಾತ್ರೇಯರು ಪೂರ್ಣ ವಿಷ್ಣು ಸ್ವರೂಪ. \ದತ್ತಾತ್ರೇಯ ಸ್ವಾಮಿಯ ಆರಾಧನೆ ಮಾಡಿದರೆ ವಿಷ್ಣುವಿನ ಆರಾಧನೆ ಮಾಡಿದಂತೆ, ಶಿವನನ್ನು ಆರಾಧನೆ ಮಾಡಿದಂತೆ, ಬ್ರಹ್ಮ ಅಂದರೆ ಜ್ಞಾನವನ್ನು ಆರಾಧನೆ ಮಾಡಿದಂತೆ ಎಂದರು.

ಇಡೀ ವಿಶ್ವ ಮತ್ತು ಪ್ರಜೆಗಳು ಪ್ರಜಾಪ್ರತಿನಿಧಿಗಳು ಮಕ್ಕಳಾದಿಯಾಗಿ ಎಲ್ಲ ರಂಗದಲ್ಲಿರುವವರಿಗೂ ದತ್ತಾತ್ರೇಯರು ಆಶೀರ್ವಾದ ಮಾಡಲೆಂದು ಲೋಕ ಕಲ್ಯಾಣಾರ್ಥವಾಗಿ ಈ ಅಭಿಷೇಕಗಳನ್ನು ಹಮ್ಮಿಕೊಳ್ಳಲಾಗಿದೆ ಎಂದು ತಿಳಿಸಿದರು.

ಇಂದು ಬೆಳಗ್ಗೆ ಪೌರ್ಣಮಿ ಹಾಗೂ ಶ್ರೀ ದತ್ತಾತ್ರೇಯ ಜಯಂತಿ ಪ್ರಯುಕ್ತ ಪವಮಾನ ಹೋಮ ಮತ್ತು ದತ್ತಾತ್ರೇಯ ವಜ್ರ ಮಂತ್ರ ಹೋಮ ನೆರವೇರಿತು. ಶ್ರೀ ಚಕ್ರ ಪೂಜೆ ಮತ್ತು ಪೂರ್ಣಾಹುತಿ ನೆರವೇರಿತು. ನಂತರ ಶ್ರೀ ದತ್ತಾತ್ರೇಯ ಸ್ವಾಮಿಗೆ ಭಕ್ತರಿಂದ ಸಹಸ್ರ ಕಳಶ ತೈಲಾಭಿಷೇಕ ಮಾಡಲಾಯಿತು.

ಕೊಚ್ಚಿ ಆಶ್ರಮ ಭಜನಾ ತಂಡದಿಂದ ಶ್ರೀ ದತ್ತಾತ್ರೇಯ ಸ್ವಾಮಿ ನಾಮ ಸಂಕೀರ್ತನೆ ಹಾಗೂ ಅನಘ ವ್ರತ ಕೂಡಾ ನಡೆಯಿತು.



**ಕುಣಿಗಲ್ ತಾಲ್ಲೂಕು ಕೃಷಿಕ ಸಮಾಜಕ್ಕೆ ಐದು ವರ್ಷಗಳ ಅವಧಿಗೆ ನಡೆದ ಚುನಾವಣೆಯಲ್ಲಿ ಸ್ಪರ್ಧಿಸಿ ಗೆಲುವು ಸಾಧಿಸಿದ ಕೆ.ಸಿ.ಲಕ್ಕಣ್ಣ(ರಾಜಣ್ಣ), ರವಿಕುಮಾರ್, ಜಯರಾಮ್, ರಮೇಶ್ ಚಲುವರಾಜು, ಬಸವರಾಜು, ರಘು, ಮಂಜುನಾಥ್ ಮತ್ತು ಗಂಗಹೊನ್ನಯ್ಯ ಮತ್ತಿತರರು ಇಂದು ತಮ್ಮ ಗೆಲುವಿಗೆ ಕಾರಣರಾದ ಬಿಜೆಪಿಯ ತಾಲ್ಲೂಕು ಘಟಕದ ಅಧ್ಯಕ್ಷರಾದ ಡಿ.ಕೃಷ್ಣಕುಮಾರ್ ಅವರನ್ನು ಭೇಟಿ ಮಾಡಿ ಅಭಿನಂದಿಸಿದರು. ಈ ಸಂದರ್ಭದಲ್ಲಿ ಕೃಷ್ಣಕುಮಾರ್ ಅವರು ವಿಜೇತರಿಗೆ ಶುಭಕೋರಿದರು.**

# ಗೋಲನ್ ಹೈಟ್ಸ್‌ನಲ್ಲಿ ಜನವಸತಿ ದ್ವಿಗುಣಗೊಳಿಸುವ ಇಸ್ರೇಲ್ ಕ್ರಮಕ್ಕೆ ಸೌದಿ ಅರೇಬಿಯಾ, ಕತಾರ್ ವಿರೋಧ



**ರಿಯಾಧ್:** ಆಕ್ರಮಿತ ಗೋಲನ್ ಹೈಟ್ಸ್‌ನಲ್ಲಿ ಜನವಸತಿ ಬಡಾವಣೆಗಳನ್ನು ವಿಸ್ತರಿಸುವ ಇಸ್ರೇಲ್ ಯೋಜನೆಯನ್ನು ಸೌದಿ ಅರೇಬಿಯಾ, ಯುನೈಟೆಡ್ ಅರಬ್ ಎಮಿರೇಟ್ಸ್ (ಯುಎಇ) ಮತ್ತು ಕತಾರ್ ಖಂಡಿಸಿವೆ. ಈ ನಿರ್ಧಾರವು ಸಿರಿಯಾದ ಭದ್ರತೆ ಮತ್ತು ಸ್ಥಿರತೆಯನ್ನು ಪುನಃಸ್ಥಾಪಿಸುವ ಸಾಧ್ಯತೆಗಳನ್ನು ಹಾಳು ಮಾಡುವ ಪ್ರಯತ್ನಗಳ ಮುಂದುವರಿಕೆಯಾಗಿದೆ ಎಂದು ಸೌದಿ ವಿದೇಶಾಂಗ ಸಚಿವಾಲಯ ಹೇಳಿಕೆಯಲ್ಲಿ ತಿಳಿಸಿದೆ ಎಂದು ಕ್ಸಿನ್ಹುವಾ ಸುದ್ದಿ ಸಂಸ್ಥೆ ವರದಿ ಮಾಡಿದೆ.

ಇಸ್ರೇಲ್‌ಗೆ ಯುಎಇ ಎಚ್ಚರಿಕೆ: ಸಿರಿಯಾದ ಸಾರ್ವಭೌಮತ್ವ ಮತ್ತು ಪ್ರಾದೇಶಿಕ ಸಮಗ್ರತೆ ಗೌರವಿಸುವುದು ಅಗತ್ಯವಾಗಿದೆ. ಇಸ್ರೇಲ್?ನ ಕ್ರಮಗಳಿಂದ ಈ ಪ್ರದೇಶದಲ್ಲಿ ಉದ್ವಿಗ್ನತೆ ಹೆಚ್ಚಾಗಬಹುದು ಎಂದು ಯುಎಇ ವಿದೇಶಾಂಗ ಸಚಿವಾಲಯ ಎಚ್ಚರಿಸಿದೆ.

ಆಕ್ರಮಿತ ಗೋಲನ್ ಹೈಟ್ಸ್‌ನ ಕಾನೂನಾತ್ಮಕ ಸ್ಥಿತಿಯನ್ನು ಬದಲಾಯಿಸುವ ಇಸ್ರೇಲ್‌ನ ಎಲ್ಲ ಕ್ರಮಗಳು ಮತ್ತು ಪ್ರಯತ್ನಗಳನ್ನು ಯುಎಇ ಸ್ಪಷ್ಟವಾಗಿ ತಿರಸ್ಕರಿಸುತ್ತದೆ" ಎಂದು ಹೇಳಿಕೆಯಲ್ಲಿ ತಿಳಿಸಲಾಗಿದೆ. ಗೋಲನ್ ಹೈಟ್ಸ್‌ನಲ್ಲಿ ಇಸ್ರೇಲ್ ತನ್ನ ವಸಾಹತುಗಳನ್ನು ವಿಸ್ತರಿಸುವುದು ಸಿರಿಯಾದ ಭದ್ರತೆ, ಸ್ಥಿರತೆ ಮತ್ತು ಸಾರ್ವಭೌಮತ್ವಕ್ಕೆ ನೇರ ಬೆದರಿಕೆಯಾಗಿದೆ ಎಂದು ಅದು ಒತ್ತಿಹೇಳಿದೆ.

ಇಸ್ರೇಲ್ ನಿರ್ಧಾರ ಖಂಡಿಸಿದ ಕತಾರ್; ಸಿರಿಯನ್ ಭೂಪ್ರದೇಶಗಳ ಮೇಲೆ ಇಸ್ರೇಲಿ ಆಕ್ರಮಣಗಳು ಅಂತಾರಾಷ್ಟ್ರೀಯ ಕಾನೂನಿನ ಸ್ಪಷ್ಟ ಉಲ್ಲಂಘನೆಯಾಗಿದೆ ಎಂದು ಕತಾರ್ ವಿದೇಶಾಂಗ ಸಚಿವಾಲಯವು ಇಸ್ರೇಲ್‌ನ ನಿರ್ಧಾರವನ್ನು ಖಂಡಿಸಿದೆ. ಸಿರಿಯಾ ಭೂಪ್ರದೇಶಗಳ ಮೇಲೆ ಆಕ್ರಮಣಗಳನ್ನು ನಿಲ್ಲಿಸುವಂತೆ ಮತ್ತು ಅಂತಾರಾಷ್ಟ್ರೀಯ ನ್ಯಾಯಸಮ್ಮತತೆಗೆ ಬದ್ಧವಾಗಿರುವಂತೆ ಇಸ್ರೇಲ್ ಅನ್ನು ಒತ್ತಾಯಿಸುವಂತೆ ಅದು ಅಂತಾರಾಷ್ಟ್ರೀಯ ಸಮುದಾಯಕ್ಕೆ ಕರೆ ನೀಡಿದೆ. ಸಿರಿಯಾದ ಸಾರ್ವಭೌಮತ್ವ, ಸ್ವಾತಂತ್ರ್ಯ ಮತ್ತು ಪ್ರಾದೇಶಿಕ ಸಮಗ್ರತೆಗೆ ಅಚಲ ಬೆಂಬಲ ನೀಡುವುದಾಗಿ ಕತಾರ್ ಪುನರುಚ್ಚರಿಸಿದೆ.

ಪ್ರಸ್ತುತ ಇಸ್ರೇಲ್ ಆಕ್ರಮಿಸಿಕೊಂಡಿರುವ ಸಿರಿಯನ್ ಭೂಪ್ರದೇಶದಲ್ಲಿನ ಗೋಲನ್ ಹೈಟ್ಸ್‌ನಲ್ಲಿ ವಸಾಹತುಗಳನ್ನು ವಿಸ್ತರಿಸುವ ಯೋಜನೆಗೆ ಇಸ್ರೇಲ್ ಸರ್ಕಾರ ಭಾನುವಾರ ಅನುಮೋದನೆ ನೀಡಿದೆ ಎಂದು ಇಸ್ರೇಲ್ ಪ್ರಧಾನಿ ಬೆಂಜಮಿನ್ ನೆತನ್ಯಾಹು ಅವರ ಕಚೇರಿಯ ಹೇಳಿಕೆ ತಿಳಿಸಿದೆ. ಈ ಯೋಜನೆಯು ಗೋಲನ್ ಹೈಟ್ಸ್?ನಲ್ಲಿ ಇಸ್ರೇಲಿ ಜನಸಂಖ್ಯೆಯನ್ನು ದ್ವಿಗುಣಗೊಳಿಸುವ ಗುರಿಯನ್ನು ಹೊಂದಿದೆ. ಇದು ಗೋಲನ್ ಹೈಟ್ಸ್ ಪ್ರದೇಶದಲ್ಲಿ ವಿದ್ಯಾರ್ಥಿ ಗ್ರಾಮವನ್ನು ಸ್ಥಾಪಿಸುವುದು, ಹೊಸ ನಿವಾಸಿಗಳನ್ನು ಸ್ಥಳಾಂತರಿಸುವುದು, ಶಿಕ್ಷಣ ವ್ಯವಸ್ಥೆ ಮತ್ತು ನವೀಕರಿಸಬಹುದಾದ ಇಂಧನ ಮೂಲಸೌಕರ್ಯವನ್ನು ಬಲಪಡಿಸುವ ಉಪಕ್ರಮಗಳನ್ನು ಒಳಗೊಂಡಿದೆ.

ದಾಳಿ ಮುಂದುವರೆಸಿದ ಇಸ್ರೇಲ್: ಸಿರಿಯಾದ ಕರಾವಳಿ ಟಾರ್ಟಸ್ ಪ್ರದೇಶದಲ್ಲಿ ಇಸ್ರೇಲ್ ಭಾನುವಾರ ತಡರಾತ್ರಿ ಸರಣಿ ವೈಮಾನಿಕ ದಾಳಿಗಳನ್ನು ನಡೆಸಿದ್ದು, ಇದು 2012 ರ ನಂತರ ಈ ಪ್ರದೇಶದಲ್ಲಿ ನಡೆದ ಅತ್ಯಂತ ತೀವ್ರವಾದ ಬಾಂಬ್ ದಾಳಿಯಾಗಿದೆ ಎಂದು ಸಿರಿಯನ್ ಮಾನವ ಹಕ್ಕುಗಳ ವೀಕ್ಷಣಾಲಯ ತಿಳಿಸಿದೆ. ವಾಯು ರಕ್ಷಣಾ ಘಟಕಗಳು ಮತ್ತು ಮೇಲ್ಮೈಯಿಂದ ಮೇಲ್ಮೈಗೆ ಕ್ಷಿಪಣಿ ಗೋದಾಮುಗಳು ಸೇರಿದಂತೆ ಮಿಲಿಟರಿ ತಾಣಗಳನ್ನು ಗುರಿಯಾಗಿಸಿಕೊಂಡು ಈ ದಾಳಿಗಳು ನಡೆದಿವೆ.

# ವಿಶ್ವಸಂಸ್ಥೆ ರಾಯಭಾರಿಯೊಂದಿಗೆ ಎಚ್‌ಟಿಎಸ್ ನಾಯಕನ ಭೇಟಿ



**ಸಿರಿಯಾ:** ಸಿರಿಯಾದ ಹಯಾತ್ ತಹ್ರಿರ್ ಅಲ್-ಶಾಮ್ (ಎಚ್‌ಟಿಎಸ್) ನಾಯಕ ಅಹ್ಮದ್ ಅಲ್-ಶಾರಾ ಅವರು ಸಿರಿಯಾದಲ್ಲಿನ ವಿಶ್ವಸಂಸ್ಥೆಯ ವಿಶೇಷ ರಾಯಭಾರಿ ಗೀರ್ ಪೆಡರ್ಸನ್ ಅವರನ್ನು ಡಮಾಸ್ಕಸ್?ನಲ್ಲಿ ಭೇಟಿಯಾಗಿದ್ದಾರೆ. ಸಭೆಯಲ್ಲಿ ದೇಶದಲ್ಲಿನ ರಾಜಕೀಯ ಪರಿವರ್ತನೆಯ ಬಗ್ಗೆ ಚರ್ಚೆ ನಡೆಸಲಾಗಿದೆ ಎಂದು ಸ್ಥಳೀಯ ಅಲ್-ವತನ್ ಆನ್‌ಲೈನ್ ಸುದ್ದಿ ಸಂಸ್ಥೆ ಬಿಡುಗಡೆ ಮಾಡಿದ ಹೇಳಿಕೆಯಲ್ಲಿ ತಿಳಿಸಲಾಗಿದೆ.

**ಸಿರಿಯಾದಲ್ಲಿ ರಾಜಕೀಯ ಪರಿವರ್ತನೆ:** ಅಬು ಮೊಹಮ್ಮದ್ ಅಲ್-ಜುಲಾನಿ ಎಂದೂ ಕರೆಯಲ್ಪಡುವ ಅಲ್-ಶಾರಾ, ಸಿರಿಯಾದ ರಾಜಕೀಯ ಪರಿವರ್ತನೆಗೆ ಸಂಬಂಧಿಸಿದಂತೆ, 2015 ರಲ್ಲಿ ಅಂಗೀಕರಿಸಲಾದ ವಿಶ್ವಸಂಸ್ಥೆಯ ಭದ್ರತಾ ಮಂಡಳಿಯ ನಿರ್ಣಯ 2254 ಕ್ಕೆ ಈಗ ದೇಶದ ಪ್ರಸ್ತುತ ವಾಸ್ತವ ಸ್ಥಿತಿಗತಿಗಳಿಗೆ ಅನುಗುಣವಾಗಿ ಬದಲಾವಣೆ ತರುವ ಅಗತ್ಯವಿದೆ ಎಂದು ಹೇಳಿದರು. ಸಿರಿಯಾದ ಹೊಸ ನಾಯಕತ್ವ ಮತ್ತು ವಿಕಸನಗೊಳ್ಳುತ್ತಿರುವ ಸಂದರ್ಭಗಳೊಂದಿಗೆ ಹೊಂದಿಕೆಯಾಗುವ ಹೊಸ ವಿಧಾನದ ಅಳವಡಿಕೆಗೆ ಅವರು ಒತ್ತಾಯಿಸಿದರು ಎಂದು ಕ್ಸಿನ್ಹುವಾ ಸುದ್ದಿ ಸಂಸ್ಥೆ ವರದಿ ಮಾಡಿದೆ.

**ದೇಶದ ಪ್ರಾದೇಶಿಕ ಏಕತೆ ಪುನಃಸ್ಥಾಪಿಸಲು ಪ್ರಯತ್ನ:** ಸಿರಿಯನ್ ನಾಗರಿಕರ ಅಗತ್ಯಗಳನ್ನು ಪೂರೈಸಲು, ದೇಶದ ಪ್ರಾದೇಶಿಕ ಏಕತೆಯನ್ನು ಪುನಃಸ್ಥಾಪಿಸಲು ಮತ್ತು ಪುನರ್ ನಿರ್ಮಾಣ ಮತ್ತು ಆರ್ಥಿಕ ಅಭಿವೃದ್ಧಿಗೆ ದಾರಿ ಮಾಡಿಕೊಡಲು ತ್ವರಿತ ಮತ್ತು ಪರಿಣಾಮಕಾರಿ ಸಹಕಾರದ ಮಹತ್ವವನ್ನು ಸಭೆಯಲ್ಲಿ ಅಲ್-ಶಾರಾ ಒತ್ತಿಹೇಳಿದರು. ಬಲವಾದ ಮತ್ತು ದಕ್ಷ ಆಡಳಿತ ವ್ಯವಸ್ಥೆಯನ್ನು ರೂಪಿಸುವುದನ್ನು ಖಚಿತಪಡಿಸಿಕೊಳ್ಳಲು ಸರ್ಕಾರಿ ಇಲಾಖೆಗಳಿಗೆ ಪುನರ್ವಸತಿ ಕಲ್ಪಿಸುವಲ್ಲಿ ಜಾಗರೂಕ, ಉದ್ದೇಶಪೂರ್ವಕ ಕ್ರಮಗಳು ಅಗತ್ಯ ಎಂದು ತಿಳಿಸಿದರು. ನಿರಾಶ್ರಿತರ ಮರಳುವಿಕೆಗೆ ಪೂರಕ ಮತ್ತು ಸುರಕ್ಷಿತ ವಾತಾವರಣ ಸೃಷ್ಟಿಸುವುದಾಗಿ ಎಚ್‌ಟಿಎಸ್ ನಾಯಕ ಅಲ್-ಜುಲಾನಿ ಭರವಸೆ ನೀಡಿದರು. ರಾಷ್ಟ್ರದ ಉತ್ತಮ ಭವಿಷ್ಯಕ್ಕಾಗಿ ಸೂಕ್ತ ಕ್ರಮಗಳನ್ನು ಹೆಚ್ಚಿನ ಎಚ್ಚರಿಕೆ ಯಿಂದ ಜಾರಿಗೆ ತರಲಾಗುತ್ತಿದೆ ಮತ್ತು ವಿಶೇಷ ತಂಡಗಳಿಂದ ಮೇಲ್ವಿಚಾರಣೆ ಮಾಡಲಾಗುತ್ತಿದೆ ಎಂದು ಹೇಳಿದರು.

**ಎಲ್ಲ ಬೆಳವಣಿಗೆಗಳನ್ನು ಸೂಕ್ಷ್ಮವಾಗಿ ಗಮನಿಸುತ್ತಿರುವ ವಿಶ್ವಸಂಸ್ಥೆ:** ದೇಶದಲ್ಲಿ ವೇಗವಾಗಿ ವಿಕಸನಗೊಳ್ಳುತ್ತಿರುವ ಪರಿಸ್ಥಿತಿಯನ್ನು ವಿಶ್ವಸಂಸ್ಥೆ ಸೂಕ್ಷ್ಮವಾಗಿ ಗಮನಿಸುತ್ತಿದೆ ಮತ್ತು ಸಿರಿಯಾದ ಮಾಜಿ ಅಧ್ಯಕ್ಷ ಬಷರ್ ಅಲ್-ಅಸ್ಸಾದ್ ಅವರನ್ನು ಪದಚ್ಯುತಗೊಳಿಸಿದ ನಂತರ ರಾಜಕೀಯ ಪರಿವರ್ತನೆಯ ಮುಂದಿನ ಹೆಜ್ಜೆಗಳನ್ನು ಎದುರು ನೋಡುತ್ತಿದೆ ಎಂದು ಪೆಡರ್ಸನ್ ಹೇಳಿದರು.

ಇದಕ್ಕೂ ಮುನ್ನ ಡಮಾಸ್ಕಸ್‌ನಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಪೆಡರ್ಸನ್, ಸಿರಿಯಾದ ಸರ್ಕಾರಿ ಇಲಾಖೆಗಳು ಸುರಕ್ಷಿತ ಪರಿಸ್ಥಿತಿಗಳಲ್ಲಿ ತಮ್ಮ ಕಾರ್ಯಗಳನ್ನು ಸಂಪೂರ್ಣವಾಗಿ ಪುನರಾರಂಭಿಸುವ ಮಹತ್ವವನ್ನು ಒತ್ತಿ ಹೇಳಿದರು.

"ನಾವು ಸಿರಿಯಾದ ಎಲ್ಲಾ ವರ್ಗಗಳ ಜನರೊಂದಿಗೆ ಮಾತನಾಡುತ್ತಿದ್ದೇವೆ. ಸೇಡಿನ ಯಾವುದೇ ಕೃತ್ಯಗಳನ್ನು ಬಯಸುವುದಿಲ್ಲ. ಬದಲಾಗಿ, ಅಗತ್ಯ ಭದ್ರತಾ ಕ್ರಮಗಳ ಬೆಂಬಲದೊಂದಿಗೆ ಸಂಸ್ಥೆಗಳು ಕೆಲಸಕ್ಕೆ ಮರಳುವುದನ್ನು ನಾವು ಖಚಿತಪಡಿಸಿಕೊಳ್ಳಬೇಕು" ಎಂದು ಅವರು ಹೇಳಿದರು.

# ತೈವಾನ್ ಸುತ್ತಲೂ ಹಾರಾಟ ನಡೆಸುತ್ತಿರುವ ಹೆಲಿಕಾಪ್ಟರ್‌ಗಳು ನೌಕಾಪಡೆ: ಕಳವಳ



**ತೈವಾನ್:** ಭಾನುವಾರ ಬೆಳಗ್ಗೆ 6 ರಿಂದ ಸಂಜೆ 6 ಗಂಟೆಯ ನಡುವೆ ತೈವಾನ್ ಸುತ್ತಮುತ್ತ ಐದು ಚೀನೀ ಮಿಲಿಟರಿ ವಿಮಾನಗಳು ಮತ್ತು ಆರು ನೌಕಾ ಹಡಗುಗಳು ಪತ್ತೆ ಆಗಿವೆ ಎಂದು ತೈವಾನ್ ರಾಷ್ಟ್ರೀಯ ರಕ್ಷಣಾ ಸಚಿವಾಲಯ ಮಾಹಿತಿ ನೀಡಿದೆ. ಎಂಟು ಪೀಪಲ್ಸ್ ಲಿಬರೇಶನ್ ಆರ್ಮಿ ವಿಮಾನಗಳು ದೇಶದ ನೈಋತ್ಯ ಮತ್ತು ಆಗ್ನೇಯ ವಾಯು ರಕ್ಷಣಾ ಗುರುತಿನ ವಲಯದಲ್ಲಿ ಹಾರಾಟ ನಡೆಸಿವೆ ಎಂದು ತೈವಾನ್ ರಾಷ್ಟ್ರೀಯ ರಕ್ಷಣಾ ಸಚಿವಾಲಯ ಸೋಮವಾರ ತಿಳಿಸಿದೆ.

**ತೈವಾನ್ ರಕ್ಷಣಾ ಸಚಿವಾಲಯದ ಟ್ವೀಟ್:** ಈ ಬಗ್ಗೆ ಎಕ್ಸ್ ಪೋಸ್ಟ್ ಮಾಡಿರುವ ತೈವಾನ್‌ನ ಒಓಆ, ತೈವಾನ್‌ನ ಸುತ್ತಲೂ ಕಾರ್ಯನಿರ್ವಹಿಸುತ್ತಿರುವ 5 ಚೀನಾ ವಿಮಾನಗಳು ಮತ್ತು ಚೀನಾ ನೌಕಾ ಪಡೆಯ ಹಡಗುಗಳು ಪತ್ತೆಯಾಗಿವೆ ಎಂದು ಹೇಳಿದೆ. 1 ವಿಮಾನವು ತೈವಾನ್ ಜಲಸಂಧಿಯ ಮಧ್ಯದ ರೇಖೆಯನ್ನು ದಾಟಿ ಕಾರ್ಯಾಚರಣೆ ನಡೆಸಿದೆ. ನಾವು ಪರಿಸ್ಥಿತಿಯನ್ನು ಅತ್ಯಂತ ಹತ್ತಿರದಿಂದ ಗಮನಿಸುತ್ತಿದ್ದೇವೆ ಮತ್ತು ಅದಕ್ಕೆ ತಕ್ಕಂತೆ ಪ್ರತಿಕ್ರಿಯಿಸಿದ್ದೇವೆ ಎಂದು ತೈವಾನ್ ರಾಷ್ಟ್ರೀಯ ರಕ್ಷಣಾ ಸಚಿವಾಲಯ ಒಓಆ ಹೇಳಿದೆ.

**ಆತಂಕದಲ್ಲಿ ತೈವಾನ್:** ಈ ಘಟನೆಯು ತೈವಾನ್‌ನಲ್ಲಿ ಆತಂಕಕ್ಕೆ ಕಾರಣವಾಗಿದೆ. ಬೀಜಿಂಗ್ ತೈವಾನ್ ದ್ವೀಪದ ಮೇಲೆ ತನ್ನ ಹಕ್ಕುಗಳನ್ನು ಪ್ರತಿಪಾದಿಸುತ್ತಲೇ ಬರುತ್ತಿದೆ. ಚೀನಾದ ಈ ವರ್ತನೆಯು ಪ್ರಾದೇಶಿಕ ಸ್ಥಿರತೆಯ ಬಗ್ಗೆ ಕಳವಳ ಉಂಟುಮಾಡುತ್ತಿದೆ. ಚಟುವಟಿಕೆಗಳಿಗೆ ಪ್ರತಿಕ್ರಿಯೆಯಾಗಿ, ತೈವಾನ್ ರಾಷ್ಟ್ರೀಯ ರಕ್ಷಣಾ ಸಚಿವಾಲಯ ಕೂಡಾ, ದ್ವೀಪದಾದ್ಯಂತ ಆಯಕಟ್ಟಿನ ಸ್ಥಳಗಳಲ್ಲಿ ಯುದ್ಧ-ಸನ್ನದ್ಧತೆಯ ಕಸರತ್ತುಗಳನ್ನು ಪ್ರಾರಂಭಿಸಿದೆ. ಚೀನಾದ ಯಾವುದೇ ಕ್ರಿಯೆಗಳಿಗೆ - ಪ್ರತಿಕ್ರಿಯೆ ನೀಡಲು ಸೂಕ್ತವಾದ ಪ್ರತಿಕ್ರಮಗಳನ್ನು ಕಾರ್ಯಗತಗೊಳಿಸಲು ಅಲ್ಲಿನ ಕೋಸ್ಟ್ ಗಾರ್ಡ್ ಆಡಳಿತದೊಂದಿಗೆ ನಿಕಟವಾಗಿ ಸಂಪರ್ಕದಲ್ಲಿದೆ.

**ನ್ಯಾಟೋ ಆಕ್ರೋಶ:** ತೈವಾನ್‌ನ ಸಾರ್ವಭೌಮತ್ವದ ಮೇಲೆ ಚೀನಾ ಪ್ರಹಾರ ಮಾಡುತ್ತಲೇ ಬಂದಿದೆ. ತೈವಾನ್ ತನ್ನ ಪ್ರದೇಶ ಎಂದು ಚೀನಾ ಪ್ರತಿಪಾದನೆ ಮಾಡಿಕೊಂಡೇ ಬರುತ್ತಿದೆ. ಅಷ್ಟೇ ಅಲ್ಲ ಇದು ಸಂಕೀರ್ಣ ಮತ್ತು ದೀರ್ಘಕಾಲದ ಭೌಗೋಳಿಕ ರಾಜಕೀಯ ಸಂಘರ್ಷವಾಗಿದೆ. ಓಂಖಿಔ ಸೆಕ್ರೆಟರಿ ಜನರಲ್ ಮಾರ್ಕ್ ರುಟ್ಟೆ ಅವರು ತೈವಾನ್ ಬಗೆಗಿನ ಚೀನಾದ ನಿಲುವನ್ನು ಟೀಕಿಸಿದ್ದಾರೆ. ಚೀನಾ ತೈವಾನ್ ಅನ್ನು ಬೆದರಿಸುತ್ತಿದೆ ಮತ್ತು ಸಮಾಜಗಳನ್ನು ದುರ್ಬಲಗೊಳಿಸುವ ರೀತಿಯಲ್ಲಿ ವರ್ತಿಸುತ್ತಿದೆ ಎಂದು ಅವರು ಆಕ್ರೋಶ ವ್ಯಕ್ತಪಡಿಸಿದ್ದಾರೆ.

# 7 ವರ್ಷಗಳ ಬಳಿಕ ಅಮೆರಿಕಕ್ಕೆ ವಿಮಾನಯಾನ ಪುನಾರಂಭಿಸಲಿದೆ ಪಾಕಿಸ್ತಾನ ಏರ್‌ಲೈನ್ಸ್

**ಇಸ್ಲಾಮಾಬಾದ್:** ಏಳು ವರ್ಷಗಳ ಅಮಾನತು ಆದೇಶದ ಬಳಿಕ ಪಾಕಿಸ್ತಾನ ಇಂಟರ್‌ನ್ಯಾಷನಲ್ ಏರ್‌ಲೈನ್ಸ್ ಅಮೆರಿಕಕ್ಕೆ ತನ್ನ ವಿಮಾನಯಾನವನ್ನು ಪುನಾರಂಭಿಸಲಿದೆ. ಇದು ದೇಶದ ವಾಯುಯಾನ ವಲಯಕ್ಕೆ ಮಹತ್ವದ ಬೆಳವಣಿಗೆಯಾಗಿದೆ ಎಂದು ಅಧಿಕೃತ ಮಾಧ್ಯಮ ಸಂಸ್ಥೆ ವರದಿ ಮಾಡಿದೆ.

ಅಮೆರಿಕದ ಫೆಡರಲ್ ಏವಿಯೇಷನ್ ಅಡ್ಮಿನಿಸ್ಟ್ರೇಷನ್ ನಡುವೆ ಬಾಕಿ ಉಳಿದಿರುವ ಹಣಕಾಸಿನ ಬಾಧ್ಯತೆಗಳನ್ನು ಇತ್ಯರ್ಥಗೊಳಿಸಲು ತಿಳಿವಳಿಕೆ ಒಪ್ಪಂದಕ್ಕೆ ಸಹಿ ಹಾಕಲಾಗಿದೆ. ಡಿಜಿ ಸಿಎಎ ನಾದಿರ್ ಶಾಫಿ ದಾರ್ ಅವರ ಪ್ರಕಾರ, ಎಫ್‌ಎಎಗೆ ಪಾವತಿಗಳನ್ನು ಶೀಘ್ರದಲ್ಲೇ ಪೂರ್ಣಗೊಳಿಸಲಾಗುವುದು ಎಂದು ನಿರೀಕ್ಷಿಸಲಾಗಿದೆ.

ಫೆಬ್ರವರಿ ಅಥವಾ ಮಾರ್ಚ್‌ನೊಳಗೆ ಎಫ್‌ಎಎ ನಿಯೋಗವು ಪಾಕಿಸ್ತಾನಕ್ಕೆ ಭೇಟಿ ನೀಡಲು ದಾರಿ ಮಾಡಿಕೊಡಲಿದೆ. ಈ ಬೆಳವಣಿಗೆಯು ಎಫ್‌ಎಎಯೊಂದಿಗೆ ಪಾಕಿಸ್ತಾನವನ್ನು 'ವರ್ಗ ಒಂದರ' ಸ್ಥಾನಮಾನಕ್ಕೆ ಮರುವರ್ಗೀಕರಿಸುವ ಸಾಧ್ಯತೆಗಳನ್ನು ಹೆಚ್ಚಿಸಿದೆ. ಹಾಗೇ ಅಮೆರಿಕಕ್ಕೆ ನೇರ ವಿಮಾನಗಳನ್ನು ಪುನಾರಂಭಿಸಲು ಅನುವು ಮಾಡಿಕೊಡುತ್ತದೆ.

2017ರಲ್ಲಿ ಸ್ಥಗಿತಗೊಂಡಿದ್ದ ವಿಮಾನಯಾನ: ನ್ಯೂಯಾರ್ಕ್‌ಗೆ ನಾಲ್ಕು ಮತ್ತು ಚಿಕಾಗೋಗೆ ಎರಡು ಸೇರಿದಂತೆ ಪಾಕಿಸ್ತಾನ ಮತ್ತು ಅಮೆರಿಕ ನಡುವೆ ವಾರಕ್ಕೆ ಆರು ವಿಮಾನಗಳ ಹಾರಾಟವನ್ನು ಪಾಕ್‌ನ ಈ ವಿಮಾನಯಾನ ಸಂಸ್ಥೆ ನಿರ್ವಹಿಸುತ್ತಿತ್ತು.ಆದರೆ 2017 ರಲ್ಲಿ ಅಮೆರಿಕಕ್ಕೆ ಕಖಂಯ ವಿಮಾನಗಳನ್ನು ಸ್ಥಗಿತಗೊಳಿಸಲಾಯಿತು. ಪಾಕ್ ಸರ್ಕಾರದಿಂದ ಸರ್ಕಾರಕ್ಕೆ ಒಪ್ಪಂದಗಳ ಮೂಲಕ ಖಾಸಗೀಕರಣಗೊಳಿಸುವ ಪ್ರಯತ್ನಗಳನ್ನು ತೀವ್ರಗೊಳಿಸುತ್ತಿದೆ. ಮತ್ತು ಡಿ.31ರವರೆಗೆ ಗಡುವನ್ನು ನಿಗದಿಪಡಿಸಲಾಗಿದೆ ಎಂದು ಮೂಲಗಳನ್ನು ಉಲ್ಲೇಖಿಸಿ ಅಧಿಕೃತ ಮಾಧ್ಯಮ ಸಂಸ್ಥೆ ವರದಿ ಮಾಡಿದೆ.

ಒಪ್ಪಂದ ಅಂತಿಮಗೊಳಿಸಲು ನಡೆದಿದೆ ಪ್ರಕ್ರಿಯೆ: ವರದಿಯ ಪ್ರಕಾರ, ಅಬುಧಾಬಿ ಮತ್ತು ಕತಾರ್ ಎರಡೂ ಪಾಕಿಸ್ತಾನ ಇಂಟರ್‌ನ್ಯಾಷನಲ್ ಏರ್‌ಲೈನ್ಸ್‌ನ ಖಾಸಗೀಕರಣದ ಬಗ್ಗೆ ಬಲವಾದ ಆಸಕ್ತಿಯನ್ನು ವ್ಯಕ್ತಪಡಿಸಿವೆ. ಇದು ವಿದೇಶಿ ಹೂಡಿಕೆಗೆ ಸಂಭಾವ್ಯ ಅವಕಾಶವನ್ನು ಸೃಷ್ಟಿಸಿದೆ. ಒಪ್ಪಂದದ ನಿಯಮಗಳನ್ನು ಅಂತಿಮಗೊಳಿಸಲು ಎರಡೂ ದೇಶಗಳೊಂದಿಗೆ ಸಕ್ರಿಯ ಚರ್ಚೆಗಳು ನಡೆಯುತ್ತಿವೆ.




**ಆರ್ಟ್ ಕಲ್ಚರಲ್ ಎಜುಕೇಶನಲ್ ಎನ್ಲೈಟ್ ಫೌಂಡೇಶನ್ ವತಿಯಿಂದ ಪ್ರತಿಭಾ ಪ್ರದರ್ಶನ ವಿಶ್ವ ದಾಖಲೆ ಹೈರೇಂಜ್ ಬುಕ್ ಆಫ್ ವರ್ಲ್ಡ್ ರೆಕಾರ್ಡ್ಸ್" ಕಾರ್ಯಕ್ರಮವನ್ನು ಡಾಕ್ಟರ್ ಅಂಬಿಕಾ ಸಿ ರವರು ನಯನ ಕನ್ನಡ ಭವನ ಬೆಂಗಳೂರಿನಲ್ಲಿ ಹಮ್ಮಿಕೊಂಡಿದ್ದರು. ಕಾರ್ಯಕ್ರಮದ ಮುಖ್ಯ ಅತಿಥಿಗಳಾಗಿ ಶ್ರೀಯುತ ಲೋಕೇಶ್ (ಸಮಗ್ರ ಟಿವಿ ಚಾನಲ್ ನ ವ್ಯವಸ್ಥಾಪಕ ನಿರ್ದೇಶಕರು ಮತ್ತು ಎಂ ಏನ್ ಸಿ ಸ್ಪೋರ್ಟ್ಸ್ ಅಕಾಡೆಮಿ ಸಂಸ್ಥಾಪಕರು), ಪಿ ಮುರುಳಿದಾರ್ (ಕರ್ನಾಟಕ ರಾಜ್ಯ ಖಾತರಿ ಯೋಜನೆ ಅನುಷ್ಠಾನ ಪ್ರಾಧಿಕಾರ ಬಿಬಿಎಂಪಿ ಸಮಿತಿಯ ಅಧ್ಯಕ್ಷರು), ಡಾ॥ ಪಿ ಶ್ರೀಧರ್ (ಸಮಾಜ ಸೇವಕರು) , ಬಿ ಎಸ್ ಮಂಜುನಾಥ್ ( ಎಂ ಡಿ ಆರ್ ಟಿ ಎಕ್ಸಿಕ್ಯೂಟಿವ್ ಕೌನ್ಸಿಲ್) ಮತ್ತು ಅನೇಕ ಶಿಕ್ಷಕ ವೃಂದದವರು ಪೋಷಕರೊಂದಿಗೆ ಉಪಸ್ಥಿತರಿದ್ದು, ವಿಶ್ವ ದಾಖಲೆ ಕಾರ್ಯಕ್ರಮವನ್ನು ಯಶಸ್ವಿಗೊಳ್ಳುವುದರಲ್ಲಿ ಮಕ್ಕಳು ಪ್ರಮುಖ ಪಾತ್ರ ವಹಿಸಿದರು.**

# ಚಿಡೋ ಚಂಡಮಾರುತದ ಅಬ್ಬರಕ್ಕೆ ಸಾವಿರಾರು ಜನ ಬಲಿ




**ಮಾಯೊಟ್ಟೆ, ಫ್ರಾನ್ಸ್:** ಫ್ರೆಂಚ್‌ಗೆ ಅಪ್ಪಳಿಸಿರುವ ಭಯಾನಕ ಚಿಡೋ ಚಂಡಮಾರುತಕ್ಕೆ ಫ್ರಾನ್ಸ್‌ನ ಮಾಯೊಟ್ಟೆಯಲ್ಲಿ ಸಾವಿರಾರು ಜನರು ಸಾವನ್ನಪ್ಪಿದ್ದಾರೆ ಎಂದು ಅಧಿಕಾರಿಗಳನ್ನು ಉಲ್ಲೇಖಿಸಿ ಅಲ್ ಜಜೀರಾ ವರದಿ ಮಾಡಿದೆ. ಫ್ರೆಂಚ್ ಪ್ರಧಾನಿ ಪ್ರಿಫೆಕ್ಟ್ ಫ್ರಾಂಕೋಯಿಸ್-ಕ್ಸೇವಿಯರ್ ಬಿಜಣಿತುಟಟಜ ಪ್ರಕಾರ ಸಾವಿನ ಸಂಖ್ಯೆ ಸಾವಿರಾರು ಲೆಕ್ಕದಲ್ಲಿ ಇರಬಹುದು ಎಂದು ಹೇಳಲಾಗಿದೆ.

ಭಾರಿ ಸಾವು ನೋವಿನ ವರದಿ: ಸಾವಿನ ಬಗ್ಗೆ ನಿರ್ದಿಷ್ಟ ಅಂಕಿ- ಅಂಶವನ್ನು ನೀಡಲು ಸಾಧ್ಯವಿಲ್ಲ ಎಂದು ಪ್ರಿಫೆಕ್ಟ್ ಫ್ರಾಂಕೋಯಿಸ್ ಹೇಳಿದ್ದಾರೆ. ಫ್ರೆಂಚ್ ಗೃಹ ಸಚಿವಾಲಯವು ಈ ಹಂತದಲ್ಲಿ ಎಲ್ಲ ಸಾವು ನೋವುಗಳ ಬಗ್ಗೆ ನಿಖರವಾದ ಅಂಕಿ- ಅಂಶ ನೀಡುವುದು ಕಷ್ಟವಾಗುತ್ತದೆ ಎಂದು ತಿಳಿಸಿದೆ. ಈ ನಡುವೆ ಸ್ಥಳೀಯ ಅಧಿಕಾರಿಗಳು ಕನಿಷ್ಠ 11 ಸಾವುಗಳಾಗಿವೆ ಎಂದು ದೃಢಪಡಿಸಿದ್ದಾರೆ. ಹಿಂದೂ ಮಹಾಸಾಗರದ ಮೂಲಕ ಚಂಡಮಾರುತ ಫ್ರಾನ್ಸ್ ಮೇಲೆ ಬೀಸಿದೆ, 200ಕಿಮೀ ವೇಗದಲ್ಲಿ ಗಾಳಿ ಬೀಸುತ್ತಿದೆ ಎಂದು ಅಲ್ಲಿನ ಹವಾಮಾನ ಇಲಾಖೆ ತಿಳಿಸಿದೆ. ಇದು ವಸತಿಗಳು, ಸರ್ಕಾರಿ ಕಟ್ಟಡಗಳು ಮತ್ತು ಆಸ್ಪತ್ರೆಗಳಿಗೆ ದೊಡ್ಡ ಹಾನಿಯನ್ನುಂಟು ಮಾಡಿದೆ ಎಂದು ಫ್ರೆಂಚ್ ಪ್ರಧಾನಿ ಫ್ರಾಂಕೋಯಿಸ್ ಹೇಳಿದ್ದಾರೆ.

ಭರದಿಂದ ಸಾಗಿದ ರಕ್ಷಣಾ ಕಾರ್ಯಾಚರಣೆ: ಶನಿವಾರ ಸಂಜೆ ಅಂತರ-ಸಚಿವಾಲಯ ಸಭೆಯ ನಂತರ ಪ್ರಧಾನಿ ಬೈರೂ ಸುದ್ದಿಗಾರರಿಗೆ ತಿಳಿಸಿದರು. ಮೇಯೊಟ್ಟೆಯಾದ್ಯಂತ ಚಿಡೋ ಚಂಡಮಾರುತದಿಂದಾಗಿ ಸತ್ತವರ ಸಂಖ್ಯೆ ಸಾವಿರಾರು ತಲುಪಿರಬಹುದು ಎಂದು ಹಿರಿಯ ಅಧಿಕಾರಿಯೊಬ್ಬರು ತಿಳಿಸಿದ್ದಾರೆ. ಚಿಡೋದಿಂದ ಬರ್ಬರ ಸ್ಥಿತಿಯಲ್ಲಿರುವ ಮಾಯೊಟ್ಟೆಯಲ್ಲಿ ಅಳಿದುಳಿದವರ ರಕ್ಷಣೆಗೆ ಫ್ರಾನ್ಸ್ ರಕ್ಷಣಾ ಕಾರ್ಯಕರ್ತರು ಧಾವಿಸಿದ್ದಾರೆ. ಸಮರೋಪಾದಿಯಲ್ಲಿ ರಕ್ಷಣಾ ಕಾರ್ಯಾಚರಣೆ ಮುಂದುವರೆದಿದೆ.

ಭಾರಿ ಭೂಕುಸಿತ: ಉತ್ತರ ಮೊಜಾಂಬಿಕ್‌ನ ಕ್ಯಾಬೊ ಡೆಲ್ಗಾಡೊ ಅಥವಾ ನಾಂಪುಲಾದಲ್ಲಿ ಭಾನುವಾರ ಭೂಕುಸಿತದ ವರದಿಯಾಗಿವೆ. ಈ ಮಧ್ಯೆ ಯುರೋಪಿಯನ್ ಯೂನಿಯನ್ ಅಧ್ಯಕ್ಷ ಉರ್ಸುಲಾ ವಾನ್ ಡೆರ್ ಲೇಯೆನ್ ಅವರು ಫ್ರಾನ್ಸ್‌ಗೆ ತಮ್ಮ ಬೆಂಬಲ ವ್ಯಕ್ತಪಡಿಸಿದ್ದಾರೆ. ಎಕ್ಸ್‌ನಲ್ಲಿ ಪೋಸ್ಟ್ ಮಾಡಿರುವ ಅವರು, ಮಯೋಟ್ಟೆಯಲ್ಲಿ ಚಿಡೋ ಚಂಡಮಾರುತದ ವಿನಾಶಕಾರಿ ದಾಳಿಯಿಂದ ನಮ್ಮ ಹೃದಯ ಒಡೆದುಹೋಗಿದ್ದು, ಅಲ್ಲಿನ ಜನರ ನೋವಿನಲ್ಲೂ ನಾವು ಭಾಗಿಯಾಗುತ್ತೇವೆ. ಈ ಭೀಕರ ಅಗ್ನಿಪರೀಕ್ಷೆಯಲ್ಲಿ ಯುರೋಪ್ ಮಯೊಟ್ಟೆ ಜನರೊಂದಿಗೆ ನಿಂತಿದೆ. ಮುಂದಿನ ದಿನಗಳಲ್ಲಿ ನಾವು ಅವರಿಗೆ ಎಲ್ಲ ರೀತಿಯ ಬೆಂಬಲ ನೀಡಲು ಸಿದ್ಧರಿದ್ದೇವೆ ಎಂದು ಹೇಳಿದ್ದಾರೆ.

# 18 ಸಾವಿರ ಅನಿವಾಸಿ ಭಾರತೀಯರ ನೆತ್ತಿ ಮೇಲೆ ತೂಗುತ್ತಿದೆ ಕತ್ತಿ



ವಾಷಿಂಗ್ಟನ್: ಅಮೆರಿಕದ ವಲಸೆ ಮತ್ತು ಕಸ್ಟಮ್ಸ್ ಎನ್‌ಫೋರ್ಸ್‌ಮೆಂಟ್-I.C.E ಇತ್ತೀಚೆಗೆ ಅಮೆರಿಕದಲ್ಲಿ ನೆಲೆಸಿರುವ ಅಕ್ರಮ ನಿವಾಸಿಗಳ ಅಂಕಿ- ಅಂಶಗಳನ್ನು ಬಿಡುಗಡೆ ಮಾಡಿದೆ. ದೇಶದಲ್ಲಿ ಒಟ್ಟು 14.45 ಲಕ್ಷ ಅಕ್ರಮ ವಲಸಿಗರಿದ್ದಾರೆ ಎಂದು ಅದು ತನ್ನ ವರದಿಯಲ್ಲಿ ಹೇಳಿದೆ. ಈ ಪಟ್ಟಿಯಲ್ಲಿ ಹೊಂಡುರಾಸ್ 2 ಲಕ್ಷದ 61 ಸಾವಿರಕ್ಕೂ ಹೆಚ್ಚು ಅಕ್ರಮ ವಲಸಿಗರನ್ನು ಹೊಂದುವ ಮೂಲಕ ಮೊದಲ ಸ್ಥಾನದಲ್ಲಿದೆ. ಇನ್ನು ಗ್ವಾಟೆಮಾಲಾ ಎರಡನೇ ಸ್ಥಾನದಲ್ಲಿದೆ. I.C.E ವರದಿಯ ಪ್ರಕಾರ ಈ ಪಟ್ಟಿಯಲ್ಲಿ ಸುಮಾರು 18 ಸಾವಿರ ಭಾರತೀಯ ಅಕ್ರಮ ವಲಸೆಗಾರರಿದ್ದಾರೆ. ಸುಮಾರು 37 ಸಾವಿರ ಚೀನಿಯರು ಸಹ ಗಡಿಪಾರು ಆಗುವ ಭೀತಿಗೆ ಸಿಲುಕಿದ್ದಾರೆ.


ಸಿಗುತ್ತಾ ಐಸಿಇ ಅನುಮತಿ: ಹಾಗೆ ನೋಡಿದರೆ ಅಮೆರಿಕದಲ್ಲಿ ಲಕ್ಷಾಂತರ ಭಾರತೀಯರು ಅಕ್ರಮವಾಗಿ ನೆಲೆಸಿದ್ದಾರೆ ಎನ್ನಲಾಗುತ್ತಿದೆ. ಅವರೆಲ್ಲರೂ ತಮ್ಮ ವಾಸವನ್ನು ಕಾನೂನುಬದ್ಧಗ 'ೂಳಿಸಿಕೊಳ್ಳುವುದಕ್ಕಾಗಿ ತೀವ್ರ ಯತ್ನ ನಡೆಸಿದ್ದರೂ ಖ.ಅ.ಇ ಯಿಂದ ಅನುಮತಿ ಪಡೆಯಲು ವರ್ಷಗಳು ಬೇಕಾಗುತ್ತದೆ ಎಂದು ವಿಶ್ಲೇಷಕರು ಹೇಳುತ್ತಿದ್ದಾರೆ.

ಕಠಿಣ ಕ್ರಮ ಎಂದಿರುವ ಹೊಸ ಅಧ್ಯಕ್ಷರಾಗಲಿರುವ ಟ್ರಂಪ್: ಅಕ್ರಮ ವಲಸಿಗರ ಬಗ್ಗೆ ಟ್ರಂಪ್ ಹಿಂದಿನಿಂದಲೂ ಕಠಿಣ ಮಾತುಗಳನ್ನು ಹೇಳುತ್ತಲೇ ಬಂದಿದ್ದಾರೆ. ಇನ್ನು ಮೆಕ್ಸಿಕೋ ಗಡಿಯಿಂದ ಅಮೆರಿಕಕ್ಕೆ ಬರುವವರ ಬಗ್ಗೆಯಂತೂ ಟ್ರಂಪ್‌ಗೆ ಭಾರಿ ಆಕ್ರೋಶವಿದೆ. ಈ ಬಗ್ಗೆ ಈಗಾಗಲೇ ಮಾತನಾಡಿರುವ ಅವರು, ಅಕ್ರಮ ವಲಸಿಗರಿಗೆ ಕರುಣೆ ತೋರುವ ಉದ್ದೇಶ ನನಗಿಲ್ಲ, ಅಧಿಕಾರ ವಹಿಸಿಕೊಂಡ ತಕ್ಷಣ ಅವರನ್ನು ದೇಶದಿಂದ ಗಡಿಪಾರು ಮಾಡುವುದಾಗಿ ಇತ್ತೀಚೆಗೆ ಸ್ಪಷ್ಟಪಡಿಸಿದ್ದಾರೆ.

ಸಮಸ್ಯೆಗಳ ಪರಿಹಾರಕ್ಕೆ ನಡೆದಿದೆ ಯತ್ನ: ಅಕ್ರಮವಾಗಿ ಅಮೆರಿಕ ಪ್ರವೇಶಿಸಿದ ಭಾರತೀಯರ ವಿಚಾರದಲ್ಲಿ ಭಾರತದಿಂದ ಯಾವುದೇ ಸೂಕ್ತ ಪ್ರತಿಕ್ರಿಯೆ ಬಂದಿಲ್ಲ ಎಂದು ಐ.ಸಿ.ಇ. ಹೇಳಿದೆ. ಎರಡೂ ದೇಶಗಳು ರಾಜತಾಂತ್ರಿಕ ಮಾರ್ಗಗಳ ಮೂಲಕ ಸಮಸ್ಯೆಗೆ ಪರಿಹಾರವನ್ನು ಹುಡುಕುತ್ತಿವೆ ಎಂದು ಸಂಬಂಧಿತ ಮೂಲಗಳು ತಿಳಿಸಿವೆ.

ಮತ್ತೊಂದೆಡೆ, ನೂತನ ಅಧ್ಯಕ್ಷರಾಗಲಿರುವ ಡೊನಾಲ್ಡ್ ಟ್ರಂಪ್ ಇತ್ತೀಚೆಗೆ ಕಾನೂನು ವಲಸಿಗರಿಗೆ ಮಾರ್ಗವನ್ನು ಸುಲಭಗೊಳಿಸುವುದಾಗಿ ಹೇಳಿದ್ದಾರೆ. ಅಕ್ರಮ ವಲಸಿಗರ ಹೆಚ್ಚಿನ ಮಕ್ಕಳು ಅಮೆರಿಕದಲ್ಲಿ ಹುಟ್ಟಿ ಬೆಳೆದಿದ್ದು, ಅನೇಕರು ಉತ್ತಮ ಉದ್ಯೋಗ ಮತ್ತು ವೃತ್ತಿಗಳನ್ನು ಮಾಡುತ್ತಿದ್ದಾರೆ ಎಂದು ಟ್ರಂಪ್ ಸಂದರ್ಶನವೊಂದರಲ್ಲಿ ಹೇಳಿದ್ದಾರೆ. ಈ ಸಮಸ್ಯೆಗಳನ್ನು ಪರಿಹರಿಸುವತ್ತ ಗಮನ ಹರಿಸುವುದಾಗಿ ಟ್ರಂಪ್ ಭರವಸೆ ನೀಡಿದ್ದಾರೆ. ಹೀಗಾಗಿ ಡಯಾಸ್ಪೊರಾದಲ್ಲಿರುವ ಕೆಲವು ಭಾರತೀಯರು ನಿರಾಳರಾಗಿದ್ದಾರೆ.

# ಸಿರಿಯಾದ ಶೇ.90ರಷ್ಟು ಕ್ಷಿಪಣಿ ವ್ಯವಸ್ಥೆ ಧ್ವಂಸ: ಇಸ್ರೇಲ್



**ಜೆರುಸಲೇಂ:** ಸಿರಿಯಾದ ವಾಯು ರಕ್ಷಣಾ ವ್ಯವಸ್ಥೆಯನ್ನು ತೀವ್ರವಾಗಿ ಹಾನಿಗೊಳಿಸಿರುವುದಾಗಿ ಇಸ್ರೇಲ್ ರಕ್ಷಣಾ ಪಡೆ (ಐಡಿಎಫ್) ಘೋಷಿಸಿದೆ. ಸಿರಿಯಾದ ಮೇಲ್ಮೈಯಿಂದ ಗಾಳಿಯಲ್ಲಿ ದಾಳಿ ನಡೆಸಬಲ್ಲ ಶೇ 90ರಷ್ಟು ಕ್ಷಿಪಣಿ ವ್ಯವಸ್ಥೆಯನ್ನು ನಾಶ ಮಾಡಲಾಗಿದೆ ಎಂದು ಅದು ಹೇಳಿದೆ. ಬಷರ್ ಅಲ್-ಅಸ್ಸಾದ್ ಸರ್ಕಾರದ ಪತನದ ಹಿನ್ನೆಲೆಯಲ್ಲಿ ಸಿರಿಯಾದ ಪರಿಸ್ಥಿತಿಯನ್ನು ಸಮಗ್ರವಾಗಿ ಮೌಲ್ಯಮಾಪನ ಮಾಡುತ್ತಿರುವುದಾಗಿ ಐಡಿಎಫ್ ತಿಳಿಸಿದೆ.

ಕಳೆದ ಹಲವಾರು ದಿನಗಳಲ್ಲಿ ನೂರಾರು ಇಸ್ರೇಲಿ ಫೈಟರ್ ಜೆಟ್?ಗಳು ಮತ್ತು ವಿಮಾನಗಳು ಸಿರಿಯಾದ ಫೈಟರ್ ಜೆಟ್?ಗಳು, ಹೆಲಿಕಾಪ್ಟರ್?ಗಳು, ಕ್ಷಿಪಣಿಗಳು, ಯುಎವಿಗಳು, ರಾಡಾರ್?ಗಳು ಮತ್ತು ರಾಕೆಟ್?ಗಳು ಸೇರಿದಂತೆ ಅದರ ಅತ್ಯಂತ ಕಾರ್ಯತಂತ್ರದ ಶಸ್ತ್ರಾಸ್ತ್ರಗಳನ್ನು ಗಮನಾರ್ಹವಾಗಿ ಧ್ವಂಸಗೊಳಿಸಿವೆ.

ಸಿರಿಯಾದ ಹಲವು ಪ್ರಮುಖ ವಾಯುನೆಲೆಗಳನ್ನು ಗುರಿಯಾಗಿಸಿಕೊಂಡು ಈ ದಾಳಿ ನಡೆಸಲಾಗಿದೆ. ಉತ್ತರ ಡಮಾಸ್ಕಸ್ ಬಳಿಯ ಟಿ 4 ವಿಮಾನ ನಿಲ್ದಾಣವು ಗಮನಾರ್ಹವಾಗಿ ಹಾನಿಗೊಳಗಾಗಿದ್ದು, ಅಲ್ಲಿ ಬೀಡುಬಿಟ್ಟಿದ್ದ ಎಸ್‌ಯು -22 ಮತ್ತು ಎಸ್?ಯು -24 ಫೈಟರ್ ಸ್ಕ್ವಾಡ್ರನ್‌ಗಳು ಸಂಪೂರ್ಣವಾಗಿ ನಾಶವಾಗಿವೆ.

ಮೂರು ಹೆಚ್ಚುವರಿ ಫೈಟರ್ ಸ್ಕ್ವಾಡ್ರನ್?ಗಳನ್ನು ಹೊಂದಿರುವ "ಬ್ಲೆ" ವಿಮಾನ ನಿಲ್ದಾಣ ಮತ್ತು ಹತ್ತಿರದ ಶಸ್ತ್ರಾಸ್ತ್ರ ಶೇಖರಣಾ ಸ್ಥಳವೂ ಇಸ್ರೇಲ್ ದಾಳಿಯಲ್ಲಿ ಹಾನಿಗೊಳಗಾಗಿದೆ.

ಸಿರಿಯಾದಲ್ಲಿನ ಹೊಸ ಸರ್ಕಾರದೊಂದಿಗೆ ಹೇಗೆ ವ್ಯವಹರಿಸಬೇಕೆಂದು ಮಧ್ಯಪ್ರಾಚ್ಯ ಮತ್ತು ಅದರಾಚೆಗಿನ ದೇಶಗಳು ಯೋಚಿಸುತ್ತಿರುವ ಮಧ್ಯೆ ಈ ವಿಷಯದಲ್ಲಿ ಇಸ್ರೇಲ್ ಒಂದು ಹೆಜ್ಜೆ ಮುಂದೆ ಹೋಗಿದೆ. ತನ್ನ ದೇಶದ ಸುರಕ್ಷತೆಗೆ ಧಕ್ಕೆ ಬರಕೂಡದು ಎಂಬ ತನ್ನ ಬೇಡಿಕೆಯನ್ನು ಸಿರಿಯಾ ಸರ್ಕಾರ ಒಪ್ಪುವವರೆಗೂ ಪ್ರಸ್ತುತ ತನ್ನ ನಿಯಂತ್ರಣದಲ್ಲಿರುವ ಸಿರಿಯನ್ ಭೂಪ್ರದೇಶದಲ್ಲಿಯೇ ಮಿಲಿಟರಿ ನಿಯೋಜಿತವಾಗಿರಲಿದೆ ಎಂದು ಅದು ಹೇಳಿದೆ.

ಅಸ್ಸಾದ್ ಆಡಳಿತದ ಹಠಾತ್ ಕುಸಿತದಿಂದ ಸಿರಿಯಾದೊಂದಿಗಿನ ಇಸ್ರೇಲ್‌ನ ಗಡಿಯಲ್ಲಿ ನಿರ್ವಾತ ಸ್ಥಿತಿ ಉಂಟಾಗಿದೆ ಮತ್ತು ಜಿಹಾದಿ ಗುಂಪುಗಳು ಆ ಖಾಲಿತನದ ಸ್ಥಿತಿಯನ್ನು ದುರ್ಬಳಕೆ ಮಾಡಿಕೊಳ್ಳುವುದನ್ನು ಮತ್ತು ಇಸ್ರೇಲಿ ಜನರಿಗೆ ಅಪಾಯ ಉಂಟು ಮಾಡುವುದನ್ನು ಇಸ್ರೇಲ್ ಸಹಿಸಲಾರದು ಎಂದು ಇಸ್ರೇಲ್ ಪ್ರಧಾನಿ ಬೆಂಜಮಿನ್ ನೆತನ್ಯಾಹು ಹೇಳಿದ್ದಾರೆ.

ಇರಾನ್ ತನ್ನ ಅಸ್ತಿತ್ವವನ್ನು ಸ್ಥಾಪಿಸಲು ಅಥವಾ ಹಿಜ್ಬುಲ್ಲಾಗೆ ಶಸ್ತ್ರಾಸ್ತ್ರಗಳನ್ನು ವರ್ಗಾಯಿಸಲು ಅವಕಾಶ ನೀಡದಂತೆ ನೆತನ್ಯಾಹು ಹೊಸ ಸಿರಿಯನ್ ಆಡಳಿತಕ್ಕೆ ಎಚ್ಚರಿಕೆ ನೀಡಿದ್ದಾರೆ. ಸಿರಿಯಾದ ಆಂತರಿಕ ವ್ಯವಹಾರಗಳಲ್ಲಿ ಹಸ್ತಕ್ಷೇಪ ಮಾಡುವ ಉದ್ದೇಶವನ್ನು ಇಸ್ರೇಲ್ ಹೊಂದಿಲ್ಲವಾದರೂ, ತನ್ನ ಭದ್ರತೆಗೆ ಬೆದರಿಕೆ ಕಂಡು ಬಂದರೆ ಅಗತ್ಯ ಕ್ರಮ ತೆಗೆದುಕೊಳ್ಳಲು ಹಿಂಜರಿಯುವುದಿಲ್ಲ ಎಂದು ಅವರು ತಿಳಿಸಿದ್ದಾರೆ.

# ಬಡ ವಿದ್ಯಾರ್ಥಿಗಳಿಗೆ ಉತ್ತಮ ಭವಿಷ್ಯ ರೂಪಿಸಿಕೊಳ್ಳಲು ಉತ್ತೇಜನ





**ಮಾಲೂರು:** ಶ್ರೀ ಮಾರಿಕಾಂಬಾ ದೇವಾಲಯ ಟ್ರಸ್ಟ್ ವತಿಯಿಂದ ಸರ್ಕಾರಿ ಶಾಲೆಗಳು ಹೊಸ ಹೊಸ ರೂಪ ಪಡೆದುಕೊಂಡು ಬಡ ವಿದ್ಯಾರ್ಥಿಗಳಿಗೆ ಉತ್ತಮ ಭವಿಷ್ಯ ರೂಪಿಸಿಕೊಳ್ಳಲು ಉತ್ತೇಜನ ನೀಡುತ್ತಿರುವುದು ಶ್ಲಾಘನೀಯ ಎಂದು ಶಾಸಕ ಕೆ ವೈ ನಂಜೇಗೌಡ ಹೇಳಿದರು,

ತಾಲ್ಲೂಕಿನ ದೊಡ್ಡಶಿವಾರ ಗ್ರಾ.ಪಂ.ವ್ಯಾಪ್ತಿಯ ಪೂರಮಾಕನಹಳ್ಳಿ ಸರ್ಕಾರಿ ಕಿರಿಯ ಪ್ರಾಥಮಿಕ ಶಾಲೆಯ ನೂತನ ಕಟ್ಟಡವನ್ನು ಶ್ರೀ ಕ್ಷೇತ್ರ ಶ್ರೀ ಮಾರಿಕಾಂಬಾ ದೇವಾಲಯ ಟ್ರಸ್ಟ್ ವತಿಯಿಂದ ನಿರ್ಮಿಸಿದ್ದ ನೂತನ ಕಟ್ಟಡವನ್ನು ಶಾಸಕ ಕೆ ವೈ ನಂಜೇಗೌಡ ಲೋಕಾರ್ಪಣೆ ಮಾಡಿ ಮಾತನಾಡಿದರು,

ಶ್ರೀ ಮಾರಿಕಾಂಬಾ ದೇವಾಲಯ ಟ್ರಸ್ಟ್ ವತಿಯಿಂದ ಸರ್ಕಾರಿ ಶಾಲೆಗಳನ್ನು ದತ್ತು ತೆಗೆದುಕೊಂಡು ಹೊಸ ರೂಪ ನೀಡಿ ಮಾದರಿ ಶಾಲೆಯನ್ನಾಗಿ ಮಾರ್ಪಟ್ಟಿರೊದು ಸಂತಸದ ಸಂಗತಿಯಾಗಿದೆ, ಸರ್ಕಾರಿ ಶಾಲೆಯಲ್ಲಿ ವಿದ್ಯಾಭ್ಯಾಸ ಮಾಡುತ್ತಿರುವ ಬಡ ಮಕ್ಕಳಿಗೆ ಸರ್ಕಾರದ ಅನುದಾನ ಜೊತೆಗೆ ಸಮಾಜ ಸೇವೆಯಲ್ಲಿ ತೊಡಗಿರುವ ಟ್ರಸ್ಟ್ ಗಳು ಖಾಸಗಿ ಶಾಲೆಗಳಿಗೆ ಪೈಪೋಟಿ ನೀಡಿ ಉತ್ತಮ ಪಾಠ ಪ್ರವಚನಗಳ ಜೊತೆಗೆ ಪೀಠೋಪಕರಣಗಳು, ಶೈಕ್ಷಣಿಕ ಪರಿಕರಗಳ ಮೂಲ ಭೂತ ಸೌಕರ್ಯಗಳ ಕೊರತೆ ನೀಗಿಸುತ್ತಿರುವುದು ಶ್ಲಾಘನೀಯ,

ಪಟ್ಟಣದಲ್ಲಿ ಶುದ್ದಕುಡಿಯುವ ನೀರಿನ ಘಟಕಗಳು, ಸರಕಾರಿ ಆಸ್ಪತ್ರೆಯಲ್ಲಿ ಕೊಠಡಿಗಳ ನವೀಕರಣ, ಹಾಸಿಗಳು ಸೌಲಭ್ಯ ಜತೆಗೆ ಗ್ರಾಮೀಣ ಪ್ರದೇಶದಲ್ಲಿರುವ ಸರ್ಕಾರಿ ಶಾಲೆಗಳಿಗೆ ಮಾರಿಕಾಂಬ ಟ್ರಸ್ಟ್ ವತಿಯಿಂದ ನೂತನ ಕಟ್ಟಡ ಪುನರ್ ನಿರ್ಮಾಣ ಮತ್ತು ಹಿಂದುಳಿದ ಪ್ರದೇಶದ ಗ್ರಾಮಗಳಿಗೆ ಇನ್ನೂ ಹೆಚ್ಚಿನ ಸೌಲಭ್ಯಗಳನ್ನು ಒದಗಿಸಲು ಮುಂದಾಗಿರುವುದು ಶ್ಲಾಘನೀಯ ಸಂಗತಿ ಎಂದು ಹೇಳಿದರು,

ಈ ಸಂದರ್ಭದಲ್ಲಿ ದೊಡ್ಡಶಿವಾರ ಗ್ರಾ.ಪಂ. ಅಧ್ಯಕ್ಷ ಎಂ.ಮಂಜುನಾಥ್, ದೇವಾಲಯ ಟ್ರಸ್ಟ್ ಅಧ್ಯಕ್ಷ ಪಿ.ವೆಂಕಟೇಶ್, ಬಿಇಒ ಚಂದ್ರಕಲಾ, ಟ್ರಸ್ಟ್ ಸದಸ್ಯ ತಬಲನಾರಾಯಣಪ್ಪ, ಪಂಚೆ ನಂಜುಂಡಪ್ಪ, ಎಂ.ಜಗನ್ನಾಥ್ , ಕೋಳಿನಾರಾಯಣ್,ಶಿವಾಜಿರಾವ್, ಕಾರ್ಯದರ್ಶಿ ಮಾರಿಕಾಂಬಾ ಮಂಜುನಾಥ್, ಸರಕಾರಿ ನೌಕರ ಸಂಘದ ಖಜಾಂಚಿ ಆರ್.ನರಸಿಂಹ, ಪಿ.ರಮೇಶ್, ಶಿಕ್ಷಣ ಇಲಾಖೆಯ ಎಸ್.ಮೋಹನ್, ಪೊಲೀಸ್ ಇನ್ಸ್ಪೆಕ್ಟರ್ ವಸಂತ್, ಗ್ರಾ.ಪಂ.ಸದಸ್ಯ ಲೋಕೇಶ್, ಮುಖಂಡರಾದ ಎಸ್.ವಿ.ಗೋರ್ವರ್ಧನರೆಡ್ಡಿ, ಪಾಪರೆಡ್ಡಿ, ಶ್ರೀನಾಥ್ ಬುಜ್ಜಿ, ಚಿರಂಜೀವಿ, ಪಿಡಿಒ ಆನಂದ್ ಕಾರ್ಯದರ್ಶಿ ಮಲ್ಲಿಕಾರ್ಜುನ, ಬಿಲ್ ಕಲೆಕ್ಟರ್ ಗಣೇಶ್, ಸಿ.ಆರ್.ಪಿ.ವನಿತಾ, ಶಿಕ್ಷಕರಾದ ಕೃಷ್ಣಪ್ಪ, ಪ್ರಮೀಳಾ, ಕುಸುಮಾ, ಹಾಲು ಉತ್ಪಾದಕ ಸಂಘದ ಅಧ್ಯಕ್ಷ ಶ್ರೀನಿವಾಸ್, ಗ್ರಾ.ಪಂ.ಮಾಜಿ ಸದಸ್ಯ ಚಂದ್ರಪ್ಪ, ರಾಮಣ್ಣ, ಪಿ.ಎಂ.ಕೃಷ್ಣಪ್ಪ ಸೇರಿದಂತೆ ಹಲವಾರು ಮುಖಂಡರು ಹಾಜರಿದ್ದರು.

# ಹೆಚ್‌ಡಿಕೆ ಮುಖ್ಯಮಂತ್ರಿಯಾಗಬೇಕೆಂಬುದೇ ನನ್ನ ಆಸೆ

**ಶಿಡ್ಲಘಟ್ಟ:** 18 ತಿಂಗಳು ಕುಮಾರಸ್ವಾಮಿ ಮುಖ್ಯಮಂತ್ರಿಯಾಗಿ ಅವರು ಮಾಡಿದ ಅಭಿವೃದ್ಧಿ ಕೆಲಸಗಳೇ ಇಂದಿಗೂ ಜನರ ಮನದಲ್ಲಿದ್ದು ಮುಂದಿನ 2028ರಲ್ಲಿ ನಡೆಯುವ ವಿಧಾನಸಭಾ ಚುನಾವಣೆಯಲ್ಲಿ ಎನ್‌ಡಿಎ ಪಕ್ಷವನ್ನು ರಾಜ್ಯದಲ್ಲಿ ಅಧಿಕಾರಕ್ಕೆ ತರಬೇಕು. ಎಚ್.ಡಿ.ಕುಮಾರಸ್ವಾಮಿ ಅವರನ್ನು ಮುಖ್ಯಮಂತ್ರಿಯನ್ನಾಗಿ ಮಾಡಬೇಕೆಂಬುದೆ ನನ್ನ ಗುರಿ ಹಾಗೂ ಆಸೆ ಕೂಡ ಎಂದು ಶಾಸಕ ಮೇಲೂರು ಬಿ.ಎನ್.ರವಿಕುಮಾರ್ ತಿಳಿಸಿದ್ದಾರೆ.

ತಾಲ್ಲೂಕಿನ ಮೇಲೂರಿನ ಅವರ ಸ್ವಗೃಹದ ಕಚೇರಿಯಲ್ಲಿ ನಡೆದ ಕಾರ್ಯಕ್ರಮದಲ್ಲಿ ವಿಜೇತರಾದ ಮಳಮಾಚನಹಳ್ಳಿ, ಭಕ್ತರಹಳ್ಳಿ ಹೊಸಪೇಟೆ ಹಾಗೂ ನಾಗಮಂಗಲ ಗ್ರಾಮ ಪಂಚಾಯಿತಿಗಳ ಜೆಡಿಎಸ್ ಬೆಂಬಲಿತ ಸದಸ್ಯರನ್ನು ಅಭಿನಂದಿಸಿ ಹಾಗೂ ಸನ್ಮಾನಿಸಿ ಅವರು ಮಾತನಾಡಿದರು.

ನನಗೆ ನನ್ನ ಕ್ಷೇತ್ರದ ಬಗ್ಗೆ ಚಿಂತೆಯಿಲ್ಲ ನಮ್ಮ ಪಕ್ಷದ ಕಾರ್ಯಕರ್ತರು, ಮುಖಂಡರ ಹಿಂದೆ ನಾನಿದ್ದೇನೆ ಎಂಬ ಭರವಸೆ ಇದ್ದರೆ ಸಾಕು ಎಲ್ಲಾ ಚುನಾವಣೆಗಳನ್ನು ಸಮರ್ಥವಾಗಿ ಎದುರಿಸುವ ಶಕ್ತಿ ನಮ್ಮ ಮುಖಂಡರು ಮತ್ತು ಕಾರ್ಯಕರ್ತರಿಗೆ ಇದೆ ಎಂದು ಹೇಳಿದರು.

ರಾಜ್ಯದಲ್ಲಿ ಜೆಡಿಎಸ್ ಪಕ್ಷ ಬಲಿಷ್ಠವಾಗಿದೆ. ಅದರಲ್ಲೂ ಕೋಲಾರ ಭಾಗದಲ್ಲೂ ಪಕ್ಷಕ್ಕೆ ಹೆಚ್ಚಿನ ಶಕ್ತಿಯಿದೆ ಹಾಗಾಗಿ ಮುಂದಿನ ವಿಧಾನಸಭೆ ಚುನಾವಣೆಯಲ್ಲಿ ಎನ್‌ಡಿಎ ಪಕ್ಷವನ್ನು ಆಕಾರಕ್ಕೆ ತಂದು ಕುಮಾರಣ್ಣನವರನ್ನು ಮುಖ್ಯಮಂತ್ರಿ ಸ್ಥಾನದಲ್ಲಿ ಕೂರಿಸುವುದಷ್ಟೆ ನಮ್ಮ ಗುರಿ ಮತ್ತು ಆ ನಿಟ್ಟಿನಲ್ಲಿ ಈಗಿನಿಂದಲೇ ಕಾರ್ಯಪ್ರವೃತ್ತಿ ಆಗಿದ್ದೇನೆ ತಾವು ಕೂಡ ಆ ನಿಟ್ಟಿನಲ್ಲಿ ಕೆಲಸ ಮಾಡಬೇಕು ಎಂದು ಮನವಿ ಮಾಡಿದರು.

ತಾಲ್ಲೂಕಿನ 4 ಗ್ರಾಮ ಪಂಚಾಯಿತಿಗಳ 48 ಸ್ಥಾನಗಳಿಗೆ ನಡೆದ ಚುನಾವಣೆಯಲ್ಲಿ ನಮ್ಮ ಜೆಡಿಎಸ್ ಬೆಂಬಲಿತ 35 ಮಂದಿ ಸದಸ್ಯರು ಗೆದ್ದಿದ್ದಾರೆ ಎಂದರೆ ಇದರಲ್ಲೇ ಗೊತ್ತಾಗುತ್ತದೆ ನಮ್ಮ ಪಕ್ಷದ ಶಕ್ತಿ ಹಾಗೂ ಕಾರ್ಯಕರ್ತರ ಶಕ್ತಿ ತಿಳಿಯುತ್ತದೆ ಎಂದರು.

ಮುಂದಿನ ವರ್ಷದಲ್ಲಿ ಎದುರಾಗುವ ಎಲ್ಲಾ ಗ್ರಾಮ ಪಂಚಾಯಿತಿ, ತಾಲ್ಲೂಕು ಮತ್ತು ಜಿಲ್ಲಾ ಪಂಚಾಯಿತಿ ಚುನಾವಣೆಗೂ ನಾವು ಈಗಿನಿಂದಲೇ ಸನ್ನದ್ಧರಾಗಬೇಕಿದೆ. ಇದೀಗ ಚುನಾವಣೆ ನಡೆದ 4 ಪಂಚಾಯಿತಿ ಬಿಟ್ಟು ಇನ್ನುಳಿದ 30 ಗ್ರಾಮ ಪಂಚಾಯಿತಿ, 7 ಜಿಲ್ಲಾ ಪಂಚಾಯಿತಿ, 13 ತಾಲ್ಲೂಕು ಪಂಚಾಯಿತಿ ಸ್ಥಾನಗಳನ್ನೂ ಗೆಲ್ಲುವತ್ತ ನಮ್ಮೆಲ್ಲರ ಪಕ್ಷ ಸಂಘಟನೆ, ಕಾರ್ಯ ಚಟುವಟಿಕೆಗಳು ಮುನ್ನಡೆಯಬೇಕು ಎಂದು ನುಡಿದರು.

ಈ ನಾಲ್ಕು ಗ್ರಾಮ ಪಂಚಾಯಿತಿಗಳಿಗೆ ನಡೆದ ಚುನಾವಣೆಯಲ್ಲಿ ನಮ್ಮ ಪಕ್ಷಕ್ಕೆ ಅಭೂತಪೂರ್ವ ಶಕ್ತಿ ತುಂಬಿದ ಪಕ್ಷದ ಎಲ್ಲ ಮುಖಂಡರು, ಕಾರ್ಯಕರ್ತರು ಹಾಗೂ ಮತದಾರರಿಗೆ ಅಭಿನಂದನೆಗಳನ್ನು ತಿಳಿಸಿದ ಅವರು ನಿಮ್ಮೆಲ್ಲರ ಆಶೋತ್ತರಗಳಿಗೆ ಅನುಗುಣವಾಗಿ ಕಾರ್ಯನಿರ್ವಹಿಸುತ್ತೇನೆ ಎಂದು ಭರವಸೆ ನೀಡಿದರು.

ಈಗ ಆಯ್ಕೆಯಾದ ಎಲ್ಲಾ ಸದಸ್ಯರು ಕೂಡ ಮತದಾರರ ಮನದಾಸೆಗೆ ತಕ್ಕಂತೆ ಕಾರ್ಯನಿರ್ವಹಿಸಬೇಕು, ಅವರ ನಂಬಿಕೆ ವಿಶ್ವಾಸಕ್ಕೆ ದಕ್ಕೆ ಬಾರದಂತೆ ಅಭಿವೃದ್ಧಿ ಕಾರ್ಯಗಳನ್ನು ನಡೆಸಿ ಉತ್ತಮ ಹೆಸರು ಪಡೆದುಕೊಳ್ಳಬೇಕು, ಆ ಮೂಲಕ ನಿಮಗೂ ನಮ್ಮ ಪಕ್ಷಕ್ಕೂ ಒಳ್ಳೆಯ ಹೆಸರು ತರಬೇಕೆಂದು ತಿಳಿ ಹೇಳಿದರು.

ಈ ಚುನಾವಣೆಯಲ್ಲಿ ಸೋತ ಅಭ್ಯರ್ಥಿಗಳು ಯಾವುದೆ ಕಾರಣಕ್ಕೂ ಎದೆಗುಂದಬೇಡಿ, ಎಂದಿನಂತೆ ನೀವು ಕಾರ್ಯಕರ್ತರು, ಮತದಾರರ ಸಂಪರ್ಕದಲ್ಲಿರಿ, ನಿಮಗೆ ಸೂಕ್ತ ಸ್ಥಾನ ಮಾನ ನೀಡುವುದಾಗಿ ಧೈರ್ಯ ತುಂಬಿದರು.

ಇದೇ ವೇಳೆ ಮಳಮಾಚನಹಳ್ಳಿ, ಭಕ್ತರಹಳ್ಳಿ ಹೊಸಪೇಟೆ ಹಾಗೂ ನಾಗಮಂಗಲ ಗ್ರಾಮ ಪಂಚಾಯಿತಿಗಳ ಜೆಡಿಎಸ್ ಬೆಂಬಲಿತ ವಿಜೇತರಾದ ಹಾಗೂ ಪರಾಜಿತ ಅಭ್ಯರ್ಥಿಗಳನ್ನು ಸನ್ಮಾನಿಸಿ ಅಭಿನಂದಿಸಿದರು.

ಈ ಸಂದರ್ಭದಲ್ಲಿ ಜೆಡಿಎಸ್ ಪಕ್ಷದ ಅಧ್ಯಕ್ಷ ಡಿ.ಬಿ.ವೆಂಕಟೇಶ್, ಜಿಲ್ಲಾ ಪಂಚಾಯಿತಿ ಮಾಜಿ ಸದಸ್ಯರಾದ ಬಂಕ್ ಮುನಿಯಪ್ಪ, ತಾಲ್ಲೂಕು ಪಂಚಾಯಿತಿ ಮಾಜಿ ಅಧ್ಯಕ್ಷ ಲಕ್ಷ್ಮಿನಾರಾಯಣರೆಡ್ಡಿ, ಮಾಜಿ ಅದ್ಯಕ್ಷಬಿ.ವಿ.ನಾರಾಯಣಸ್ವಾಮಿ, ತಾದೂರು ರಘು, ಜಿಲ್ಲಾ ಜಾಗೃತಿ ಸಮಿತಿ ಸದಸ್ಯ ಮಂಜುನಾಥ್, ನಗರಸಭೆ ಅಧ್ಯಕ್ಷ ವೆಂಕಟಸ್ವಾಮಿ, ಹುಜಗೂರು ರಾಮಣ್ಣ, ನಾಗಮಂಗಲಶ್ರೀನಿವಾಸ್‌ಗೌಡ, ಈ.ತಿಮ್ಮಸಂದ್ರಶಿವಾರೆಡ್ಡಿ, ಬಿ.ಕೆ.ಶ್ರೀನಿವಾಸ್, ಆರ್.ಎ.ಉಮೇಶ್, ಕೆ.ಎಸ್.ಮಂಜುನಾಥ್ ಮತ್ತಿತರ ಮುಖಂಡರು ಹಾಜರಿದ್ದರು.



# ಕ್ಷೇತ್ರಗಳ ಅಭಿವೃದ್ಧಿಯ ನನ್ನ ಕನಸು:ಸಚಿವ ಚೆಲುವರಾಯಸ್ವಾಮಿ


**ನಾಗಮಂಗಲ:** ಗ್ರಾಮೀಣ ಪ್ರದೇಶಗಳ ರಸ್ತೆಗಳ ಅಭಿವೃದ್ಧಿ ಕ್ಷೇತ್ರಗಳ ಅಭಿವೃದ್ಧಿಯ ಜೊತೆಯಲ್ಲಿ ಶ್ರೀ ಕ್ಷೇತ್ರಗಳ ಅಭಿವೃದ್ಧಿಯ ಕನಸು ನನ್ನದಾಗಿದೆ ಎಂದು ಸಚಿವ ಚೆಲುವರಾಯಸ್ವಾಮಿ ಅವರು ತಿಳಿಸಿದರು.

ಅವರು ಇಂದು ನಾಗಮಂಗಲ ತಾಲೂಕು ದೇವಲಾಪುರ ಹೋಬಳಿಯ ಶ್ರೀ ಕ್ಷೇತ್ರ ಕೋಟೆ ಬೆಟ್ಟದಲ್ಲಿ ಶ್ರೀ ಕಂಬದ ನರಸಿಂಹಸ್ವಾಮಿ ಯಾತ್ರಿ ನಿವಾಸ ಕಟ್ಟಡದ ಉದ್ಘಾಟನೆ ಮಾಡುತ್ತಾ ಮಾತನಾಡಿದರು.

2016ರಲ್ಲಿ ಯಾತ್ರಿ ನಿವಾಸದ ಕಟ್ಟಡದ ಶಂಕುಸ್ಥಾಪನೆ ನನ್ನ ಅಧಿಕಾರ ಅವಧಿಯಲ್ಲಿ ನಡೆದಿದ್ದು ತದನಂತರ ಬಂದಂತಹ ಜನಪ್ರತಿನಿಧಿಗಳು 2024ರವರೆಗೂ ಯಾವ ತರಹದ ಅಭಿವೃದ್ಧಿ ಕಾಮಗಾರಿಗಳಿಗೆ ಚಾಲನೆ ನೀಡದೆ ಇದ್ದು2024 ರಲ್ಲಿ ಈ ಕಟ್ಟಡದ ಲೋಕಾರ್ಪಣೆ ಮಾಡಿರುವುದು ನನ್ನ ಅವಧಿಯಲ್ಲಿ ಎಂಬುದು ಕ್ಷೇತ್ರದ ಜನರು ಅರ್ಥ ಮಾಡಿಕೊಳ್ಳಬೇಕು.

ಮುಂದೆ ಈ ಕ್ಷೇತ್ರದ ಅಭಿವೃದ್ಧಿಗೆ ಹಾಗೂ ಯಾತ್ರಿ ನಿವಾಸದ ಕಟ್ಟಡವನ್ನು ಬಳಸಿಕೊಳ್ಳಲು ಟ್ರಸ್ಟಿಗೆ ಕಾನೂನಾತ್ಮಕವಾಗಿ ಬಳಸಿಕೊಳ್ಳುವಂತೆ ಈ ಸಂದರ್ಭದಲ್ಲಿ ತಿಳಿಸಿದರು. ಈ ಭಾಗದ ರಸ್ತೆಗಳು ಮುಂದಿನ ದಿನಗಳಲ್ಲಿ ವ್ಯವಸ್ಥಿತವಾಗಿ ಮಾಡಿಸುವ ಭರವಸೆ ಹಾಗೂ ಜನತೆ ತಾಳ್ಮೆ ವಹಿಸುವ ಮುಖಾಂತರ ನಮ್ಮಗಳಿಗೂ ಸಹಕಾರ ನೀಡುವಂತೆ ಈ ಸಂದರ್ಭದಲ್ಲಿ ತಿಳಿಸಿದರು.

ದೇವಲಾಪುರ ಹೋಬಳಿಯ ರಸ್ತೆಗಳ ಅಭಿವೃದ್ಧಿಗೆ ಸುಮಾರು 30 ಕೋಟಿ ರೂ ಅನುದಾನ ನೀಡಿದ್ದು ರಸ್ತೆಗಳ ಕಾಮಗಾರಿಗಳು ಪರಿಪೂರ್ಣಗೊಂಡ ನಂತರ ಬಾಕಿ ರಸ್ತೆಗಳಿಗೆ ಮಂಜೂರು ಮಾಡುವುದಾಗಿ ತಿಳಿಸಿದರು. ಇದೇ ಸಂದರ್ಭದಲ್ಲಿ ಸಂಬಂಧಪಟ್ಟ ಇಲಾಖೆ ಅಧಿಕಾರಿಗಳು. ತಟ್ಟಹಳ್ಳಿ ನರಸಿಂಹಮೂರ್ತಿ. ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ರಾಜೇಶ್ ಗ್ರಾಮಸ್ಥರು. ಗ್ರಾಮ ಪಂಚಾಯತಿ ಸದಸ್ಯರುಗಳು ದೇವಾಲಯ ಆಡಳಿತ ಮಂಡಳಿಯ ಸದಸ್ಯರುಗಳು ಹಾಜರಿದ್ದರು.




# ಗ್ರಾಮೀಣ ಮಕ್ಕಳಿಗೆ ಗುಣಮಟ್ಟದ ಶಿಕ್ಷಣ ಒದಗಿಸುವ ಧ್ಯೇಯ

**ಶಿಡ್ಲಘಟ್ಟ:** ಗ್ರಾಮೀಣ ಭಾಗದ ಮಕ್ಕಳಿಗೆ ಉತ್ತಮ ಪರಿಸರದೊಂದಿಗೆ ಗುಣಮಟ್ಟದ ಶಿಕ್ಷಣ ಒದಗಿಸಲು ಧ್ಯೇಯದೊಂದಿಗೆ ಆರಂಭವಾದ ಶ್ರೀ ಸಾಯಿ ಇಂಟರ್ ನ್ಯಾಷನಲ್ ಶಾಲೆಯಲ್ಲಿ ಪ್ರಯೋಗಾಲಯ, ಗ್ರಂಥಾಲಯ, ಆಟದ ಮೈದಾನ, ಈಜುಕೊಳ, ಪ್ರಥಮ ಚಿಕಿತ್ಸಾ ಕೊಠಡಿ, ಸುಸಜ್ಜಿತ ಕಟ್ಟಡ, ಮೂಲಭೂತ ಸೌಕರ್ಯ ಸೇರಿದಂತೆ ಗುಣಮಟ್ಟದ ವ್ಯಾಸಂಗವನ್ನು ಒದಗಿಸುತ್ತಿರುವುದನ್ನು ಪರಿಗಣಿಸಿ ರಾಷ್ಟ್ರಮಟ್ಟದ ಪ್ರತಿಷ್ಠಿತ ಪ್ರಶಸ್ತಿ ಪಡೆದಿರುವುದು ಹೆಮ್ಮೆಯ ಸಂಗತಿ ಯಾಗಿದೆ ಎಂದು ಶ್ರೀಸಾಯಿ ಇಂಟರ್‌ನ್ಯಾಶನಲ್ ಶಾಲೆಯ ಕಾರ್ಯದರ್ಶಿ ಎಂ.ಮಂಜುನಾಥ್ ತಿಳಿಸಿದರು.

ಬೆಂಗಳೂರಿನ ತಾಜ್ ಹೋಟೆಲ್‌ನಲ್ಲಿ ಆಯೋಜಿಸಿದ್ದ ಕಾರ್ಯಕ್ರಮದಲ್ಲಿ ಶಿಕ್ಷಣ ವಿಭಾಗದಲ್ಲಿ ಅತ್ಯುನ್ನತ ಎಜುಕೇಶನ್ ನ್ಯೂಸ್ ನೆಟ್‌ವರ್ಕ್‌ನಿಂದ ನೀಡುವ ರಾಷ್ಟ್ರಮಟ್ಟದ ಡೈನಾಮಿಕ್ ಸ್ಕೂಲ್–2024 ಪ್ರಶಸ್ತಿಗೆ ತಾಲ್ಲೂಕಿನ ಬಶೆಟ್ಟಿಹಳ್ಳಿ ಗೇಟ್‌ನಲ್ಲಿರುವ ಶ್ರೀಸಾಯಿ ಇಂಟರ್‌ನ್ಯಾಶನಲ್ ಶಾಲೆಯು ಭಾಜನವಾಗಿದೆ ಎಂದರು.

ಮಕ್ಕಳನ್ನು ಕೇವಲ ವಿದ್ಯಾಭ್ಯಾಸಕ್ಕೆಸೀಮಿತಗೊಳಿಸದೆ ಅವರಲ್ಲಿ ವ್ಯಕ್ತಿತ್ವ, ನಾಯಕತ್ವ ಗುಣಗಳ ಬೆಳೆಸಲಾಗುತ್ತಿದೆ. ಅಲ್ಲದೆ ಮಕ್ಕಳ ಶೈಕ್ಷಣಿಕ, ಸಾಮಾಜಿಕ ಹಾಗೂ ಭಾವನಾತ್ಮಕ ಬೆಳವಣಿಗೆಗೆ ಪೂರಕವಾದ ಸಮಗ್ರ ಚಟುವಟಿಕೆಗಳನ್ನು ಕೈಗೊಳ್ಳಲಾಗುತ್ತಿದೆ ಕಲಿಕೆಯ ಅವಿಭಾಜ್ಯ ಅಂಗವಾಗಿರುವ ನೃತ್ಯ, ಕರಾಟೆ, ಯೋಗ, ಈಜು ಸೇರಿದಂತೆ ಸಾಂಸ್ಕೃತಿಕ ಚಟುವಟಿಕೆಗಳಲ್ಲಿ ಮಕ್ಕಳನ್ನು ತೊಡಗಿಸಲಾಗುತ್ತಿದ್ದು ಇದರ ಶ್ರಮದ ಫಲವಾಗಿ ರಾಷ್ಟ್ರಮಟ್ಟದ ಡೈನಾಮಿಕ್ ಸ್ಕೂಲ್–2024 ಲಭಿಸಿದೆ ಎಂದು ಸಂತಸ ವ್ಯಕ್ತಪಡಿಸಿದ ಅವರು ಪ್ರಶಸ್ತಿ ಬರಲು ಶ್ರಮಿಸಿದ ಶಾಲಾ ಭೋದಕ ವರ್ಗ ಸಿಬ್ಬಂದಿ ವರ್ಗ ಹಾಗೂ ವಿದ್ಯಾರ್ಥಿಗಳಗೆ ಅಭಿನಂದನೆಗಳನ್ನು ತಿಳಿಸಿದರು.




# ಜನರ ಮನೆ ಬಾಗಿಲಿಗೆ ಯೋಜನೆಗಳು ಸಚಿವ ಚೆಲುವರಾಯಸ್ವಾಮಿ



**ನಾಗಮಂಗಲ:** ನಮ್ಮ ಸರ್ಕಾರವು ಅಧಿಕಾರಕ್ಕೆ ಬಂದಮೇಲೆ ಅನೇಕ ಬದಲಾವಣೆಯನ್ನು ತರುವ ಮೂಲಕ ಕಂದಾಯ ಇಲಾಖೆಯಲ್ಲಿ ಸುಧಾರಣೆ ತರಲಾಗಿದೆ. ಜನ ಸಾಮಾನ್ಯರ ಸಮಸ್ಯೆಯನ್ನು ಬಗೆಹರಿಸಲು ಶ್ರಮಿಸುವ ಮೂಲಕ ಸ್ಪಂದಿಸಿದ್ದೇವೆ. ಯೋಜನೆಗಳನ್ನು ಜನರ ಮನೆ ಬಾಗಿಲಿಗೆ ತೆರಳಿ ಮಾಡಿಕೊಡಲಾಗುತ್ತಿದೆ ಎಂದು ಕೃಷಿ ಹಾಗೂ ಜಿಲ್ಲಾ ಉಸ್ತುವರಿ ಸಚಿವ ಎನ್ ಚಲುವರಾಯಸ್ವಾಮಿ ಅವರು ತಿಳಿಸಿದರು.

ಅವರು ಇಂದು ನಾಗಮಂಗಲದಲ್ಲಿ ಏರ್ಪಡಿಸಿದ್ದ ಕಂದಾಯ ಇಲಾಖೆಯ ದರಖಾಸ್ತು ಪೋಡಿ ದುರಸ್ಥಿ ಸರಳೀಕೃತ ಕಾರ್ಯದ ಹೊಸ ಪಹಣಿ ಮತ್ತು ಪೋಡಿ ಕಾರ್ಯಕ್ರಮ ಉದ್ಘಾಟಿಸುತ್ತ ಮಾತನಾಡಿದರು.

ಕಂದಾಯ ಸಚಿವ ಕೃಷ್ಣ ಭೈರೇಗೌಡ ಅವರು ಮನೆ ಮನೆ ತೆರಳಿ ಖಾತೆ ಮಾಡಬೇಕು ಎಂಬ ಆದೇಶ ಹೊರಡಿಸಿದ್ದಾರೆ. ಹಲವಾರು ದಿನಗಳಿಂದ ಬಾಕಿ ಇದ್ದಂತಹ ಒಟ್ಟು 15,000 ಪ್ರಕರಣಗಳಲ್ಲಿ 13,000 ಪ್ರಕರಣಗಳನ್ನು ಇತ್ಯರ್ಥಗೊಳಿಸಲಾಗಿದೆ. ಕೇವಲ 1 ವಾರದಲ್ಲಿಯೇ 416 ಪ್ರಕರಣಗಳ ಸರ್ವೇ ಮಾಡಲಾಗಿದೆ. ಜೊತೆಗೆ ಪೌತಿ ಖಾತೆಗಳನ್ನು ಸರಿಯಾದ ರೀತಿಯಲ್ಲಿ ಮಾಡಲಾಗುತ್ತಿದೆ. ಜಿಲ್ಲೆಯಲ್ಲಿರುವ ಕಂದಾಯ ಇಲಾಖೆಯ ಸಮಸ್ಯೆಗಳನ್ನು ಹಂತ ಹಂತವಾಗಿ ಪರಿಹರಿಸಲಾಗುತ್ತಿದೆ. 1960– 70 ರಲ್ಲಿ ಮಂಜೂರಾಗಿರುವ ಕಂದಾಯ ಇಲಾಖೆಯ ದರಖಾಸ್ತು ಪೋಡಿ ದುರಸ್ಥಿ ಸರಳೀಕೃತ ಕಾರ್ಯದ ಹೊಸ ಪಹಣಿ ಮತ್ತು ಪೋಡಿ ದಾಖಲೆಗೆ ಸಂಬಂಧಪಟ್ಟಂತೆ ಶಾಶ್ವತ ದಾಖಲೆಗಳನ್ನು ನೀಡಲಾಗುತ್ತಿದೆ ಎಂದರು.

ನಮ್ಮ ಸರ್ಕಾರವು ಜನರ ಮನೆಯ ಬಾಗಿಲಿಗೆ ಅನೇಕ ಯೋಜನೆಗಳನ್ನು ನೀಡುವ ಮೂಲಕ ಅನುಕೂಲ ಮಾಡುತ್ತಿದೆ. ಸರ್ಕಾರದ ಪಂಚಗ್ಯಾರಂಟಿಗಳಾದ ಶಕ್ತಿ ಯೋಜನೆ, ಗೃಹಲಕ್ಷ್ಮಿ, ಗೃಹ ಜ್ಯೋತಿ, ಯುವ ನಿಧಿ, ಅನ್ನ ಭಾಗ್ಯ ಯೋಜನೆಗಳಿಂದ ಸಾರ್ವಜನಿಕರು ಸದುಪಯೋಗ ಪಡೆಯುತ್ತಿದ್ದಾರೆ ಎಂದರು.

ಇದೇ ಸಂದರ್ಭದಲ್ಲಿ ಕೃಷಿ ಇಲಾಖೆ ವತಿಯಿಂದ ಡೀಸಲ್ ಎಂಜಿನ್, ಪಿವಿಸಿ ಪೈಪ್, ರಾಗಿ ಫ್ಲೋರ್‌ಮಿಲ್ ಸೇರಿದಂತೆ 380 ಫಲಾನುಭವಿಗಳಿಗೆ 1ಕೋಟಿ ರೂ ವೆಚ್ಚದ ಕೃಷಿ ಯಂತ್ರೋಪಕರಣಗಳನ್ನು ವಿತರಿಸಲಾಯಿತು.

ಕಾರ್ಯಕ್ರಮದಲ್ಲಿ ವಿಧಾನ ಪರಿಷತ್ ಸದಸ್ಯ ಕೆ.ವಿವೇಕಾನಂದ,ಭೂಮಾಪನ ಕಂದಾಯ ವ್ಯವಸ್ಥೆ ಮತ್ತು ಭೂ ದಾಖಲೆಗಳ ಇಲಾಖೆ ಆಯುಕ್ತರು ಮಂಜುನಾಥ್ ಜೆ.ಮೈಸೂರು ವಿಭಾಗ ಪ್ರಾದೇಶಿಕ ಭೂ ದಾಖಲೆಗಳ ಜಂಟಿ ನಿರ್ದೇಶಕರು ಈ. ಪ್ರಕಾಶ್, ಜಿಲ್ಲಾಧಿಕಾರಿ ಡಾ ಕುಮಾರ, ಉಪವಿಭಾಗಾಧಿಕಾರಿ ಶಿವಮೂರ್ತಿ, ಶ್ರೀನಿವಾಸ್ ಸೇರಿದಂತೆ ಇನ್ನಿತರ ಗಣ್ಯರು ಉಪಸ್ಥಿತರಿದ್ದರು

# ತತ್ವ ಸಿದ್ಧಾಂತಗಳ ಬಗ್ಗೆ ನಂಬಿಕೆಯಿದ್ದರೆ ಸದಸ್ಯತ್ವ ಹೊಂದಿ: ಅಶ್ವತ್ಥ್‌ನಾರಾಯಣ್

**ಶಿಡ್ಲಘಟ್ಟ:** ಇಡೀ ದೇಶಾದ್ಯಂತ ಬಿಜೆಪಿ ಪಕ್ಷದ ಸದಸ್ಯತ್ವ ಅಭಿಯಾನಕ್ಕೆ ಅಭೂತಪೂರ್ವ ಪ್ರತಿಕ್ರಿಯೆ ವ್ಯಕ್ತವಾಗಿದೆ ಸ್ವಯಂ ಪ್ರೇರಿತರಾಗಿ ಕೋಟ್ಯಾಂತರ ಮಂದಿ ಬಿಜೆಪಿ ಪಕ್ಷದ ಸದಸ್ಯತ್ವ ಪಡೆದಿರುವುದು ಸಾರ್ವಜನಿಕರಲ್ಲಿ ಬಿಜೆಪಿ ಪಕ್ಷದ ತತ್ವ ಸಿದ್ಧಾಂತಗಳ ಬಗ್ಗೆ ಇರುವ ನಂಬಿಕೆಯನ್ನು ಬಿಂಬಿಸುತ್ತದೆ ಎಂದು ಬಿಜೆಪಿ ರಾಜ್ಯ ವಕ್ತಾರ ಅಶ್ವತ್ಥ್‌ನಾರಾಯಣ್ ತಿಳಿಸಿದರು.

ನಗರದ ಮಯೂರ ವೃತ್ತದಲ್ಲಿನ ಬಿಜೆಪಿಯ ಸೇವಾ ಸೌಧ ಕಚೇರಿಯಲ್ಲಿ ಹಮ್ಮಿಕೊಂಡಿದ್ದ ಬಿಜೆಪಿ ಸಂಘಟನಾ ಪರ್ವ–2024 ಜಿಲ್ಲಾ ಮಟ್ಟದ ಸಭೆಯಲ್ಲಿ ಅವರು ಮಾತನಾಡಿದರು. ಪ್ರಧಾನ ಮಂತ್ರಿ ನರೇಂದ್ರ ಮೋದಿ ಅವರ ನಾಯಕತ್ವದಲ್ಲಿ ದೇಶ ಸುಭದ್ರವಾಗಿದೆ ಮಾತ್ರವಲ್ಲ, ಅಭಿವೃದ್ಧಿಯ ಪಥದಲ್ಲಿ ಅತಿ ವೇಗವಾಗಿ ಸಾಗುತ್ತಿದೆ. ವಿಶ್ವದ ಅಗ್ರಗಣ್ಯ ದೇಶವಾಗಿ ಶಕ್ತಿಯುತವಾಗಿ ಬೆಳೆಯುತ್ತಿದ್ದು ಇದು ಜಗತ್ತು ನಿಬ್ಬೆರಗಾಗಿ ಗಮನಿಸುವಂತಾಗಿದೆ ಎಂದರು.

ದೇಶದ ಜನ ಸಾಮಾನ್ಯರು ನೆಮ್ಮದಿಯಾಗಿ ನಿರ್ಭಯವಾಗಿ ಬದುಕು ನಡೆಸುತ್ತಿದ್ದು ಅದು ಮೋದಿ ಅವರ ನಾಯಕತ್ವ, ಉತ್ತಮ ಬದುಕು, ಉತ್ತಮ ದೇಶವನ್ನು ಕಟ್ಟುವಂತ ನಂಬಿಕೆಯಿಂದ ಇಂದು ಬಿಜೆಪಿಯೊಂದಿಗೆ ಕೋಟ್ಯಂತರ ಮಂದಿ ಕೈ ಜೋಡಿಸಿದ್ದಾರೆ ಎಂದು ಹೇಳಿದರು.

ಈ ಕ್ಷೇತ್ರದ ಮುಖಂಡ ಸೀಕಲ್ ರಾಮಚಂದ್ರಗೌಡ ನೇತೃತ್ವದಲ್ಲಿ ಪಕ್ಷದ ಸಂಘಟನೆ ಉತ್ತಮವಾಗುತ್ತಿದೆ ಎನ್ನುವುದಕ್ಕೆ ಶಿಡ್ಲಘಟ್ಟದಲ್ಲಿ ಅತಿ ಹೆಚ್ಚು ಸದಸ್ಯತ್ವ ನೋಂದಾಯಿಸಿರುವುದು ಕಣ್ಣ ಮುಂದಿದೆ. ಚುನಾವಣೆಯಲ್ಲಿ ಸೋಲು ಗೆಲುವು ಸಹಜ, ಸೋಲಿಗೆ ಕುಗ್ಗಬೇಡಿ, ಗೆಲುವಿಗೆ ಹಿಗ್ಗದೆ ಸಮಚಿತ್ತದಿಂದ ಪಕ್ಷ ಸಂಘಟನೆ ಮಾಡಿ ಎಂದು ನುಡಿದರು. ಮುಖಂಡ ಸೀಕಲ್ ರಾಮಚಂದ್ರಗೌಡ ಮಾತನಾಡಿ, ಕೇಂದ್ರದಲ್ಲಿ ಮೋದಿ ನೇತೃತ್ವದ ಬಿಜೆಪಿ ಸರಕಾರವು ಕೈಗೊಂಡ ಅಭಿವೃದ್ಧಿ ಕಾರ್ಯಗಳು, ದೇಶವನ್ನು ಕಟ್ಟುವ ಮತ್ತು ದೇಶದ ಜನರ ಬದುಕನ್ನು ಕಟ್ಟುವ ಕಾರ್ಯಕ್ರಮಗಳ ಬಗ್ಗೆ ಜನರಿಗೆ ಮನವರಿಕೆ ಮಾಡಿಕೊಡುವ ಕೆಲಸವನ್ನು ಪಕ್ಷದ ಕಾರ್ಯಕರ್ತರು, ಪದಾಧಿಕಾರಿಗಳು ಇನ್ನಷ್ಟು ಉತ್ತಮವಾಗಿ ಮಾಡಬೇಕೆಂದರು.

ಜಿಲ್ಲೆಯಲ್ಲಿ ದಿನಗಳು ಕಳೆದಂತೆ ಪಕ್ಷದ ಸಂಘಟನೆ ಉತ್ತಮವಾಗುತ್ತಿದ್ದು, ಕಾರ್ಯಕರ್ತರ ಪಡೆಯು ಬೆಳೆಯುತ್ತಿದೆ,ಯಾವುದೆ ರೀತಿಯ ಬಿನ್ನಾಭಿಪ್ರಾಯಗಳು ಇಲ್ಲದೆ, ಅಧಿಕಾರದ ಆಸೆಯಿಲ್ಲದೆ ಕೇವಲ ದೇಶವನ್ನು ಮಾತ್ರ ಗಮನದಲ್ಲಿಟ್ಟುಕೊಂಡ ಕಾರ್ಯಕರ್ತರ ಪಡೆಯೇ ನಮಗೆ ಶ್ರೀರಕ್ಷೆಯಾಗಿದೆ ಎಂದು ಹೇಳಿದರು.

ಕೋಲಾರ ಲೋಕಸಭೆ ಕ್ಷೇತ್ರ ಮಾತ್ರವಲ್ಲ ರಾಜ್ಯದಲ್ಲಿಯೇ ಅತಿ ಹೆಚ್ಚು ಸಂಖ್ಯೆಯಲ್ಲಿ ಸದಸ್ಯತ್ವ ನೋಂದಾಯಿಸಿದ ಕ್ಷೇತ್ರಗಳಲ್ಲಿ ನಮ್ಮ ಶಿಡ್ಲಘಟ್ಟ ಕ್ಷೇತ್ರವೂ ಒಂದಾಗಿದ್ದು ಇದಕ್ಕೆ ಎಲ್ಲ ಕಾರ್ಯಕರ್ತರು ಒಗ್ಗಟ್ಟಿನಿಂದ ಜನ ಸಾಮಾನ್ಯರಿಗೆ ಹತ್ತಿರವಾಗಿದ್ದೆ ಕಾರಣ, ಬಿಜೆಪಿ ಪಕ್ಷ ಹಾಗೂ ಮೋದಿ ಮೇಲಿನ ನಂಬಿಕೆಯಿಂದ ಇದೆಲ್ಲವೂ ಸಾಧ್ಯವಾಯಿತು ಎಂದು ನುಡಿದರು. ಇದೇ ವೇಳೆ ಜಿಲ್ಲೆಯಲ್ಲಿ ಪಕ್ಷ ಸಂಘಟನೆಯನ್ನು ಇನ್ನಷ್ಟು ಹೆಚ್ಚಿಸುವ ಬಗ್ಗೆ ಸಭೆಯಲ್ಲಿ ಚರ್ಚಿಸಲಾಯಿತು,ಸಲಹೆ ಸೂಚನೆಗಳನ್ನು ಸ್ವೀಕರಿಸಲಾಯಿತು. ಈ ಸಂದರ್ಭದಲ್ಲಿ ಬಿಜೆಪಿ ಜಿಲ್ಲಾಧ್ಯಕ್ಷ ರಾಮಲಿಂಗಪ್ಪ, ಗ್ರಾಮಾಂತರ ಮಂಡಲ ಅಧ್ಯಕ್ಷ ಸೀಕಲ್ ಆನಂದಗೌಡ, ಜಿಲ್ಲಾ ಚುನಾವಣಾಧಿಕಾರಿ ಎಸ್.ಎನ್. ರಾಜಣ್ಣ, ಜಿಲ್ಲಾ ಪ್ರಧಾನ ಕಾರ್ಯದರ್ಶಿ ಎಚ್.ಎಸ್. ಮುರಳೀಧರ್, ಕೆ.ಬಿ.ಮುರಳಿ, ಮಧು ಸೂರ್ಯನಾರಾಯಣ, ಡಾ.ಶಶಿಧರ್,ಗೌರಿಬಿದನೂರಿನ ವೇಣುಗೋಪಾಲ್ ಸೇರಿದಂತೆ ಜಿಲ್ಲೆಯ ನಾನಾ ಮಂಡಲ, ಮೋರ್ಚಾಗಳ ಪದಾಧಿಕಾರಿಗಳು ಸಭೆಯಲ್ಲಿ ಭಾಗವಹಿಸಿದ್ದರು.

## ಸುದ್ದಿ ಸಂಜೆ

# ಮಕ್ಕಳಿಗೆ ವಿದ್ಯಾಭ್ಯಾಸದ ಜೊತೆಗೆ ಕ್ರೀಡೆ ಅಗತ್ಯ



**ಚೇಳೂರು:** ಮಕ್ಕಳು ವಿದ್ಯಾಭ್ಯಾಸದ ಜೊತೆಗೆ ಕ್ರೀಡೆ ಸಾಂಸ್ಕೃತಿಕ ಕಾರ್ಯಕ್ರಮ ಪ್ರಬಂದ ಸ್ಪರ್ಧೆ ಕಲಿ–ನಲಿ ಹಾಗೂ ಇನ್ನಿತರೆ ಕಾರ್ಯಕ್ರಮಗಳಲ್ಲಿ ಭಾಗವಹಿಸಿ ತಮ್ಮ ಜ್ಞಾನ ಬೆಳೆಸಿಕೊಳ್ಳಬೇಕು ಎಂದು ಚೇಳೂರು ಸಿಆರ್‌ಪಿ ಬಾಲಾಜಿ ವಿದ್ಯಾರ್ಥಿಗಳಿಗೆ ಕಿವಿ ಮಾತು ಹೇಳಿದರು.

ಚೇಳೂರು ಹೋಬಳಿ ಮಟ್ಟದ ನಲಿ– ಕಲಿ ಶಿಕ್ಷಕರ ಸಮಾಲೋಚನಾ ಸಭೆಯನ್ನು ಸರ್ಕಾರಿ ಹಿರಿಯ ಪ್ರಾಥಮಿಕ ಪಾಳ್ಯಕೆರೆ ಶಾಲೆಯಲ್ಲಿ ಜ್ಯೋತಿ ಬೆಳಗಿಸುವ ಮೂಲಕ ಉದ್ಘಾಟಿಸಿ ಮಾತನಾಡಿದರು

ನಲಿ–ಕಲಿ ಮುಖ್ಯವಾದುದು ಏಕೆಂದರೆ ಈ ಬಹು–ದರ್ಜೆಯ, ಬಹು–ಹಂತದ, ಚಟುವಟಿಕೆ–ಆಧಾರಿತ ಬೋಧನೆ–ಕಲಿಕೆಯ ಪ್ರಕ್ರಿಯೆಯ ಮೂಲಕ, ಇದು ಮತ್ತೊಂದು ನಿರ್ಣಾಯಕ ನಿರ್ಬಂಧವನ್ನು ಪರಿಹರಿಸುತ್ತದೆ. ಮಕ್ಕಳಿಗೆ ಪ್ರಯೋಗಿಕವಾಗಿ ಸರಳ ಚಟುವಟಿಕೆಗಳನ್ನು ಮಾಡಿಸುವ ಮೂಲಕ ಕ್ಲಿಷ್ಟಾಂಶಗಳನ್ನು ಸುಲಭವಾಗಿ ನೆನಪಿನಲ್ಲಿ ಉಳಿಯುವಂತೆ ಇಂಗ್ಲಿಷ್ ಭಾಷೆಯ ಆಟಗಳನ್ನು ಕಲಿಕಾ ಸಾಮಾಗ್ರಿಗಳನ್ನು ಬಳಸಿಕೊಂಡು ಆಡಿಸಿಬೇಕು ಎಂದರು. ನಲಿ–ಕಲಿಯ ಒಂದು ಟೀಕೆ ಏನೆಂದರೆ, ಅಸ್ತಿತ್ವದಲ್ಲಿರುವ ರಚನೆಯು ಶಿಕ್ಷಕರಿಗೆ ಆಲೋಚನೆ ಮತ್ತು ಪ್ರತಿಬಿಂಬಕ್ಕೆ ಜಾಗವನ್ನು ನೀಡಲಿದೆ. ನಲಿ–ಕಲಿ ಯೋಚಿಸಲು ಮತ್ತು ಪ್ರತಿಬಿಂಬಿಸಲು ಸಹಾಯ ಮಾಡುತ್ತದೆ. ಜನರು ಪ್ರತಿಬಿಂಬಿಸಲು ಸಹಾಯ ಮಾಡುವಲ್ಲಿ ಬರವಣಿಗೆಯು ಒಂದು ಹೆಜ್ಜೆ ಮುಂದಿರುವ ಕಾರಣ, ನಾವು ಶಿಕ್ಷಕರ ತರಗತಿಯ ಅನುಭವಗಳ ಕುರಿತು ಲೇಖನಗಳನ್ನು ಹೊಂದಿರುವ ಸುದ್ದಿಪತ್ರವನ್ನು ಪ್ರಾರಂಭಿಸಬೇಕು ಎಂದರು.

ಈ ಸಂದರ್ಭದಲ್ಲಿ ಬಿ.ಆರ್.ಪಿ.ನಸುರುದ್ದಿನ್ ಸಿಆರ್‌ಪಿಗಳಾದ ವಿಜಯ ಕುಮಾರ್, ಎ.ನರೇಶ, ಮುತ್ತಪ, ಮಂಜುನಾಥ್ ಮುಂತಾದವರು ಇದ್ದರು.

# ಕನ್ನಡ ಸಾಹಿತ್ಯ ಸಮ್ಮೇಳನಕ್ಕೆ ನಾಗೊಂಡಹಳ್ಳಿ ಸುನಿಲ್ ಆಯ್ಕೆ

**ಮಾಲೂರು:** ತಾಲೂಕಿನ ಬಾಳಿಗಾನಹಳ್ಳಿ ಗ್ರಾಮ ಪಂಚಾಯಿತಿ ವ್ಯಾಪ್ತಿಯ ನಾಗೊಂಡಹಳ್ಳಿ ಗ್ರಾಮದ ಉಪನ್ಯಾಸಕ ಯುವ ಕವಿ ಸುನಿಲ್ ಮಂಡ್ಯದಲ್ಲಿ ನಡೆಯಲಿರುವ 87ನೇ ಅಖಿಲ ಭಾರತ ಕನ್ನಡ ಸಾಹಿತ್ಯ ಸಮ್ಮೇಳನದ ಕವಿಗೋಷ್ಠಿಗೆ ಆಯ್ಕೆಯಾಗಿದ್ದಾರೆ.



ಈ ಬಾರಿ ಮಂಡ್ಯದಲ್ಲಿ ಡಿಸೆಂಬರ್ 20,21 ಮತ್ತು 22ರಂದು ನಡೆಯುವ 87 ನೇ ಅಖಿಲ ಭಾರತ ಕನ್ನಡ ಸಾಹಿತ್ಯ ಸಮ್ಮೇಳನದ ಕವಿಗೋಷ್ಠಿಗೆ ನಾಗೊಂಡಹಳ್ಳಿ ಸುನಿಲ್ ಪ್ರಸ್ತುತ ಶಿರಾ ನಗರದ ಪ್ರತಿಷ್ಠಿತ ಪ್ರೆಸಿಡೆನ್ಸಿ ಕಾಲೇಜಿನಲ್ಲಿ ಉಪನ್ಯಾಸಕನಾಗಿ ಸೇವೆ ಸಲ್ಲಿಸುತ್ತಾ ಸಾಹಿತ್ಯ ಕೃಷಿಯಲ್ಲಿ ತೊಡಗಿಸಿಕೊಂಡು ಈಗಾಗಲೇ ಎರಡು ಕೃತಿಗಳನ್ನು ಪ್ರಕಟಗೊಳಿಸಿದ್ದು, ಮೂರನೇ ಕೃತಿ ಕಥಾ ಸಂಕಲನ ಮುದ್ರಣದ ಅಂಚಿನಲ್ಲಿದೆ. ನಾಗೊಂಡಹಳ್ಳಿ ಸುನಿಲ್ ಅವರನ್ನು ಪ್ರೆಸಿಡೆನ್ಸಿ ಸಮೂಹ ಶಿಕ್ಷಣ ಸಂಸ್ಥೆಗಳ ಅಧ್ಯಕ್ಷರು ಹಾಗೂ ವಿಧಾನ ಪರಿಷತ್ತಿನ ಸದಸ್ಯರಾದ ಚಿದಾನಂದ್ ಎಂ ಗೌಡ ಹಾಗೂ ಕಾಲೇಜಿನ ಪ್ರಾಂಶುಪಾಲರಾದ ಸುಬ್ರಹ್ಮಣ್ಯ ಡಿ.ಕೆ, ಮಾಲೂರು ಕಸಾಪ ಅಧ್ಯಕ್ಷ ಎಂ.ವಿ.ಹನುಮಂತಯ್ಯ, ಸಿ.ಲಕ್ಷ್ಮೀನಾರಾಯಣ್, ಎಂ.ಜಿ.ಮಧುಸೂಧನ್, ಎಂ.ಎಡ್.ಪ್ರದೀಪ್ ರೆಡ್ಡಿ, ಕವಿ,ಸಾಹಿತಿ ನ.ಗುರುಮೂರ್ತಿ, ಡಾ.ನಾ.ಮುನಿರಾಜು ಸೇರಿದಂತೆ ಕನ್ನಡಾಭಿಮಾನಿಗಳು, ಕವಿ,ಸಾಹಿತ್ಯಾಸಕ್ತರು ಅಭಿನಂದಿಸಿದ್ದಾರೆ.

# ಅಪರಾಧ ತಡೆ ಮಾಸಾಚರಣೆ ಜಾಗೃತಿಗೆ ಜಾಥಾಕ್ಕೆ ಚಾಲನೆ

**ಮುಳಬಾಗಿಲು:** ನಗರ ಠಾಣೆಯ ಮುಖ್ಯಪೇದೆ ಎಲ್. ಶಿವರಾಜ್ ಮಾತನಾಡಿ, 'ಅಪರಾಧಗಳ ಬಗ್ಗೆ ಜನರಿಗೆ ಜಾಗೃತಿ ಮೂಡಿಸುವುದು, ಅಪರಾಧಗಳು ಆಗದಂತೆ ತಡೆಯಲು ಕೈಗೊಳ್ಳಬೇಕಾದ ಕ್ರಮಗಳ ಕುರಿತು ಅರಿವು ಮೂಡಿಸಲು ಅಪರಾಧ ತಡೆ ಮಾಸಾಚರಣೆ ಆಚರಿಸಲಾಗುತ್ತಿದೆ' ಎಂದು ಹೇಳಿದರು.

ಕೇವಲ ಪೊಲೀಸರಿಂದ ಅಪರಾಧಗಳ ತಡೆ ಸಾಧ್ಯವಿಲ್ಲ. ಇದಕ್ಕೆ ಸಾರ್ವಜನಿಕರ ಸಹಕಾರವೂ ಮುಖ್ಯ.ಈ ಹಿನ್ನೆಲೆಯಲ್ಲಿ ಸಾರ್ವಜನಿಕರಿಗೆ ಜಾಗೃತಿ ಮೂಡಿಸಲು ಪ್ರತಿ ವರ್ಷ ಡಿಸೆಂಬರ್ ಮಾಹೆಯನ್ನು ಅಪರಾಧ ಮಾಸಾಚರಣೆಯನ್ನಾಗಿ ಆಚರಿಸಲಾಗುತ್ತದೆ ಎಂದರು.

ಅಪರಾಧಗಳು ನಡೆದ ಮೇಲೆ ತನಿಖೆ ನಡೆಸುವುದಕ್ಕಿಂತ, ಆಪರಾಧ ಆಗದಂತೆ ನೋಡಿಕೊಳ್ಳುವುದು ಉತ್ತಮ. ಈ ತಿಂಗಳಿನಲ್ಲಿ ಆಟೋ ಚಾಲಕರಿಗೆ ಕಾರ್ ಚಾಲಕರಿಗೆ ಹಾಗೂ ಶಾಲಾ ಕಾಲೇಜುಗಳಲ್ಲಿ ಉಪನ್ಯಾಸ ಏರ್ಪಡಿಸುವುದು, ಕರಪತ್ರಗಳು ಮತ್ತು ಸಾರ್ವಜನಿಕ ಸಭೆಗಳ ಮೂಲಕ ಸಾರ್ವಜನಿಕರಿಗೆ ಮಾಹಿತಿ ನೀಡುವ ಕಾರ್ಯಕ್ರಮಗಳನ್ನು ಕೈಗೊಳ್ಳಲಾಗುತ್ತದೆ ಎಂದರು.

ಯಾವುದೇ ಅಪರಾಧವನ್ನು ಕಂಡಿದ್ದ ಸಂದರ್ಭದಲ್ಲಿ ಧೈರ್ಯವಾಗಿ ಮುಂದೆ ಬಂದು ಸಾಕ್ಷಿ ಹೇಳಬೇಕು. ಒಂದು ವೇಳೆ ಹೀಗಾಗದಿದ್ದರೆ, ಸಾಕ್ಷ್ಯಾಧಾರಗಳ ಕೊರತೆಯಿಂದ ತಪ್ಪಿತಸ್ಥರು ತಪ್ಪಿಸಿಕೊಂಡು ಮತ್ತೆ ಮತ್ತೆ ಅಪರಾಧ ಚಟುವಟಿಕೆಗಳಲ್ಲಿ ತೊಡಗಲಿದ್ದಾರೆ ಎಂದರು.

ನಗರ ನಿವಾಸಿಗಳು ಮನೆಗೆ ಬೀಗ ಹಾಕಿ ಬೇರೆ ಊರುಗಳಿಗೆ ತೆರಳುವಾಗ ಪೊಲೀಸ್ ಠಾಣೆಗೆ ಲಿಖಿತ ಮಾಹಿತಿ ನೀಡಬೇಕು. ಅಥವಾ ಗೃಹ ರಕ್ಷಕ ತಂತ್ರಾಂಶದಲ್ಲಿ ಬೀಗ ಹಾಕುವ ಮನೆ ಇರುವ ಸ್ಥಳದ ಮಾಹಿತಿ ಸೇರಿಸಬೇಕು ಎಂದು ಮನವಿ ಮಾಡಿದರು.

ನಗರ ಪೊಲೀಸ್ ಠಾಣೆಯ ಮುಖ್ಯಪೇಟೆ ಸುರೇಶ್ ಮಾತನಾಡಿ, ವಿದ್ಯಾರ್ಥಿಗಳು, ಯುವಜನರು ಪೊಲೀಸರಿಗೆ ಸಹಕಾರ ನೀಡಬೇಕು. ಪೊಲೀಸರನ್ನು ಕಂಡು ಭಯಪಡುವ ಮತ್ತು ಪೊಲೀಸ್ ಠಾಣೆಗಳಿಗೆಹೋದರೆ ಅವಮಾನ ಎನ್ನುವ ಕಾಲ ಬದಲಾಗಿದೆ ಎಂದು ಹೇಳಿದರು.

ಪೊಲೀಸರು ಜನಸ್ನೇಹಿಗಳಾಗಿ ಸದಾ ಸಾರ್ವಜನಿಕರ





# ಕಮಲಿ ಈಗಲೂ ಅಪ್ಪಟ ಸುಂದರಿ



ಯಾರೇ ನೀನು ಚೆಲುವೆ ಸಿನಿಮಾಯಾರಿಗೆ ತಾನೇ ಗೊತ್ತಿಲ್ಲ ಹೇಳಿ.. ಯಾಕಂದ್ರೆ ಹಾಡುಗಳ ಮೂಲಕ ಹಾಗೂ ಅದ್ಭುತ ಕಥೆಯ ಮೂಲಕ ಕನ್ನಡಿಗರ ಮನಸ್ಸು ಗೆದ್ದಂತಹ ಸಿನಿಮಾ ಇದು. ಈ ಸಿನಿಮಾದ ಪ್ರತಿಯೊಂದು ಪಾತ್ರಗಳು, ಹಾಡುಗಳು, ಕ್ಲೈಮ್ಯಾಕ್ಸ್ ಎಲ್ಲವೂ ಇಂದಿಗೂ ಜೀವಂತ.

ಅದರಲ್ಲೂ ಕುಶಲವೇ ಕ್ಷೇಮವೇ ಸೌಖ್ಯವೇ ಹಾಡನ್ನು ಇವತ್ತಿಗೂ ಜನ ತಮ್ಮ ಪ್ರೇಮಿಯನ್ನು ನೆನಪಿಸಿಕೊಂಡು ಹಾಡುತ್ತಿರೋದನ್ನು ನೋಡಬಹುದು. ಅಷ್ಟೇ ಅಲ್ಲ, ಸಿನಿಮಾ ನಾಯಕಿ ಕಮಲಿ ಪಾತ್ರದಲ್ಲಿ ಮಿಂಚಿದ ಸಂಗೀತ ಮಾಧವ ನಾಯರ್‌ರನ್ನು ಇಂದಿಗೂ ನಮ್ಮ ಕನ್ನಡಿಗರು ಕಮಲಿ ಅಂತಾನೇ ನೆನಪಿಟ್ಟುಕೊಂಡಿದ್ದಾರೆ. ಅಷ್ಟೊಂದು ಅದ್ಭುತವಾದ, ಹಾಗೂ ಅದ್ಭುತವಾಗಿ ನಟಿಸಿದಂತಹ ಸಿನಿಮಾ.

ಕ್ರೇಜಿ ಸ್ಟಾರ್ ರವಿಚಂದ್ರನ್ ಅವರ ಶಾಂತಿ ಕ್ರಾಂತಿ ಸಿನಿಮಾ ಮೂಲಕ ಕನ್ನಡಕ್ಕೆ ಬಾಲ ನಟಿಯಾಗಿ ಎಂಟ್ರಿ ಕೊಟ್ಟ ಸಂಗೀತ, ನಂತರ ಇದೇ ಕ್ರೇಜಿ ಸ್ಟಾರ್ ಗೆ ನಾಯಕಿಯಾಗಿ ಯಾರೇ ನೀನು ಚೆಲುವೆ ಸಿನಿಮಾದಲ್ಲಿ ಸಂಗೀತಾ ನಟಿಸಿದ್ದರು. ನಂತರ ಶಿವರಾಜ್ ಕುಮಾರ್ ಜೊತೆ ಯಾರೆ ನೀ ಅಭಿಮಾನಿ ಸಿನಿಮಾದಲ್ಲೂ ನಟಿಸಿದ್ದಾರೆ.


ಕನ್ನಡದಲ್ಲಿ ಮೂರು ಸಿನಿಮಾಗಳಲ್ಲಿ ನಟಿಸಿದ ನಂತರ ನಟಿ ಮತ್ತೆ ಕನ್ನಡದಲ್ಲಿ ಕಾಣಿಸಿಕೊಳ್ಳಲೇ ಇಲ್ಲ. 1978 ರಿಂದ 2000ದ ವರೆಗೆ ಸಿನಿಮಾಗಳಲ್ಲಿ ಆಕ್ಟೀವ್ ಆಗಿದ್ದ ಸಂಗೀತಾ, ನಂತರ ಸಿನಿಮಾಟಗ್ರಾಫರ್ ಎಸ್ ಸರವಣನ್ ಅವರನ್ನು ಮದುವೆಯಾಗಿ ಸಿನಿಮಾದಿಂದ ದೂರ ಉಳಿದಿದ್ದರು.

ಇದೀಗ ಮತ್ತೆ ಮಲಯಾಲಂ ಸಿನಿಮಾಗೆ ರೀ ಎಂಟ್ರಿ ಕೊಟ್ಟಿದ್ದಾರೆ. ಮಲಯಾಲದಲ್ಲಿ ಕಳೆದ ವರ್ಷ ಚಾವೆರ್ ಹಾಗೂ ಈ ವರ್ಷ ಪರಾಕ್ರಮಮ್, ಆನಂದ್ ಶ್ರೀಬಾಲ ಮೊದಲಾದ ಸಿನಿಮಾಗಳಲ್ಲಿ ನಟಿಸಿದ್ದಾರೆ. ಸದ್ಯಕ್ಕಂತೂ ಸೋಶಿಯಲ್ ಮೀಡಿಯಾದಲ್ಲಿ ಇವರ ಫೋಟೊಗಳು ವೈರಲ್ ಆಗುತ್ತಿವೆ.

ಕನ್ನಡಿಗರಂತೂ ಸಂಗೀತ ಮಾಧವ ನಾಯರ್ ಫೋಟೋ, ವಿಡಿಯೋಗಳನ್ನು ಶೇರ್ ಮಾಡಿ, ಕುಶಲವೇ ಕ್ಷೇಮವೇ ಹಾಡನ್ನು ಹಾಕಿ ಸೋಶಿಯಲ್ ಮೀಡೀಯಾದಲ್ಲಿ ವೈರಲ್ ಮಾಡುತ್ತಿದ್ದಾರೆ. ಮತ್ತೆ ಕನ್ನಡಕ್ಕೆ ಬರುವಂತೆ ಕೇಳಿಕೊಳ್ಳುತ್ತಿದ್ದಾರೆ.

ಸಂಗೀತ ಶೃಂಗೇರಿ ಅಂದು ಅಂದ್ರೆ 14 ವರ್ಷದ ಹಿಂದೆ ಕನ್ನಡ ಸಿನಿಮಾದಲ್ಲಿ ನಟಿಸುವಾಗ ಹೇಗಿದ್ದರೋ, ಅಷ್ಟೇ ಯಂಗ್ ಆಗಿದ್ದಾರೆ ಇವತ್ತಿಗೂ, ಆದರೆ ಅಂದಿಗಿಂತಲೂ ಇಂದು ಹೆಚ್ಚು ಸುಂದರಿಯಾಗಿದ್ದಾರೆ ಅಂದ್ರೆ ತಪ್ಪಲ್ಲ, ಅವರ ನಗು, ಮುಗ್ಧ ಸೌಂದರರ್ಯಕ್ಕೆ ಅಭಿಮಾನಿಗಳು ಮನಸೋತಿದ್ದಾರೆ.

# ಸ್ವೀಟ್ಸ್ ಅಂದ್ರೆ ಪ್ರಾಣ



ರಾಣಾ ದಗ್ಗುಬಾಟಿ ಟಾಕ್ ಶೋ ಈಗ ಫೇಮಸ್ ಆಗ್ತಿದೆ. ನಾನಿ, ಸಿದ್ದು, ನಾಗಚೈತನ್ಯ ಈಗಾಗ್ಲೇ ಶೋಗೆ ಬಂದಿದ್ದಾರೆ. ಈಗ ರಾಜಮೌಳಿ, ಆರ್‌ಜಿವಿ ಬಂದಿದ್ದಾರೆ. ಅಮೆಜಾನ್ ಪ್ರೈಮ್‌ನಲ್ಲಿ ಈ ಶೋ ಇದೆ. ರಾಜಮೌಳಿ ತಮ್ಮ ಸಿನಿಮಾ, ಪರ್ಸನಲ್ ವಿಷಯಗಳ ಬಗ್ಗೆ ಮಾತಾಡಿದ್ದಾರೆ.

ರಾಜಮೌಳಿ ಅಂದ್ರೆ ಬಾಹುಬಲಿ, ಆರ್‌ಆರ್‌ಆರ್, ಮಗಧೀರ ಸಿನಿಮಾಗಳು ನೆನಪಾಗುತ್ತೆ. ಈಗ ಮಹೇಶ್ ಜೊತೆ ಸಿನಿಮಾ ಮಾಡ್ತಾ ಟ್ರೆಂಡಿಂಗ್‌ನಲ್ಲಿದ್ದಾರೆ. ರಾಜಮೌಳಿ ಫ್ಯಾಮಿಲಿ ಬಗ್ಗೆ ಜನರಿಗೆ ಗೊತ್ತು. ರಾಣಾ ಟಾಕ್ ಶೋನಲ್ಲಿ ರಾಜಮೌಳಿ ತಮ್ಮ ಲವ್ ಸ್ಟೋರಿ, ಸ್ವೀಟ್ಸ್ ಪ್ರೀತಿ ಬಗ್ಗೆ ಹೇಳಿದ್ದಾರೆ.

"ನನಗೆ ಸ್ವೀಟ್ಸ್ ಅಂದ್ರೆ ಪ್ರಾಣ. ಚಿಕ್ಕಂದಿನಿಂದಲೂ ಹುಚ್ಚು. ಸ್ಟೋರಿ ಡಿಸ್ಕಷನ್‌ನಲ್ಲಿ ಸ್ವೀಟ್ಸ್ ತಿಂತೆನೆ. ಬ್ರೌನಿ, ಐಸ್‌ಕ್ರೀಮ್ ನನ್ನ ಫೇವರಿಟ್" ಅಂದ್ರು ರಾಜಮೌಳಿ.

ರಾಜಮೌಳಿಗೆ ಒಬ್ಬಟ್ಟು ಅಂದ್ರೂ ಇಷ್ಟ. ಆದ್ರೆ ಕೆಲವು ಕಂಡಿಷನ್ಸ್ ಇವೆ. "ಒಬ್ಬಟ್ಟು ಕಂದು ಬಣ್ಣದಲ್ಲಿರಬೇಕು. ದಪ್ಪಗಿರಬೇಕು, ಮೇಲೆ ಪದರ ತೆಳ್ಳಗಿರಬೇಕು. ಮಡಚಿರಬೇಕು. ಒಳಗೆ ತುಪ್ಪ, ಸಕ್ಕರೆ ಇರಬೇಕು" ಅಂದ್ರು.

"ನಾನು ಆಕ್ಷನ್ ಸಿನಿಮಾ ಮಾಡಿದ್ರೂ, ಮಿಸ್ಸಮ್ಮ ನನ್ನ ಫೇವರಿಟ್. ಅದರಲ್ಲಿ ರೊಮ್ಯಾನ್ಸ್ ಇದೆ. ನನ್ನ ಸ್ಟೋರಿಗಳಲ್ಲಿ ರಿವೆಂಜ್ ಇರುತ್ತೆ. ಅದು ಸ್ಟ್ರಾಂಗ್ ಫೀಲಿಂಗ್" ಅಂದ್ರು ರಾಜಮೌಳಿ.

# 'ಚಿತ್ರಂಗಕ್ಕೆ ಬರಬೇಡಿ'

## ಸೂಚನೆ ಕೊಟ್ಟಿದ್ದ ಸಂಜಯ್ ದತ್



ಐಶ್ವರ್ಯಾ ರೈ ಅವರು ಚಿತ್ರರಂಗದಲ್ಲಿ ಸಾಕಷ್ಟು ಹೆಸರು ಮಾಡಿದ್ದಾರೆ. ಮಾಡೆಲಿಂಗ್ ಕ್ಷೇತ್ರದಲ್ಲಿ ಇದ್ದ ಅವರು ನಂತರ ಬಾಲಿವುಡ್‌ಗೆ ಪಾದಾರ್ಪಣೆ ಮಾಡಿದರು. ಈಗ ಅವರು ಬಾಲಿವುಡ್‌ನಲ್ಲಿ ಸಾಕಷ್ಟು ಹೆಸರು ಮಾಡಿದ್ದಾರೆ. ಅವರು ಬಚ್ಚನ್ ಕುಟುಂಬದ ಸೊಸೆ ಕೂಡ ಹೌದು. ಈ ರೀತಿ ಹೆಸರು ಮಾಡಿರೋ ಅವರು ಐಶ್ವರ್ಯಾ ಅವರು ಸಾಕಷ್ಟು ಶ್ರಮ ಹಾಕಿದ್ದಾರೆ. ಆದರೆ, ಅವರು ಚಿತ್ರರಂಗಕ್ಕೆ ಬರಬಾರದು ಎಂಬುದು ಸಂಜಯ್ ದತ್ ಅವರ ಕೋರಿಕೆ ಆಗಿತ್ತು. ಸಂದರ್ಶನ ಒಂದರಲ್ಲಿ ಅವರು ಈ ಬಗ್ಗೆ ಮಾತನಾಡಿದ್ದರು ಎಂಬ ವಿಚಾರ ನಿಮಗೆ ಗೊತ್ತೇ?

ಮ್ಯಾಗಜೀನ್ ಫೋಟೋಶೂಟ್ ಸಮಯದಲ್ಲಿ ಐಶ್ವರ್ಯಾ ರೈ ಮೊದಲು ಸಂಜಯ್ ದತ್ ಅವರನ್ನು ಭೇಟಿಯಾದರು. ಆ ಸಮಯದಲ್ಲಿ ಅವರು ನಟಿಯಾಗಿರಲಿಲ್ಲ. ಐಶ್ವರ್ಯಾ ರೈ ಸೌಂದರ್ಯ ನೋಡಿದ ಸಂಜಯ್ ದತ್ ಫಿದಾ ಆದರು. ಹಳೆಯ ಸಂದರ್ಶನವೊಂದರಲ್ಲಿ, ಸಂಜಯ್ ದತ್ ಅವರು ಐಶ್ವರ್ಯಾ ಅವರೊಂದಿಗಿನ ಮೊದಲ ಭೇಟಿಯ ಬಗ್ಗೆ ಮಾತನಾಡಿದ್ದರು. ಐಶ್ವರ್ಯಾ ಅವರನ್ನು ನೋಡಿದ ಸಂಜಯ್ ದತ್, 'ಯಾರು ಈ ಸುಂದರ ಹುಡುಗಿ' ಎಂದು ಕೇಳಿದ್ದರಂತೆ.

ಆ ವೇಳೆ ಐಶ್ವರ್ಯಾ ರೈಗೆ ಸಂಜಯ್ ದತ್ ಸಲಹೆ ನೀಡಿದ್ದರು. 'ನೀವು ಮಾಡೆಲಿಂಗ್ ವೃತ್ತಿಯನ್ನು ಮುಂದುವರಿಸಿ. ಚಿತ್ರರಂಗದಿಂದ ದೂರವಿರಿ' ಎಂದು ಸೂಚಿಸಿದ್ದರು. ವರದಿಗಳ ಪ್ರಕಾರ, ಐಶ್ವರ್ಯಾ ಅವರಲ್ಲಿ ಕಂಡ ಮುಗ್ಧತೆ ಸಂಜಯ್ ದತ್ ಅವರ ಹೃದಯವನ್ನು ಗೆದ್ದಿತ್ತು. ಹೀಗಾಗಿ, 'ನೀವು ಚಿತ್ರರಂಗದಿಂದ ದೂರ ಇರಿ. ಈ ಕ್ಷೇತ್ರವು ನಿಮ್ಮನ್ನು ಬದಲಾಯಿಸುತ್ತದೆ. ಇಂಡಸ್ಟ್ರಿಯಲ್ಲಿನ ಸವಾಲುಗಳನ್ನು ಎದುರಿಸಿದಾಗ ನಿಮ್ಮ ಚಾರ್ಮ್ ಮತ್ತು ಮ್ಯಾಜಿಕ್ ಕಡಿಮೆಯಾಗುತ್ತದೆ' ಎಂದು ಸಂಜಯ್ ದತ್ ಹೇಳಿದ್ದರು.

'ನೀವು ಈ ಗ್ಲಾಮರ್ ಉದ್ಯಮಕ್ಕೆ ಕಾಲಿಟ್ಟಾಗ, ಈ ಉದ್ಯಮವು ನಿಮ್ಮನ್ನು ಬದಲಾಯಿಸುತ್ತದೆ. ಅದು ನಿಮ್ಮನ್ನು ಪ್ರಬುದ್ಧರನ್ನಾಗಿ ಮಾಡುತ್ತದೆ, ನಿಮ್ಮ ಮುಗ್ಧತೆಯನ್ನು ಕಳೆದುಕೊಳ್ಳುತ್ತೀರಿ' ಎಂದು ಸಂಜಯ್ ದತ್ ಆಗ ಹೇಳಿದ್ದರು. ಅವರು ಹೇಳಿದ್ದು ನಿಜವಾಗಿದೆಯೋ ಇಲ್ಲವೋ, ಚಿತ್ರರಂಗಕ್ಕೆ ಒಂದೊಳ್ಳೆಯ ನಟಿ ಸಿಕ್ಕಿದ್ದಾರೆ. ಐಶ್ವರ್ಯಾ ಅವರು ಸ್ಟಾರ್ ನಟಿಯಾಗಿ ಮೆರೆದಿದ್ದಾರೆ. ಅವರ ಬೇಡಿಕೆ ಹೆಚ್ಚುತ್ತಲೇ ಇದೆ. ಆದರೆ, ಅವರು ಮೊದಲಿನಷ್ಟು ಚಿತ್ರರಂಗದಲ್ಲಿ ಆಕ್ಟೀವ್ ಆಗಿಲ್ಲ.





# ತ್ರಿಷಾರಿಂದ ದಳಪತಿ ಕುಟುಂಬದಲ್ಲಿ

ಟಾಲಿವುಡ್ ಹಾಗೂ ಕಾಲಿವುಡ್‌ನಲ್ಲಿ ದಶಕಗಳಿಂದಲೂ ನಾಯಕಿ ಪಾತ್ರಗಳನ್ನು ಮಾಡುತ್ತಾ ಭದ್ರ ನೆಲೆ ಕಂಡಿರುವ ನಟಿ ತ್ರಿಷಾ ಕೃಷ್ಣನ್ ಅವರು ತೆಲುಗಿನ ವರ್ಷಂ ಸಿನಿಮಾದ ಮೂಲಕ ಚಿತ್ರರಂಗಕ್ಕೆ ಬಂದವರು, ಪ್ರಭಾಸ್, ಮಹೇಶ್, ಪವನ್, ಚಿರಂಜೀವಿ, ವೆಂಕಟೇಶ್, ನಾಗಾರ್ಜುನ ಮುಂತಾದ ಎಲ್ಲಾ ಟಾಪ್ ಹೀರೋಗಳ ಜೊತೆ ತ್ರಿಷಾ ಸಿನಿಮಾಗಳನ್ನು ಮಾಡಿದ್ದು, ಸಿನಿಮಾ ರಂಗದಲ್ಲಿ ಮತ್ತೆಂದು ಅವರು ಹಿಂದಿರುಗಿ ನೋಡಿಲ್ಲ, ಇಂತಹ ತ್ರಿಷಾ ಅವರು ಸಿನಿಮಾವಲ್ಲದೇ ಬೇರೆಯುದೇ ಕಾರಣಕ್ಕೆ ಸುದ್ದಿಯಾಗಿದ್ದಾರೆ.

ದಶಕಗಳಿಂದ ತ್ರಿಷಾ ಸ್ಟಾರ್ ನಾಯಕಿ. ತೆಲುಗಿನಲ್ಲಿ ವರ್ಷಂ ಚಿತ್ರದ ಮೂಲಕ ಸ್ಟಾರ್ ಆದ ತ್ರಿಷಾ, ನಂತರ ಹಿಂತಿರುಗಿ ನೋಡಲಿಲ್ಲ. ಪ್ರಭಾಸ್, ಮಹೇಶ್, ಪವನ್, ಚಿರಂಜೀವಿ, ವೆಂಕಟೇಶ್, ನಾಗಾರ್ಜುನ ಮುಂತಾದ ಎಲ್ಲಾ ಟಾಪ್ ಹೀರೋಗಳ ಜೊತೆ ತ್ರಿಷಾ ಸಿನಿಮಾಗಳನ್ನು ಮಾಡಿದ್ದಾರೆ. ತಮಿಳಿನಲ್ಲೂ ತ್ರಿಷಾ ಟಾಪ್ ನಾಯಕಿ. ನಲವತ್ತರ ವಯಸ್ಸಿನಲ್ಲೂ ತ್ರಿಷಾ ನಾಯಕಿಯಾಗಿ ಅವಕಾಶಗಳನ್ನು ಪಡೆಯುತ್ತಿದ್ದಾರೆ.



ಕೆರಿಯರ್ ಆರಂಭದಿಂದಲೂ ತ್ರಿಷಾ ಬಗ್ಗೆ ಒಂದಲ್ಲ ಒಂದು ಗಾಸಿಪ್‌ಗಳು ಬರುತ್ತಲೇ ಇವೆ. ಇತ್ತೀಚೆಗೆ ಅವರ ಬಗ್ಗೆ ಸಂಚಲನ ಸೃಷ್ಟಿಸುವ ಗಾಸಿಪ್‌ಗಳು ವೈರಲ್ ಆಗುತ್ತಿವೆ.

ಮದುವೆಯಾದ ಸ್ಟಾರ್ ಹೀರೋ ಜೊತೆ ತ್ರಿಷಾ ಸಂಬಂಧ ಹೊಂದಿದ್ದಾರೆ ಎಂಬ ರೀತಿ ಪ್ರಚಾರ ಕೆಲಕಾಲದಿಂದ ನಡೆಯುತ್ತಿದೆ. ಆದರೆ ಇವು ಕೇವಲ ಗಾಸಿಪ್‌ಗಳು. ಆದರೆ ಈ ಗಾಸಿಪ್‌ಗಳಿಗೆ ಪುಷ್ಟಿ ನೀಡುವಂತೆ ಕೆಲವು ಘಟನೆಗಳು ನಡೆಯುತ್ತಿವೆ. ಆ ಹೀರೋ ಬೇರೆ ಯಾರೂ ಅಲ್ಲ, ದಳಪತಿ ವಿಜಯ್.

ತ್ರಿಷಾ ಮತ್ತು ವಿಜಯ್ ಒಟ್ಟಿಗೆ ಗಿಲ್ಲಿ, ತಿರುಪ್ಪಾಚಿ, ಲಿಯೋ ಮುಂತಾದ ಹಲವು ಚಿತ್ರಗಳಲ್ಲಿ ನಟಿಸಿದ್ದಾರೆ. ಇದರಿಂದ ಇವರಿಬ್ಬರ ನಡುವೆ ಉತ್ತಮ ಗೆಳೆತನವಿದೆ. ಆಗಾಗ್ಗೆ ತ್ರಿಷಾ ವಿಜಯ್ ಮೇಲಿನ ಅಭಿಮಾನವನ್ನು ತೋರಿಸುತ್ತಲೇ ಇರುತ್ತಾರೆ. ಇತ್ತೀಚೆಗೆ ಇವರ ಸಾಮೀಪ್ಯ ಹೆಚ್ಚಾಗಿದೆ ಇಬ್ಬರು ಬಹಳ ಆಪ್ತರಾಗಿದ್ದಾರೆ ಎಂದು ತಮಿಳು ಚಿತ್ರರಂಗದಲ್ಲಿ ಗಾಸಿಪ್‌ಗಳು ಕೇಳಿ ಬರುತ್ತಿವೆ.

ತ್ರಿಷಾ ಕಾರಣದಿಂದ ವಿಜಯ್ ವೈಯಕ್ತಿಕ ಜೀವನದಲ್ಲೂ ಸಮಸ್ಯೆಗಳು ಬಂದಿವೆ ಎಂಬ ಸುದ್ದಿಗಳು ಹರಿದಾಡುತ್ತಿವೆ. ವಿಜಯ್ ಮತ್ತು ಅವರ ಪತ್ನಿ ಸಂಗೀತಾ ನಡುವೆ ಭಿನ್ನಾಭಿಪ್ರಾಯಗಳು ಉಂಟಾಗಿವೆ ಎಂಬ ಊಹಾಪೋಹಾಗಳು ಕೇಳಿ ಬಂದಿವೆ.

ಇದಕ್ಕೆ ಪುಷ್ಠಿ ನೀಡುವಂತೆ ಇತ್ತೀಚೆಗೆ ದಳಪತಿ ವಿಜಯ್ ಗೋವಾದಲ್ಲಿ ಕೀರ್ತಿ ಸುರೇಶ್ ಮದುವೆಗೆ ಹಾಜರಾಗಿದ್ದರು. ಈ ಮದುವೆಗೆ ವಿಜಯ್ ಒಬ್ಬರೇ ಹೋಗಿಲ್ಲ. ವಿಜಯ್ ಮತ್ತು ತ್ರಿಷಾ ಇಬ್ಬರೂ ವಿಜಯ್ ಅವರ ಖಾಸಗಿ ಜೆಟ್‌ನಲ್ಲಿ ಗೋವಾಕ್ಕೆ ಹೋಗಿದ್ದಾರೆ ಎಂದು ತಿಳಿದು ಬಂದಿದೆ.

ಇದಕ್ಕೆ ಸಂಬಂಧಿಸಿದ ವಿಮಾನ ನಿಲ್ದಾಣದ ದೃಶ್ಯಗಳು ಸಹ ಸಾಮಾಜಿಕ ಮಾಧ್ಯಮಗಳಲ್ಲಿ ಟ್ರೆಂಡ್ ಆಗುತ್ತಿವೆ. ಇವರಿಬ್ಬರ ನಡುವೆ ಏನೂ ಇಲ್ಲದಿದ್ದರೆ ಖಾಸಗಿ ಜೆಟ್‌ನಲ್ಲಿ ಹೋಗಬೇಕಾದ ಅಗತ್ಯವೇನಿತ್ತು ಎಂದು ನೆಟ್ಟಿಗರು ಪ್ರಶ್ನಿಸುತ್ತಿದ್ದಾರೆ. ವಿಜಯ್ ಪತ್ನಿ ಸಂಗೀತಾಗೆ ನ್ಯಾಯ ಸಿಗಬೇಕು ಎಂದು ತ್ರಿಷಾ ವಿರುದ್ಧ ಕೆಲವರು ಟ್ರೋಲ್ ಮಾಡುತ್ತಿದ್ದಾರೆ.

ಈ ಗಾಸಿಪ್‌ಗಳು ಎಲ್ಲಿಗೆ ಹೋಗಿ ನಿಲ್ಲುತ್ತವೆ ಎಂದು ನೋಡಬೇಕು. ತ್ರಿಷಾ ಲಿಯೋ ಚಿತ್ರದಲ್ಲಿ ವಿಜಯ್ ಜೊತೆ ನಟಿಸಿದ್ದಾರೆ. ನಂತರ ವಿಜಯ್ ನಟಿಸಿದ ದಿ ಗೋಟ್ ಚಿತ್ರದಲ್ಲಿ ತ್ರಿಷಾ ಒಂದು ವಿಶೇಷ ಹಾಡನ್ನು ಮಾಡಿದ್ದಾರೆ.

ವೈಯಕ್ತಿಕವಾಗಿ ಮತ್ತು ವೃತ್ತಿಪರವಾಗಿ ವಿಜಯ್ ಮತ್ತು ತ್ರಿಷಾ ನಡುವಿನ ಬಾಂಧವ್ಯ ಹೆಚ್ಚುತ್ತಿದೆ ಎಂಬುದು ಸಂಚಲನ ಮೂಡಿಸಿದೆ. ವಿಜಯ್ ರಾಜಕೀಯಕ್ಕೆ ಪ್ರವೇಶಿಸುತ್ತಿರುವ ಹಿನ್ನೆಲೆಯಲ್ಲಿ ಇಂತಹ ಗಾಸಿಪ್‌ಗಳು ಯಾವ ದಿಕ್ಕಿನಲ್ಲಿ ಸಾಗುತ್ತವೆ ಎಂದು ನೋಡಬೇಕು.

ಪ್ರಕಾಶಕ– ಸಂಪಾದಕ ಹಾಗೂ ಮಾಲೀಕ ಲಕ್ಷ್ಮೀಪ್ರಸನ್ನ ಆರ್.ಹೆಚ್. ಅವರಿಂದ #1652/6, 20ನೇ ತಿರುವು, 8ನೇ ಮುಖ್ಯರಸ್ತೆ, ಸಿ ಬ್ಲಾಕ್, ಸಹಕಾರ ನಗರ, ಬೆಂಗಳೂರು–560092 ಇಲ್ಲಿ ಪ್ರಕಟಗೊಂಡು, ಮುದ್ರಣ: ಪಿ.ಎನ್.ಪ್ರಿಂಟರ್ಸ್, ನರಸಿಪಾಳ್ಯ, ಅರಿಶಿಣಕುಂಟೆ(ಪೋ.), ನೆಲಮಂಗಲ, ಬೆಂಗಳೂರು–562123 ಇಲ್ಲಿ ಮುದ್ರಿಸಲ್ಪಟ್ಟಿದೆ. **RNI.KAR/KAN/2009/31934,** ದೂರವಾಣಿ: **9448074878**
Edited, Published and Owned by Laxmiprasanna R.H, #1652/6, 20th Cross, 8th Main, C Block, SahakarNagar, Bangalore-560092. Printed by P N Printers, Narasipalya, Arishinakunte(Post), Kasaba(hobali), Nelamangala, Bengaluru-562123
**RNI.KAR/KAN/2009/31934.**VOLUME-16/ISSUE-25 Email-mussanje2010@gmail.com, Phone: **9448074878**